ಸಂಪುಟ: 21, ಸಂಚಿಕೆ: 243, ಪುಟಗಳು: 8, ಮಂಗಳವಾರ, 11 ಜೂನ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಮಾನವ ದೇಹದಲ್ಲಿರುವ ಆತ್ಮವೊಂದೇ ಪೂಜೆಗೆ ಅರ್ಹವಾದ ದೇವರು.
। ಸ್ವಾಮಿ ವಿವೇಕಾನಂದ

## ಪಂಚಾಂಗ

(ಮಂಗಳವಾರ 11, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಶುಕ್ಲ ಪಕ್ಷ,
- ಪಂಚಮಿ: ತಿಥಿ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

## ಸಂಕ್ಷಿಪ್ತ ಸುದ್ದಿ

### ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಒಂದೇ ದಿನ ಬಾಕಿ: ಇನ್ಮೇಲೆ ಬೀಳುತ್ತೆ ದಂಡ..!



**ಬೆಂಗಳೂರು:** ವಾಹನ ಸವಾರರ ನಿರಾಶಕ್ತಿಗೆ ಸಾರಿಗೆ ಇಲಾಖೆ ದಂಡಾಸ್ತ್ರದ ಚಾಟಿ ಬೀಸಲು ಮುಂದಾಗಿದೆ. ಹೌದು, 2019 ಕ್ಕಿಂತ ಮೊದಲ ಕೊಂಡುಕೊಂಡ ವಾಹನಗಳಿಗೆ ಸಾರಿಗೆ ಇಲಾಖೆ ಹೆಚ್‌ಎಸ್‌ಆರ್‌ಪಿ ಕಡ್ಡಾಯ ರೂಲ್ಸ್ ಜಾರಿ ಮಾಡಿದೆ. ಪದೇ ಪದೇ ಡೆಡ್ ಲೈನ್ ನೀಡಿದ್ರೂ, ವಾಹನ ಸವಾರರ ಮಾತ್ರ ಡೋಂಟ್ ಕೇರ್ ಎನ್ನುತ್ತಿದ್ದಾರೆ. ಹೀಗಾಗಿ ವಾಹನಗಳಿಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಜೂನ್-12 ಕ್ಕೆ ಅಂತಿಮ ಡೆಡ್‌ಲೈನ್ ನೀಡಲಾಗಿದೆ. ಪುಟ 2

### ಜೈಲಿನಲ್ಲಿ ನಿದ್ದೆಯಿಲ್ಲದೆ ರಾತ್ರಿ ಕಳೆದ ಪ್ರಜ್ವಲ್



**ಬೆಂಗಳೂರು:** ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನದ ಮಾಜಿ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣಗೆ ನಿನ್ನೆ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ. ಎಸ್‌ಐಟಿ ಕಸ್ಟಡಿ ಅವಧಿ ಮುಗಿದ ಹಿನ್ನೆಲೆ ಪ್ರಜ್ವಲ್ ರೇವಣ್ಣನನ್ನು ಕೋರ್ಟ್‌ಗೆ ಹಾಜರು ಪಡಿಸಲಾಗಿತ್ತು. ಇದೀಗ ಬೆಂಗಳೂರಿನ 42ನೇ ಎಸಿಎಂ ನ್ಯಾಯಾಲಯವು ಜೂನ್ 24 ರ ವರೆಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದೆ.

ಪ್ರಜ್ವಲ್ ರೇವಣ್ಣಗೆ ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದ ನಂತರ ಸೆಂಟ್ರಲ್ ಜೈಲಿಗೆ ಕರೆತರಲಾಗಿತ್ತು. ನಿನ್ನೆ ಸೆಂಟ್ರಲ್ ಜೈಲಿನಲ್ಲಿ ಪ್ರಜ್ವಲ್ ಒಂದು ರಾತ್ರಿ ಕಳೆದಿದ್ದು, ನಿದ್ದೆಯಿಲ್ಲದೇ ಒದ್ದಾಡಿದ್ದಾರೆ, ಪುಟ 2




### ಚಾಲಕನ ತಲೆಗೆ ಗುಂಡು ತಗುಲಿದ್ದು ನೋಡಿದ್ದೆವು, ನಾವೂ ಕೂಡ ಸತ್ತಂತೆ ನಟಿಸಿದ್ದೆವು

# ರಿಯಾಸಿ ಉಗ್ರ ದಾಳಿ ಬಗ್ಗೆ ಬದುಕುಳಿದವರ ಮಾತು



**ಜಮ್ಮು :** ಚಾಲಕನ ತಲೆಗೆ ಗುಂಡು ತಗುಲಿ ಸ್ಟೇರಿಂಗ್ ಮೇಲೆ ಮಲಗಿದ್ದನ್ನು ನಾವು ನೋಡಿದ್ದೆವು, ನಾವೂ ಕೂಡ ಸತ್ತವರಂತೆ ನಟಿಸಿದ್ದೆವು ಎಂದು ಉಗ್ರರ ದಾಳಿಯಲ್ಲಿ ಬದುಕುಳಿದವರು ಮಾಹಿತಿ ನೀಡಿದ್ದಾರೆ. ಜಮ್ಮು ಕಾಶ್ಮೀರದ ರಿಯಾಸಿಯಲ್ಲಿ ಯಾತ್ರಾರ್ಥಿಗಳಿದ್ದ ಬಸ್ ಮೇಲೆ ಲಷ್ಕರ್ ಎ ತೊಯ್ಬಾ ಉಗ್ರರು ಗುಂಡಿನ ದಾಳಿ ನಡೆಸಿದ್ದರು.

ಬಸ್ ಮೇಲೆ 30-40 ಬಾರಿ ಗುಂಡಿನ ದಾಳಿ ನಡೆಸಿದ್ದರು, ಪರಿಣಾಮ ಬಸ್ ಕಂದಕಕ್ಕೆ ಉರುಳಿ 10 ಮಂದಿ ಸಾವನ್ನಪ್ಪಿದ್ದರು. ಯುಪಿಯ ಬಲರಾಂಪುರ್ ಜಿಲ್ಲೆಯವರಾದ ಸಂತೋಷ್ ಕುಮಾರ್ ವರ್ಮಾ ಅವರು, ಮಾತನಾಡಿ ಭಯೋತ್ಪಾದಕರು ಸುತ್ತುವರೆದಾಗ ನಾವು ಬದುಕುವುದಿಲ್ಲ ಅಂದುಕೊಂಡಿದ್ದೆವು ನೋಡ ನೋಡುತ್ತಿದ್ದಂತೆ ಚಾಲಕನ ತಲೆಗೆ ಗುಂಡು ಬಿದ್ದಿತ್ತು ಎಂದು ಆ ಕರಾಳ ದಿನದ ನೆನಪು ಮಾಡಿಕೊಂಡಿದ್ದಾರೆ.

ದಾಳಿಯಲ್ಲಿ ತನ್ನ 14 ವರ್ಷದ ಮಗನನ್ನು ಕಳೆದುಕೊಂಡಿದ್ದೇನೆ ಎಂದು ರಜತ್ ರಾಮ್ ವರ್ಮಾ ಹೇಳಿದ್ದಾರೆ. ಇದ್ದಕ್ಕಿದ್ದಂತೆ, ಉಗ್ರರು ಬಸ್ ಮೇಲೆ ದಾಳಿ ಮಾಡಿದ್ದಾರೆ ಎಂದು ಯಾರೋ ಕೂಗಿದರು. ನಾನು ತಕ್ಷಣ ನನ್ನ ಹೆಂಡತಿ ಮತ್ತು ಮಗನನ್ನು ಸೀಟಿನ ಕೆಳಗೆ ತಳ್ಳಿದೆ. ಅಷ್ಟಾಗುತ್ತಿದ್ದಂತೆ ಬಸ್ ಕಂದಕಕ್ಕೆ ಬಿದ್ದಿತ್ತು, ನನ್ನ ಮಗನ ಮೇಲಿನ ಹಿಡಿತ ತಪ್ಪಿತ್ತು.

ನಿಷೇಧಿತ ಲಷ್ಕರ್-ಎ-ತೊಯ್ಬಾ ಭಯೋತ್ಪಾದಕ ಸಂಘಟನೆಯ ನೆರಳು ಗುಂಪಿನ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್) ಆರಂಭದಲ್ಲಿ ದಾಳಿಯ ಹೊಣೆಯನ್ನು ಹೊತ್ತುಕೊಂಡಿತು ಆದರೆ ನಂತರ ತನ್ನ ಹೇಳಿಕೆಯನ್ನು ಹಿಂತೆಗೆದುಕೊಂಡಿತು. ಮೃತರಲ್ಲಿ ಎರಡು ವರ್ಷದ ಟಿಟು ಸಾಹ್ನಿ ಮತ್ತು ಆತನ ತಾಯಿ ಪೂಜಾ, ಬಸ್ ಚಾಲಕ ಮತ್ತು ಕಂಡಕ್ಟರ್ ಸೇರಿದ್ದಾರೆ. ಮೃತಪಟ್ಟ 10 ಮಂದಿಯಲ್ಲಿ ಐವರಿಗೆ ಗುಂಡಿನ ಗಾಯಗಳಿದ್ದವು. ಗಾಯಗೊಂಡ 41 ಮಂದಿಯಲ್ಲಿ 10 ಮಂದಿಗೆ ಗುಂಡಿನ ಗಾಯಗಳಾಗಿವೆ. ಪುಟ 2

### ಪವಿತ್ರಾ ಗೌಡಗೆ ಅಶ್ಲೀಲ ಮೆಸೇಜ್ ಮಾಡಿದ್ದ ವ್ಯಕ್ತಿಯ ಕೊಲೆ ?

# ದರ್ಶನ್ ಅರೆಸ್ಟ್

**ಮೈಸೂರು:** ವ್ಯಕ್ತಿಯೊಬ್ಬರ ಕೊಲೆ ಪ್ರಕರಣದಲ್ಲಿ ಸ್ಯಾಂಡಲ್‌ವುಟ್ ನಟ, ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಮೈಸೂರಿನಲ್ಲಿರುವ ದರ್ಶನ್ ಅವರ ತೋಟದ ಮನೆಯಲ್ಲಿ ಬೆಂಗಳೂರಿನ ಪೊಲೀಸರು ದರ್ಶನ್ ಅವರನ್ನು ಬಂಧಿಸಿದ್ದಾರೆ. ನಟನನ್ನು ಬಂಧಿಸಿರುವ ಪೊಲೀಸರು ಬೆಂಗಳೂರಿಗೆ ಕರೆದುಕೊಂಡು ಬರುತ್ತಿದ್ದಾರೆ ಎಂದು ತಿಳಿದುಬಂದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ದರ್ಶನ್ ಜತೆಗೆ 10 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ನಟಿ ಪವಿತ್ರಾ ಗೌಡ ಅವರಿಗೆ ಅಶ್ಲೀಲವಾಗಿ ಮೆಸೇಜ್ ಮಾಡಿದ ಹಿನ್ನೆಲೆಯಲ್ಲಿ ರೇಣುಕಾಸ್ವಾಮಿ ಎಂಬುವರ ಮೇಲೆ ಎರಡು ತಿಂಗಳ ಹಿಂದೆ ದರ್ಶನ್ ಸೇರಿ ಹಲವರು ಹಲ್ಲೆ ನಡೆಸಿದ್ದು, ಇದಾದ ಬಳಿಕ ರೇಣುಕಾಸ್ವಾಮಿ ಮೃತಪಟ್ಟಿದ್ದರು. ನಟ ದರ್ಶನ್ ಸೇರಿ ಹಲವರು ರೇಣುಕಾಸ್ವಾಮಿ ಅವರ ಮರ್ಮಾಂಗಕ್ಕೆ ಹೊಡೆದು, ಒದ್ದು ಹಲ್ಲೆ ನಡೆಸಿದ್ದರು. ಕೊಲೆ ಮಾಡಿದ ಆರೋಪಿಗಳ ಜತೆ ದರ್ಶನ್ ನಿರಂತರವಾಗಿ ಸಂಪರ್ಕದಲ್ಲಿದ್ದರು ಎಂಬ ಆರೋಪ ಕೇಳಿಬಂದಿತ್ತು. ಈ ಪ್ರಕರಣದಲ್ಲಿ ಈಗ ಪೊಲೀಸರು ದರ್ಶನ್ ಅವರನ್ನು ಬಂಧಿಸಿದ್ದಾರೆ.



#### ಹತ್ಯೆಗೀಡಾದ ಯುವಕ

ಮೆಡಿಕಲ್ ಶಾಪ್‌ನಲ್ಲಿ ಕೆಲಸ ಮಾಡುತ್ತಿದ್ದ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಅವರು ನಟಿ ಪವಿತ್ರಾ ಗೌಡ ಅವರಿಗೆ ಮೆಸೇಜ್ ಮಾಡಿದ್ದರು. ಇದರಿಂದ ಕುಪಿತಗೊಂಡಿದ್ದ ದರ್ಶನ್ ಅವರು ಹಲವರೊಂದಿಗೆ ತೆರಳಿ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದರು ಎಂದು ತಿಳಿದುಬಂದಿತ್ತು. ಕೊಲೆ ಕುರಿತು ಬೆಂಗಳೂರಿನ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಎರಡು ತಿಂಗಳ ಹಿಂದೆ ಹತ್ಯೆ ಮಾಡಲಾಗಿತ್ತು. ಬೆಂಗಳೂರಿನ ಸುಮ್ಮನಹಳ್ಳಿಯ ರಾಜಕಾಲುವೆ ಬಳಿ ಅಪರಿಚಿತ ಶವ ಪತ್ತೆಯಾಗಿತ್ತು. ವ್ಯಕ್ತಿಯನ್ನು ಹತ್ಯೆ ಮಾಡಿ ರಾಜಕಾಲುವೆ ಬಳಿ ಬಿಸಾಡಲಾಗಿತ್ತು. ಶವವನ್ನು ನೋಡಿದ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಪೊಲೀಸರು ಶವ ರೇಣುಕಾಸ್ವಾಮಿ ಅವರದ್ದೇ ಎಂದು ಗುರುತಿಸಿದ್ದರು. ಇದಾದ ಬಳಿಕ ತನಿಖೆ ಕೈಗೊಂಡಿದ್ದರು. ತನಿಖೆ ನಡೆಸಿದ ಪೊಲೀಸರು ದರ್ಶನ್ ಅವರನ್ನು ವಶಪಡಿಸಿಕೊಂಡಿದ್ದಾರೆ. ಪ್ರಕರಣದಲ್ಲಿ ದರ್ಶನ್ ಅವರ ಬೌನ್ಸರ್‌ಗಳನ್ನು ಕೂಡ ಬಂಧಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

### ಹೆಚ್.ಡಿ.ದೇವೇಗೌಡಗೆ ಕರೆ ಮಾಡಿ ಆರೋಗ್ಯ ವಿಚಾರಿಸಿದ

# ಪ್ರಧಾನಿ ಮೋದಿ



**ಬೆಂಗಳೂರು:** ಅನಾರೋಗ್ಯ ನಿಮಿತ್ತ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಕಾರ್ಯಕ್ರಮದಲ್ಲಿ ಭಾಗಿಯಾಗಲು ಆಗಲಿಲ್ಲ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರು ಟ್ವೀಟ್ ಮಾಡಿದ್ದರು. ಈ ಬೆನ್ನಲ್ಲೇ ಪ್ರಧಾನಿ ಮೋದಿ ಅವರು ಹೆಚ್ ಡಿ ದೇವೇಗೌಡ ಅವರಿಗೆ ಕರೆ ಮಾಡಿ ಆರೋಗ್ಯ ವಿಚಾರಿಸಿದ್ದಾರೆ. ''ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕರೆ ಮಾಡಿ, ಹೊಸ ಸರ್ಕಾರದ ಬಗ್ಗೆ ತಮಗೆ ಇರುವ ಆಲೋಚನೆಗಳನ್ನು ನನ್ನೊಂದಿಗೆ ಹಂಚಿಕೊಂಡರು. ಹಾಗೆ ನನ್ನ ಆರೋಗ್ಯವನ್ನೂ ವಿಚಾರಿಸಿದರು. ಅವರ ಕಾಳಜಿಗೆ ನಾನು ಆಭಾರಿಯಾಗಿದ್ದೇನೆ. ಅವರ ಈ ಕಾಳಜಿ ನನ್ನನ್ನು ಭಾವುಕರನ್ನಾಗಿಸಿತು. ಪರಮಾತ್ಮನ ಆಶೀರ್ವಾದ ಸದಾ ಅವರ ಮೇಲಿರಲಿ. ಅವರು ಭಾರತವನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯಲಿ'' ಎಂದು ಟ್ವೀಟ್ ಮಾಡಿದ್ದಾರೆ. ಪುಟ 2

### ನೂತನ ಸಂಸದ ಪಪ್ಪು ಯಾದವ್ ವಿರುದ್ಧ ಸುಲಿಗೆ ಆರೋಪ

# ಪ್ರಕರಣ ದಾಖಲು

**ಬಿಹಾರ:** ಬಿಹಾರದ ನೂತನ ಕಾಂಗ್ರೆಸ್ ಸಂಸದ ಪಪ್ಪು ಯಾದವ್ ವಿರುದ್ಧ ಸುಲಿಗೆ ಪ್ರಕರಣ ದಾಖಲಾಗಿದೆ. ಉದ್ಯಮಿಯೊಬ್ಬರು ತಮ್ಮಿಂದ ಹಣ ವಸೂಲಿ ಮಾಡಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿ ಸೋಮವಾರ ಪ್ರಕರಣ ದಾಖಲಿಸಲಾಗಿದೆ. ಪೂರ್ಣಿಯಾ ಜಿಲ್ಲೆಯ ಪೊಲೀಸರು ನೀಡಿದ ಹೇಳಿಕೆಯ ಪ್ರಕಾರ, ದೂರುದಾರರು ಅವರ ಕ್ಷೇತ್ರದಲ್ಲಿ ಫರ್ನಿಶಿಂಗ್ ವ್ಯವಹಾರ ನಡೆಸುತ್ತಿದ್ದು, ಮತ ಎಣಿಕೆ ದಿನದಂದು ಉದ್ಯಮಿ ಬಳಿ 1 ಕೋಟಿ ರೂ.ಗೆ ಬೇಡಿಕೆ ಇಟ್ಟಿದ್ದರು ಎಂದು ಹೇಳಲಾಗಿದೆ.



ಈ ಮೊದಲು 2021 ಹಾಗೂ 2023ರಲ್ಲಿ ಕೂಡ ಇದೇ ರೀತಿಯ ಬೇಡಿಕೆ ಇಟ್ಟಿದ್ದರು, ತಮಗೆ ಹಣ ಕೊಡದಿದ್ದರೆ ಕೊಲ್ಲುವುದಾಗಿ ಬೆದರಿಕೆಯನ್ನೂ ಹಾಕಿದ್ದರು. ಮುಂದಿನ ಐದು ವರ್ಷ ಇದೇ ಸಂಸದರೊಂದಿಗೆ ವ್ಯವಹರಿಸಬೇಕಾಗುತ್ತದೆ ಎಚ್ಚರವಿರಲಿ ಎಂದು ಬೆದರಿಕೆ ಹಾಕಿದ್ದರು. ಪುಟ 2

### ಚುನಾವಣೆಗಳಲ್ಲಿ ಕಳಪೆ ಸಾಧನೆ, ನೈತಿಕ ಹೊಣೆ ಹೊತ್ತು ಒಡಿಶಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ

# ದಾಸ್ ರಾಜೀನಾಮೆ

**ಒಡಿಶಾ:** ಒಡಿಶಾದಲ್ಲಿ ವಿಧಾನಸಭೆ ಮತ್ತು ಲೋಕಸಭಾ ಚುನಾವಣೆಗಳಲ್ಲಿ ಹೆಚ್ಚಿನ ಸ್ಥಾನಗಳನ್ನು ಪಡೆಯಲು ವಿಫಲವಾದ ಹಿನ್ನೆಲೆಯಲ್ಲಿ ನೈತಿಕ ಹೊಣೆ ಹೊತ್ತು ಒಡಿಶಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಕೇಂದ್ರ ಸಚಿವ ಮತ್ತು ಕಾಂಗ್ರೆಸ್ ನಾಯಕ ಭಕ್ತ ಚರಣ್ ದಾಸ್ ರಾಜೀನಾಮೆ ನೀಡಿದ್ದಾರೆ.



ಒಡಿಶಾ ವಿಧಾನಸಭಾ ಚುನಾವಣೆಯ ಫಲಿತಾಂಶ ಹೀಗಿದೆ ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅದ್ಭುತ ಸಾಧನೆ ಮಾಡಿತ್ತು. ರಾಜ್ಯದಲ್ಲಿ ಪಕ್ಷ 78 ಸ್ಥಾನಗಳನ್ನು ಗೆದ್ದಿದೆ. ಆಡಳಿತ ಪಕ್ಷ ಬಿಜೆಡಿ 51 ಸ್ಥಾನಗಳನ್ನು ಗೆದ್ದಿದೆ. ಇದನ್ನು ಹೊರತುಪಡಿಸಿದರೆ ಕಾಂಗ್ರೆಸ್ ಕೇವಲ 14 ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಯಿತು. ಇದಲ್ಲದೆ ಇತರೆ ಪಕ್ಷಗಳು ಮತ್ತು ಪಕ್ಷೇತರರು ನಾಲ್ಕು ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದಾರೆ. ಪುಟ 2

# ಪಂಜಾಬ್ , ಉತ್ತರ ಪ್ರದೇಶಕ್ಕೆ ರಾಜ್ಯದಿಂದ ವಿದ್ಯುತ್ ವಾಪಸ್

**ಬೆಂಗಳೂರು:** ರಾಜ್ಯದಲ್ಲಿ ತಲೆದೂರಿದ್ದ ವಿದ್ಯುತ್ ಕ್ಷಾಮವನ್ನು ನೀಗಿಸಲು ಸರ್ಕಾರ ಪಂಜಾಬ್ ಮತ್ತು ಉತ್ತರ ಪ್ರದೇಶದೊಂದಿಗೆ 2023ರ ನವೆಂಬರ್ ನಿಂದ 2024ರ ಮೇವರೆಗೂ ವಿದ್ಯುತ್ ವಿನಿಮಯದ ಒಪ್ಪಂದ ಮಾಡಿಕೊಂಡಿತ್ತು. ಒಪ್ಪಂದದಂತೆ ಇದೀಗ ಸರ್ಕಾರ ಜೂನ್ 16ರಿಂದ ಪಂಜಾಬ್ ಮತ್ತು ಉತ್ತರ ಪ್ರದೇಶ ರಾಜ್ಯಗಳಿಗೆ ವಿದ್ಯುತ್ ಹಿಂದುರುಗಿಸುತ್ತದೆ.

ರಾಜ್ಯದಲ್ಲಿ ಕಳೆದ ಮುಂಗಾರು ಮತ್ತು ಹಿಂಗಾರಿನಲ್ಲಿ ಮಳೆ ಕೊರತೆಯಿಂದ ಕಳೆದ ವರ್ಷ ಆಗಸ್ಟ್‌ನಲ್ಲೇ ಬೇಸಿಗೆ ಪರಿಸ್ಥಿತಿ ನಿರ್ಮಾಣವಾಗಿದ್ದರಿಂದ ಜಲವಿದ್ಯುತ್ ಉತ್ಪಾದನೆಗೆ ಭಾರಿ ಹೊಡೆತ ಬಿದ್ದಿತು. ಸಮರ್ಪಕ ಪ್ರಮಾಣದಲ್ಲಿ ವಿದ್ಯತ್ ಉತ್ಪಾದನೆಯಾಗಲಿಲ್ಲ. ಮತ್ತು ಉಷ್ಣ ವಿದ್ಯುತ್ ಸ್ಥಾವರದಲ್ಲೂ ವಿದ್ಯುತ್ ಉತ್ಪಾದನೆ ಕಡಿಮೆಯಾಗಿದ್ದರಿಂದ ಪೂರೈಕೆಗೆ ಹೊಡೆತ ಬಿತ್ತು. ಅಲ್ಲದೆ, ಯಾವುದೇ ಕಾರಣಕ್ಕೂ ಲೋಡ್ ಶೆಡ್ಡಿಂಗ್ ಮಾಡದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ ಹಿನ್ನೆಲೆಯಲ್ಲಿ ಪಂಜಾಬ್ ಮತ್ತು ಉತ್ತರ ಪ್ರದೇಶನಿಂದ ವಿದ್ಯುತ್ ವಿನಿಮಯ ಮಾಡಿಕೊಳ್ಳಲಾಯಿತು. ಪುಟ 2



### 300ರ ಗಡಿ ದಾಟಿದ ಡೆಂಗ್ಯೂ ಪ್ರಕರಣ

# ಜನರಲ್ಲಿ ಆತಂಕ



**ಚಿಕ್ಕಮಗಳೂರು:** ಕಾಫಿನಾಡು ಚಿಕ್ಕಮಗಳೂರಿನಲ್ಲಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ 300ರ ಗಡಿದಾಟಿದೆ. ಬರದಿಂದ ಕಂಗೆಟ್ಟಿದ್ದ ಜಿಲ್ಲೆಯಲ್ಲಿ ಸದ್ಯಕ್ಕೆ ಉತ್ತಮ ಮಳೆಯಾಗ್ತಿದೆ. ಈ ಮಧ್ಯೆ ಡೆಂಗ್ಯೂ ಪ್ರಕರಣಗಳ ರುದ್ರನರ್ತನ ಕೂಡ ದಿನದಿಂದ ದಿನಕ್ಕೆ ಜಿಲ್ಲೆಯನ್ನ ಕಾಡ್ತಿದೆ. ಚಿಕ್ಕಮಗಳೂರು ತಾಲೂಕು ಒಂದರಲ್ಲೇ 250 ಪ್ರಕರಣಗಳಿದ್ದು ಜಿಲ್ಲೆಯಾದ್ಯಂತ 350 ಡೆಂಗ್ಯೂ ಪ್ರಕರಣಗಳು ದಾಖಲಾಗಿವೆ. ಕಳೆದ ಎರಡು ತಿಂಗಳಲ್ಲಿ ಹೆಚ್ಚು ಪ್ರಕರಣಗಳು ಪತ್ತೆಯಾಗಿವೆ. ಜ್ವರ ಕಾಣಿಸಿಕೊಂಡರೆ ಸಾಕು ಡೆಂಗ್ಯೂ ಕಂಫರ್ಮ್ ಅನ್ನುವ ರೀತಿಯ ಸ್ಥಿತಿ ಇದೆ. ಆದರೆ, ಅದೃಷ್ಟವಶಾತ್ ಈವರೆಗೂ ಯಾವುದೇ ಸಾವು ಸಂಭವಿಸಿಲ್ಲ. ಜ್ವರ ಕಾಣಿಸಿಕೊಂಡರೇ ಮನೆಯಲ್ಲಿ ಔಷಧಿ ತೆಗೆದುಕೊಳ್ಳುವುದನ್ನು ಬಿಟ್ಟು ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಿರಿ ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ. ಪುಟ 2

### ಕಾಂಗ್ರೆಸ್ ಆಡಳಿತದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದರೆ ರಾಜ್ಯಸಭಾ ಸೀಟು

# ಭಾರತ್ ಮಾತಾ ಕೀ ಜೈ ಎಂದರೆ ಕಲ್ಲೇಟು

**ಬೆಂಗಳೂರು:** ನರೇಂದ್ರ ಮೋದಿ ಅವರು ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಂದರ್ಭದಲ್ಲಿ, 'ಭಾರತ್ ಮಾತಾ ಕೀ ಜೈ' ಎಂದು ಘೋಷಣೆ ಕೂಗಿದ ಬಿಜೆಪಿ ಕಾರ್ಯಕರ್ತರನ್ನು ಗುಂಪೊಂಡು ಅಟ್ಟಾಡಿಸಿಕೊಂಡು ಹೋಗಿ ಹಲ್ಲೆ ಮಾಡಿ, ಚೂರಿಯಿಂದ ಇರಿದ ಘಟನೆ ದಕ್ಷಿಣಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬೋಳಿಯಾರ್‌ನಲ್ಲಿ ನಡೆದಿತ್ತು. ಈ ವಿಚಾರವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿರುವ ಬಿಜೆಪಿ, ರಾಜ್ಯದಲ್ಲಿ ತುಘಲಕ್ ಆಡಳಿತ ಮರಳಿದೆ ಎಂದು ಟೀಕಿಸಿದೆ.



ಘಟನೆಗೆ ಸಂಬಂಧಿಸಿ ಪ್ರಕಟಿಸಿರುವ ವರದಿಯನ್ನು ಉಲ್ಲೇಖಿಸಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿರುವ ಪ್ರತಿಪಕ್ಷ ನಾಯಕ ಆರ್ ಅಶೋಕ್, ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.



'ಇದೇನು ಕಾಶ್ಮೀರವೋ ಅಥವಾ ಪಾಕಿಸ್ತಾನ ಅತಿಕ್ರಮಿತ ಕಾಶ್ಮೀರ ಆಗಿದೆಯೋ ಗೊತ್ತಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರದ ತಾಲಿಬಾನ್ ಆಡಳಿತದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದರೆ ರಾಜ್ಯಸಭಾ ಸೀಟು, ಭಾರತ್ ಮಾತಾ ಕೀ ಜೈ ಎಂದರೆ ಕಲ್ಲೇಟು. ರಾಮನ ಹೆಸರು ಹೇಳುವುದೂ ತಪ್ಪು, ಭಾರತ್ ಮಾತಾ ಕೀ ಜೈ ಎಂದರೂ ತಪ್ಪು. ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗಿದವರ ಮೇಲೆ ಕಠಿಣ ಕ್ರಮ ಕೈಗೊಂಡು ಜೈಲಿಗಟ್ಟಿದ್ದರೆ ಇವತ್ತು ಭಾರತ್ ಮಾತಾ ಕಿ ಜೈ ಎನ್ನುವವರ ಮೇಲೆ ಕಲ್ಲು ತೂರುವ ಧೈರ್ಯ ಮಾಡುತ್ತಿರಲಿಲ್ಲ. ಸಿಎಂ ಸಿದ್ದರಾಮಯ್ಯ ಅವರೇ, ತಮ್ಮ ಸರ್ಕಾರ ಬಂದಾಗಿನಿಂದ ಮತಾಂಧರಿಗೆ, ತೀವ್ರವಾದಿ ಸಂಘಟನೆಗಳಿಗೆ ಕೊಂಬು ಬಂತಾಗಿದ್ದು, ದೇಶವಿದ್ರೋಹಿ ಘಟನೆಗಳು ಪದೇ ಪದೇ ನಡೆಯುತ್ತಲೇ ಇವೆ. ಪುಟ 2

### ಸಂಚಾರ ನಿಲ್ಲಿಸಿದ ಇಂದಿರಾ

# ಕ್ಯಾಂಟೀನ್

**ಬೆಂಗಳೂರು:** ಬಡವರಿಗೆ ಅತಿ ಕಡಿಮೆ ದರದಲ್ಲಿ ಊಟ ನೀಡಲು 2017ರಲ್ಲಿ ಸಿಎಂ ಸಿದ್ದರಾಮಯ್ಯ ಇಂದಿರಾ ಕ್ಯಾಂಟೀನ್ ಆರಂಭಿಸಿದರು. ಬೆಂಗಳೂರಿನಲ್ಲಿ 198 ವಾರ್ಡ್‌ಗಳ ಪೈಕಿ 175 ವಾರ್ಡ್‌ಗಳಲ್ಲಿ ಸ್ಥಿರ ಕ್ಯಾಂಟೀನ್, ಉಳಿದ ವಾರ್ಡ್‌ಗಳಲ್ಲಿ ಮೊಬೈಲ್ ಇಂದಿರಾ ಕ್ಯಾಂಟೀನ್ ಆರಂಭಿಸಲಾಯಿತು. ಆರಂಭದಲ್ಲಿ ಲಕ್ಷಾಂತರ ಬಡವರ ಹೊಟ್ಟೆ ತುಂಬಿಸಿದ್ದ ಕ್ಯಾಂಟೀನ್ ಗಳು ಬಿಬಿಎಂಪಿ ನಿರ್ಲಕ್ಷ್ಯದಿಂದ ಸೊರಗಿವೆ. ಸಿಎಂ ಸಿದ್ದರಾಮಯ್ಯ ಸರ್ಕಾರ ಇರುವಾಗಲೇ ಸಿಎಂ ಕನಸಿನ ಯೋಜನೆಯಾಗಿರುವ ಇಂದಿರಾ ಮೊಬೈಲ್ ಕ್ಯಾಂಟೀನ್‌ಗಳ ಸೇವೆ ಮರೆಯಾಗುತ್ತಿದೆ. ಪುಟ 2



## ಎಲ್ಲವನ್ನೂ ದೇವರು ನೋಡ್ಕೋತಾನೆ: ಡಿಕೆ ಸುರೇಶ್ ಭಾವುಕ!

**ರಾಮನಗರ:** ಲೋಕಸಭಾ ಚುನಾವಣೆಯಲ್ಲಿ ಈ ಬಾರಿ ಡಿಕೆ ಸುರೇಶ್ ಅವರಿಗೆ ಸೋಲಾಗಿದ್ದು, ಈ ಹಿನ್ನೆಲೆಯಲ್ಲಿ ನಡೆದ ಆತ್ಮಾವಲೋಕನ ಸಭೆಯಲ್ಲಿ ಮಾಜಿ ಸಂಸದರು ಭಾವುಕರಾಗಿದ್ದಾರೆ. ಕನಕಪುರದ ಡಿಕೆ ಶಿವಕುಮಾರ್ ನಿವಾಸದಲ್ಲಿ ಭಾನುವಾರ ಸಂಜೆ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡುತ್ತಿದ್ದ ಸಂದರ್ಭದಲ್ಲಿ ಡಿಕೆ ಸುರೇಶ್ ಕಣ್ಣೀರು ಹಾಕಿದ್ದಾರೆ.



ಸೋತಿದ್ದೀನಿ ಅಂತಾ ಸುಮ್ನೆ ಕೂರುವುದಿಲ್ಲ. ನಿಮ್ಮೆಲ್ಲರಿಗೂ ಒಂದು ಕೊರಗಿತ್ತು. ನಿಮ್ಮ ಮನೆಗೆ ಬರಲ್ಲ ಅಂತಿದ್ರೀ, ಇನ್ಮುಂದೆ ನಿಮ್ಮ ಮನೆಗೂ ಬರ್ತೀನಿ, ನಿಮ್ಮ ಬೀದಿಗೂ ಬರ್ತೀನಿ. ಎಲ್ಲಾ ಕೆಲಸ ಕಾರ್ಯಗಳನ್ನು ನಿಮ್ಮ ಜೊತೇಲಿ ಇದ್ದು ಮಾಡ್ತೀನಿ ಎಂದು ಹೇಳಿದರು. ನಾನು ಬದುಕಬೇಕು, ಬಾಳಬೇಕು ನನ್ನ ಕೆಲಸಾನೂ ನೋಡಬೇಕು. ಅದೆಲ್ಲದರ ಜೊತೆ ನಿಮ್ಮ ಕೆಲಸವನ್ನೂ ಮಾಡ್ತೀನಿ. ಧೈರ್ಯವಾಗಿರಿ ಯಾರಿಗೂ ಅಂಜಬೇಕಾಗಿಲ್ಲ, ಯಾರಿಗೂ ಹೆದರಿಕೊಳ್ಳಬೇಡಿ. ಯಾರು ಯಾರು ಏನೆಲ್ಲಾ ಮಾಡಿದ್ದಾರೆ, ಅದೆಲ್ಲವನ್ನೂ ದೇವರು ನೋಡ್ಕೊತಾನೆ ಎಂದು ಡಿಕೆ ಸುರೇಶ್ ಗದ್ಗದಿತರಾದರು. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಡಾಕ್ಟರ್ ಮಂಜುನಾಥ್ ಅವರು ಒಟ್ಟು 10,79,002 ಹಾಗೂ ಡಿ.ಕೆ.ಸುರೇಶ್ 8,09,355 ಮತಗಳನ್ನು ಪಡೆದರು. ಡಾಕ್ಟರ್ ಬರೋಬ್ಬರಿ 2,69,647 ಮತಗಳ ಅಂತರದಿಂದ ಹಾಲಿ ಸಂಸದರನ್ನು ಪರಾಭವಗೊಳಿಸಿದ್ದಾರೆ. ಈ ಮೂಲಕ ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿ ಡಿ.ಕೆ.ಸುರೇಶ್‌ಗೆ ನಿರಾಸೆಯಾಗಿದೆ.

## ಬೆಟ್ಟಿಂಗ್ ಭೂತಕ್ಕೆ ಕಾಂಗ್ರೆಸ್ ಕಾರ್ಯಕರ್ತ ಬಲಿ

**ರಾಮನಗರ:** ಕಾಂಗ್ರೆಸ್ ಕಾರ್ಯಕರ್ತನೊಬ್ಬ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಪರ ಕೋಟಿ ಕೋಟಿ ಹಣ ಬೆಟ್ಟಿಂಗ್ ಕಟ್ಟಿ, ಸಾಲದ ಸುಳಿಗೆ ಸಿಕ್ಕು ನೇಣಿಗೆ ಶರಣಾದ ಘಟನೆ ಬಿಡದಿಯಲ್ಲಿ ನಡೆದಿದೆ.



ರಾಮನಗರ ತಾಲೂಕಿನ ಕೆಂಚನಕುಪ್ಪೆ ಗ್ರಾಮದ ಶಿವರಾಜು (44) ಆತ್ಮಹತ್ಯೆಗೆ ಶರಣಾದ ದುರ್ದೈವಿ. ಶಿವರಾಜು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲುವುದಾಗಿ 1 ಕೋಟಿ ರೂ.ಗೂ ಹೆಚ್ಚಿನ ಹಣವನ್ನು ಬೆಟ್ಟಿಂಗ್ ಕಟ್ಟಿ ಕಳೆದುಕೊಂಡಿದ್ದರು. ಕಾಂಗ್ರೆಸ್‌ಗೆ ಸೋಲಾದ ಹಿನ್ನೆಲೆ, ಅವರು ತೀವ್ರ ಸಾಲದ ಸುಳಿಗೆ ಸಿಲುಕಿದ್ದಾರೆ. ಇದರಿಂದ ಬೇಸತ್ತು ಬಿಡದಿಯ ಲಾಡ್ಜ್ ಒಂದರಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಅವರು ಐದಾರು ಲಾರಿಗಳ ಮಾಲೀಕರಾಗಿದ್ದರು ಎಂದು ತಿಳಿದು ಬಂದಿದೆ. ಈ ಸಂಬಂಧ ಬಿಡದಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನನ್ನ ಕೆಲಸವನ್ನು ಗಮನಿಸಿ ಮತ್ತೊಮ್ಮೆ ಕೇಂದ್ರ ಸಚಿವೆಯಾಗಿ ಅವಕಾಶ ನೀಡಿದ್ದಾರೆ

**ನವದೆಹಲಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಸಂಪುಟದಲ್ಲಿ ಎರಡನೇ ಬಾರಿಗೆ ನೂತನ ಸಚಿವೆಯಾಗಿ ಪ್ರಮಾಣ ವಚನ ಸ್ವೀಕಾರ ಮಾಡಿರುವ ರಾಜ್ಯದ ಸಂಸದೆ ಶೋಭಾ ಕರಂದ್ಲಾಜೆ ಅವರು ಕೇಂದ್ರ ಸಚಿವೆಯಾಗಿ ಇದೇ ಮೊದಲ ಬಾರಿಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದಾರೆ.

ದೆಹಲಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ನೂತನ ಕೇಂದ್ರ ಸಚಿವೆ, ಬೆಂಗಳೂರು ಉತ್ತರ ಸಂಸದೆ ಶೋಭಾ ಕರಂದ್ಲಾಜೆ, ವಿಕಸಿತ ಭಾರತ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಸಂಕಲ್ಪವಾಗಿದೆ. ಭಾರತ ದೇಶ ಸಾಮಾಜಿಕವಾಗಿ ಆರ್ಥಿಕವಾಗಿ ಅಭಿವೃದ್ಧಿಯಾಗಬೇಕು. ಸಈ ದೃಷ್ಟಿಯಲ್ಲಿ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ನನಗೆ ಮತ್ತೊಂದು ಅವಕಾಶ ಸಿಕ್ಕಿದೆ, ಈ ಬಗ್ಗೆ ನನಗೆ ಖುಷಿಯಾಗಿದೆ ಎಂದು ಹೇಳಿದರು.



ಪ್ರಧಾನಿ ನರೇಂದ್ರ ಮೋದಿ ಅವರ ಜೊತೆಗೆ ಕೆಲಸ ಮಾಡುವುದು ಆನಂದ ಎಂದು ಕೊಂಡಾಡಿದ ಶೋಭಾ ಕರಂದ್ಲಾಜೆ, ಯಾವ ಖಾತೆ ಕೊಟ್ಟರೂ ಕೆಲಸ ಮಾಡುತ್ತೇನೆ, ಬೆಂಗಳೂರು ಜನರಿಗೆ, ಕಾರ್ಯಕರ್ತರು, ಮುಖಂಡರಿಗೆ ಧನ್ಯವಾದಗಳನ್ನು ಹೇಳೋಕೆ ಇಷ್ಟಪಡ್ತೀನಿ. ನರೇಂದ್ರ ಮೋದಿ ಅವರ ಸಂಕಲ್ಪದ ಕಡೆಗೆ ಜೊತೆಯಾಗಿ ಹೆಜ್ಜೆ ಹಾಕ್ತಿನಿ ಎಂದು ಹೇಳಿದರು. ಎರಡನೇ ಬಾರಿಗೆ ಕೇಂದ್ರ ಸಚಿವೆಯಾಗಿ ಆಯ್ಕೆಯಾದರೂ ಕ್ಯಾಬಿನೆಟ್ ದರ್ಜೆಗೆ ಪದೋನ್ನತಿ ಸಿಗದ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಶೋಭಾ ಕರಂದ್ಲಾಜೆ, ನನಗೆ ಏನು ಸಿಕ್ಕಿದೆಯೋ ಅದರಲ್ಲಿ ಖುಷಿಯಾಗಿದ್ದೀನಿ, ಮೈತ್ರಿ ಸರ್ಕಾರ ಹಿನ್ನಲೆ ಹೊಂದಾಣಿಕೆ ಮಾಡುವ ಅನಿವಾರ್ಯತೆ ಇದೆ. ನನಗೆ ಸಚಿವ ಸ್ಥಾನ ಸಿಗಲ್ಲ ಅಂತಾ ಹಬ್ಬಿಸಲಾಗಿತ್ತು, ಕೆಲವು ಕಡೆ ಸೋಶಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಹಾಕಿರಬಹುದು. ಆದರೆ ನನ್ನ ಕೆಲಸವನ್ನು ಗಮನಿಸಿದ್ದಾರೆ, ಅದಕ್ಕಾಗಿ ಮತ್ತೊಂದು ಅವಕಾಶ ನೀಡಿದ್ದಾರೆ ಎಂದು ಹೇಳಿದರು.

## ಗ್ಯಾರಂಟಿ ನಿಲ್ಲಿಸುವ ಮಾತು ಬೇಡ: ಕೈ ನಾಯಕರಿಗೆ ಎಚ್.ಎಂ ರೇವಣ್ಣ ಎಚ್ಚರಿಕೆ

**ಬೆಂಗಳೂರು:** ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಬೇಕೆಂಬ ಚರ್ಚೆ ಹಿನ್ನೆಲೆ ಮುನ್ನೆಲೆಗೆ ಬಂದ ಹಿನ್ನೆಲೆಯಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ ರೇವಣ್ಣ ಪ್ರತಿಕ್ರಿಯಿಸಿದ್ದಾರೆ. ಗ್ಯಾರಂಟಿಗಳು ನಿಲ್ಲಿಸಿ ಎಂದು ಹೇಳಬೇಡಿ. ಎಷ್ಟೇ ದೊಡ್ಡ ನಾಯಕರು ಆದರೂ ನಿಲ್ಲಿಸುವ ಬಗ್ಗೆ ಮಾತನಾಡಬೇಡಿ. ನಾವು ಗ್ಯಾರಂಟಿಗಳನ್ನ ನಿಲ್ಲಿಸುವುದಿಲ್ಲ. ಸಣ್ಣ ಪುಟ್ಟ ತಪ್ಪುಗಳು ಇದ್ದರೆ ಸರಿಪಡಿಸುತ್ತೇವೆ ಎಂದು ಕೈ ನಾಯಕರಿಗೆ ಎಚ್ಚರಿಕೆ ನೀಡಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಗ್ಯಾರಂಟಿಗಳಿಗಾಗಿ 36 ಸಾವಿರ ಕೋಟಿ ಖರ್ಚು ಆಗುತ್ತಿತ್ತು, ಅದು 46 ಸಾವಿರ ಕೋಟಿಗೆ ಏರಿಕೆ ಆಗಿದೆ. ಆದರೂ ಅದು ನಮ್ಮ ಬದ್ಧತೆ. ನಾವು ಬದುಕಿಗಾಗಿ ಇದ್ದೇವೆ, ಬಿಜೆಪಿಯವರು ಭಾವನೆಗಳಿಗಾಗಿ ಇದ್ದಾರೆ ಎಂದು ತಿಳಿಸಿದ್ದಾರೆ.

ಎಲ್ಲ ಕಡೆಗಳಿಂದ ದೂರು ಬಂದಿವೆ. ಒಂದೇ ಮನೆಯಲ್ಲಿ ಇಬ್ಬರು ಫಲಾನುಭವಿಗಳ ಇರುವ ಬಗ್ಗೆ ದೂರು ಬಂದಿವೆ. ಅವುಗಳನ್ನು ಪರಿಶೀಲನೆ ಮಾಡುತ್ತೇವೆ ಎಂದು ಹೇಳಿದ್ದಾರೆ.



ಲೋಕಸಭಾ ಚುನಾವಣೆಯಲ್ಲಿ ನಿರೀಕ್ಷಿತ ಸ್ಥಾನಗಳು ಬರದ ಹಿನ್ನೆಲೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದೇ ಒಳಿತು ಎಂದು ಕೆಲ ಕೈ ನಾಯಕರು ಅಭಿಪ್ರಾಯ ಹೊರಹಾಕುತ್ತಿದ್ದಾರೆ. ಇತ್ತೀಚೆಗೆ ಮೈಸೂರು-ಕೊಡಗು ಕ್ಷೇತ್ರದ ಪರಾಜಿತ ಕೈ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರು ಮತದಾರರ ವಿರುದ್ಧ ಅಸಮಾಧಾನ ಹೊರಹಾಕುತ್ತಾ, ಜನರಿಗೆ ಗ್ಯಾರಂಟಿಗಳು ಬೇಕಿಲ್ಲ, ಇದರ ಬಗ್ಗೆ ಸಿಂ ಸಿದ್ದರಾಮಯ್ಯ ಅವರು ಮರು ಪರಿಶೀಲನೆ ನಡೆಸಬೇಕು ಎಂದು ಹೇಳಿದ್ದರು. ಹೀಗಾಗಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ ರೇವಣ್ಣ ಪ್ರತಿಕ್ರಿಯಿಸಿದ್ದಾರೆ.

# ಪ್ರತಿ ಮನೆಯಿಂದ 100 ರೂಪಾಯಿ ಘನತ್ಯಾಜ್ಯ ಶುಲ್ಕ ಸಂಗ್ರಹಕ್ಕೆ ಪ್ಲಾನ್

**ಬೆಂಗಳೂರು:** ರಾಜ್ಯಕ್ಕೆ ನೀಡಿರುವ ಪಂಚ ಭಾಗ್ಯಕ್ಕೆ ಹಣ ಸರಿದೂಗಿಸಲು ಸರ್ಕಾರ ಜನರ ಮೇಲೆ ಮತ್ತೊಂದು ತೆರಿಗೆ ಭಾಗ್ಯ ವಿಧಿಸಲು ಮುಂದಾಗಿದೆ. ರಾಜಧಾನಿಯ ಪ್ರತಿ ಮನೆಗೂ ಮಾಸಿಕ 100 ರೂ. ರಂತೆ ಘನತ್ಯಾಜ್ಯ ಶುಲ್ಕ ವಿಧಿಸಲು ತಯಾರಿ ನಡೆಯುತ್ತಿದೆ. ಕಳೆದ ವಾರ ರಾಜ್ಯ ಸರ್ಕಾರ ''ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿ'' ಮಾಡಿತ್ತು. ಈಗ ಈ ಕಂಪನಿಯಿಂದ ನೇರವಾಗಿ ಘನತ್ಯಾಜ್ಯ ಸೇವಾ ಶುಲ್ಕ ವಿಧಿಸಲು ಪ್ಲಾನ್ ಮಾಡಿದೆ.



ಕಳೆದ ನಾಲ್ಕು ವರ್ಷದಿಂದ ಘನತ್ಯಾಜ್ಯ ಶುಲ್ಕ ವಿಧಿಸುವ ಬಗ್ಗೆ ಚರ್ಚೆ ನಡೆದಿತ್ತು. ಆದರೆ ಈ ಬಗ್ಗೆ ಸಾರ್ವಜನಿಕರ ವಿರೋಧ ಹಿನ್ನೆಲೆಯಲ್ಲಿ ಈ ವಿಚಾರವನ್ನು ಕೈಬಿಡಲಾಗಿತ್ತು. ಈಗ ಮತ್ತೆ ಮನೆ ಮನೆಗೂ ಘನತ್ಯಾಜ್ಯ ಶುಲ್ಕ ವಿಧಿಸೋದಕ್ಕೆ ಸರ್ಕಾರ ಮುಂದಾಗಿದೆ. ಸರ್ಕಾರ ರಚಿಸಿದ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿಯು ಬೇರೆ ರಾಜ್ಯಗಳ ವರದಿ ಆಧರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿದೆ. ದೇಶದ ಬೇರೆ ರಾಜ್ಯಗಳಲ್ಲಿ ಈಗಾಗಲೇ ಈ ತೆರಿಗೆ ಜಾರಿಯಲ್ಲಿದೆ. ಅದೇ ರೀತಿ ಬೆಂಗಳೂರಲ್ಲಿ ಜಾರಿ ಮಾಡುವುದಕ್ಕೆ ರಾಜ್ಯ ಸರ್ಕಾರ ಮುಂದಾಗಿದೆ.

ವಿದ್ಯುತ್ ಬಿಲ್ ಮೂಲಕ ಸೇವಾ ಶುಲ್ಕ ವಿಧಿಸುವ ಬಗ್ಗೆ ಚರ್ಚೆ ನಡೆದಿತ್ತು. ಆದರೆ ಗೃಹ ಜ್ಯೋತಿ ಯೋಜನೆ ಹಿನ್ನಲೆ ಬಹುತೇಕ ಮಂದಿ ಬಿಲ್ ಪಾವತಿ ಮಾಡಿಲ್ಲ. ಈ ಹಿನ್ನೆಲೆ ಆಸ್ತಿ ತೆರಿಗೆಯೊಂದಿಗೆ ಘನತ್ಯಾಜ್ಯ ಸೇವಾ ಶುಲ್ಕ ವಿಧಿಸುವ ಮೂಲಕ ಹಣ ಸಂಗ್ರಹಕ್ಕೆ ಪ್ಲಾನ್ ನಡೆದಿದೆ. ಸದ್ಯ ವಸತಿ ಕಟ್ಟಡಗಳಿಗೆ ಮಾಸಿಕ 100 ರೂ, ವಾಣಿಜ್ಯ ಕಟ್ಟಡಗಳಿಗೆ 200ರೂ ದರ ನಿಗದಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಒಂದು ಕಟ್ಟಡದಲ್ಲಿ 10 ಮನೆ ಇದ್ರೆ, ಪ್ರತಿ ಮನೆಗೂ ಆಸ್ತಿ ತೆರಿಗೆ ಮೂಲಕ ಮಾಸಿಕ 100 ರೂ. ಸಂಗ್ರಹ ಮಾಡಲು ಹಾಗೂ ಆಸ್ತಿ ತೆರಿಗೆ ಮೂಲಕ ಸಂಗ್ರಹವಾದ ಹಣವನ್ನ ಬಿಬಿಎಂಪಿ ಕಂಪನಿಗೆ ವರ್ಗಾವಣೆ ಮಾಡಲು ತಯಾರಿ ನಡೆಯುತ್ತಿದೆ. ನಗರದಲ್ಲಿ ಎಷ್ಟು ವಸತಿ, ವಾಣಿಜ್ಯ ಕಟ್ಟಡಗಳು ಇದೆ ಎಂಬ ಬಗ್ಗೆ ಈಗಾಗಲೇ ಸರ್ವೆ ನಡೆದಿದೆ. ದರ ನಿಗದಿಯಾದ್ರೆ, ವಾರ್ಷಿಕ 800 ಕೋಟಿ ಘನತ್ಯಾಜ್ಯ ಕಂಪನಿಗೆ ಆದಾಯ ಬರಲಿದೆ. ಅಂದುಕೊಂಡಂತೆ ಆದ್ರೆ ಮುಂದಿನ ದಿನಗಳಲ್ಲಿ ಘನತ್ಯಾಜ್ಯ ಸೇವಾ ಶುಲ್ಕ ಗ್ಯಾರಂಟಿ ಎನ್ನಲಾಗುತ್ತಿದೆ. ಇನ್ನು ಕಸ ಸಂಗ್ರಹಕ್ಕೆ 100 ರೂಪಾಯಿ ನಿಗದಿ ವಿಚಾರ 2016ರ ರೂಲ್ ಪ್ರಕಾರ ನೋಟಿಫಿಕೇಷನ್ ಆಗಿದೆ. ಆದ್ರೆ ಅದಕ್ಕಿಂತ ಕಡಿಮೆ ಹಣ ವಸೂಲಿಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಸರ್ಕಾರ ಅನುಮೋದನೆ ಕೊಟ್ಟ ಮೇಲೆ ಅದನ್ನ ನಿಗದಿ ಮಾಡ್ತೀವಿ. ನಮ್ಮ ರಾಜ್ಯದಲ್ಲೇ ಪಂಚಾಯಿತಿಗಳಲ್ಲಿ ಶುಲ್ಕ ವಸೂಲಾತಿ ನಡೀತಿದೆ. ಈಗ ನಾವು ಕಡಿಮೆ ಶುಲ್ಕವನ್ನ ನಿಗದಿಗೆ ಪ್ರಸ್ತಾವನೆ ಕೊಟ್ಟಿದ್ದೇವೆ. ಸರ್ಕಾರ ಅನುಮತಿ ಕೊಟ್ಟರೇ ಶುಲ್ಕ ವಸೂಲಿ ಮಾಡ್ತೀವೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

# ನನಗೆ ಯಾರೂ ಹಿತಶತ್ರುಗಳಿಲ್ಲ, ನನಗೆ ನಾನೇ ಶತ್ರು: ಸುರೇಶ್

**ರಾಮನಗರ:** ಲೋಕಸಭಾ ಚುನಾವಣೆಯಲ್ಲಿ ಪರಾಭವಗೊಂಡ ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ರಾಮನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಸೋಲಿನ ಆತ್ಮಾವಲೋಕನ ಮಾಡಿದ್ದಾರೆ.

ಸ್ಥಳೀಯ ಶಾಸಕರು, ಮುಖಂಡರ ಜೊತೆ ಸುದ್ದಿಗೋಷ್ಠಿ ನಡೆಸಿದ ಅವರು, ಕ್ಷೇತ್ರದ ಕಾರ್ಯಕರ್ತರು ಹಾಗೂ ಮುಖಂಡರಿಗೆ ಧನ್ಯವಾದ ತಿಳಿಸಿದ್ದಾರೆ. ಕಳೆದ 10 ವರ್ಷ 8 ತಿಂಗಳ ಕಾಲ ಕ್ಷೇತ್ರದಲ್ಲಿ ಕೆಲಸ ಮಾಡಿದ್ದೇನೆ. ಎಲ್ಲರೂ ಸಹಕಾರ, ಪ್ರೋತ್ಸಾಹ ಕೊಟ್ಟಿದ್ದಾರೆ. ನಾನು ರಾಜಕಾರಣಕ್ಕೆ ಬರಬೇಕು ಅಂತ ಬಂದವನಲ್ಲ. ರಾಜಕೀಯ ಆಸಕ್ತಿಯೂ ನನಗಿರಲಿಲ್ಲ. ಉಪಚುನಾವಣೆಯಲ್ಲಿ ರಾಜ್ಯದ ನಾಯಕರು ನನ್ನಮೇಲೆ ಹಾಗೂ ಡಿಕೆಶಿ ಮೇಲೆ ಒತ್ತಡ ಹಾಕಿ ನಿಲ್ಲಿಸಿದರು. ಆಗ ಕಾಂಗ್ರೆಸ್‌ನ ಎಲ್ಲಾ ನಾಯಕರು, ಮುಖಂಡರು ಚುನಾವಣೆ ಮಾಡಿ ಗೆಲ್ಲಿಸಿದರು. ಮೂರು ಚುನಾವಣೆಯಲ್ಲಿ ನಾನು ಈ ಕ್ಷೇತ್ರದಲ್ಲಿ ಸೇವೆ ಮಾಡಿದ್ದೇನೆ. ಪ್ರಾಮಾಣಿಕವಾಗಿ ಜಿಲ್ಲೆಯ ಅಭಿವೃದ್ಧಿಗೆ ಕೆಲಸ ಮಾಡಿದ್ದೇನೆ ಎಂದರು.

ನಾನು ಮಾಡಿದ ಕೆಲಸ ಕಾರ್ಯಗಳನ್ನ ಜನರ ಮುಂದೆ ಇಟ್ಟು ಈ ಬಾರಿ ಚುನಾವಣೆಗೆ ಹೋದೆ. ಕನ್ನಡಿಗರ ಪರವಾಗಿ ಗಟ್ಟಿಧ್ವನಿ ಎತ್ತಿ ಟೀಕೆಗೂ ಒಳಗಾದೆ. ಕರ್ನಾಟಕದ ತೆರಿಗೆ ಹಣದ ವಿಚಾರವಾಗಿ ಹೋರಾಟ ಮಾಡಿದೆ. ನಾನು ಮತ ಕೇಳುವ ಸಂದರ್ಭದಲ್ಲಿ ನನ್ನ ಕೆಲಸಕ್ಕೆ ಕೂಲಿ ಕೊಡಿ ಅಂತ ಚುನಾವಣೆಗೆ ಬಂದೆ. ಆದರೆ ಜನ ಅದನ್ನು ತಿರಸ್ಕಾರ ಮಾಡಿದ್ದಾರೆ. ಈ ಸೋಲನ್ನು ಸಂತೋಷದಿಂದ ಒಪ್ಪಿದ್ದೇನೆ ಎಂದು ಹೇಳಿದರು.

ನನಗೆ ಯಾರೂ ಹಿತಶತ್ರುಗಳಿಲ್ಲ, ನನಗೆ ನಾನೇ ಶತ್ರು. ಜನ ನನಗೆ ವಿರಾಮ ಕೊಟ್ಟಿದ್ದಾರೆ. ಅದನ್ನು



ನಾನು ಒಪ್ಪಿಕೊಳ್ಳುತ್ತೇನೆ. ಈ ಚುನಾವಣೆಯ ಸೋಲು ನನ್ನ ವೈಯಕ್ತಿಕ ಸೋಲು. ಇದಕ್ಕೆ ನಾನೇ ಹೊಣೆ. ಇದು ಬಿಜೆಪಿ-ಜೆಡಿಎಸ್‌ನ ಗೆಲುವಲ್ಲ. ಇದು ಜಾತಿ, ಧರ್ಮ, ಭಾವನೆ, ಅಸೂಯೆಯ ಗೆಲುವು. ಗ್ಯಾರಂಟಿಗಳಿಗಿಂತ ಪ್ರಬಲವಾಗಿರೋದು ಜಾತಿ, ಧರ್ಮ, ಭಾವನೆ. ರಾಜಕಾರಣದಲ್ಲಿ ಜಾತಿ ಇಷ್ಟೊಂದು ಪ್ರಮುಖ ಆಗುತ್ತೆ ಅಂತ ನಿರೀಕ್ಷೆ ಮಾಡಿರಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಚನ್ನಪಟ್ಟಣ ಬೈ ಎಲೆಕ್ಷನ್‌ನಲ್ಲಿ ಸ್ಪರ್ಧೆ ಮಾಡುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಾನು ಎಲ್ಲೂ ಸ್ಪರ್ಧೆ ಮಾಡಲ್ಲ. ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ. ಚನ್ನಪಟ್ಟಣದಲ್ಲೇ ಸಮರ್ಥ ನಾಯಕರಿದ್ದಾರೆ. ನನಗೆ ರಾಜಕಾರಣವೇ ಆಸಕ್ತಿ ಇರಲಿಲ್ಲ. ನಾನು ಅಭಿವೃದ್ಧಿ ಮಾಡಲು ರಾಜಕೀಯಕ್ಕೆ ಬಂದೆ. ಆದರೆ ಜನ ಅದನ್ನು ತಿರಸ್ಕಾರ ಮಾಡಿದರು ಎಂದು ಭಾವುಕರಾದರು.

## ಬದುಕುಳಿದವರ ಮಾತು

ಬಸ್ ನಲ್ಲಿ 30-40 ಮಂದಿ ಇದ್ದ ಕುರಿತು ಮಾಹಿತಿ ಲಭ್ಯವಾಗಿದೆ.ಸುಮಾರು 12 ಮಂದಿ ಉಗ್ರರು ಎರಡು ಅಥವಾ ಮೂರು ಗುಂಪುಗಳಾಗಿ ಜಮ್ಮು ಮತ್ತು ಕಾಶ್ಮೀರದ ಅರಣ್ಯ ಪ್ರದೇಶದೊಳಗೆ ಚಲಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ,. ಹಾಗಾಗಿ ಡ್ರೋನ್ ವ್ಯವಸ್ಥೆ ಮಾಡಲಾಗಿದ್ದು, ಕಾಡಿನ ಮೇಲೆ ತೀವ್ರ ನಿಗಾವಹಿಸಲಾಗಿದೆ.

ಕಳೆದ ಐದು ವರ್ಷಗಳಲ್ಲಿ ಪೂಂಚ್ ಹಾಗೂ ರಜೌರಿಯಲ್ಲಿ ಈ ರೀತಿಯ ಹಲವು ಗುಂಡಿನ ದಾಳಿಗಳು ನಡೆದಿವೆ. ಜೂನ್ 29ರಿಂದ ಅಮರನಾಥ ಯಾತ್ರೆ ಆರಂಭವಾಗುತ್ತಿದ್ದು, ಈ ಕುರಿತು ಗೃಹ ಸಚಿವ ಅಮಿತ್ ಶಾ ಈ ದಾಳಿಯನ್ನು ಗಂಭೀರವಾಗಿ ಪರಿಗಣಿಸಿದ್ದಾರೆ.

## ಪ್ರಧಾನಿ ಮೋದಿ

''ಜೂನ್ 9 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರು ಭಾಗಿಯಾಗಲಿಲ್ಲ. ಈ ಕುರಿತು ಟ್ವೀಟ್ ಮಾಡಿದ ಹೆಚ್ ಡಿ ದೇವೇಗೌಡ ''ಜೂನ್ 9 ರಂದು ಪ್ರಧಾನಿ ಮೋದಿ ಮೂರನೇ ಬಾರಿಗೆ ಪ್ರಮಾಣ ವಚನ ಸ್ವೀಕರಿಸಿದರು. ಈ ಐತಿಹಾಸಿಕ ಸಂದರ್ಭದಲ್ಲಿ ನಾನು ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದೇನೆ. ಅನಾರೋಗ್ಯ ಹಿನ್ನೆಲೆಯಲ್ಲಿ ಕಾರ್ಯಕ್ರಮಕ್ಕೆ ಹಾಜರಾಗಲು ಆಗಲಿಲ್ಲ. ಆದರೆ ನಾನು ಟಿವಿಯಲ್ಲಿ ಸಮಾರಂಭವನ್ನು ನೋಡಿದ್ದೇನೆ. ಕಾಂಗ್ರೆಸ್ ಏನೇ ಹೇಳಿದರೂ ಭಾರತೀಯ ಪ್ರಜಾಪ್ರಭುತ್ವ ಸದೃಢವಾಗಿದೆ'' ಎಂದು ಹೆಚ್ ಡಿ ದೇವೇಗೌಡ ಜೂನ್ 9 ರಂದು ಟ್ವೀಟ್ ಮಾಡಿದ್ದರು.

ಲೋಕಸಭೆ ಚುನಾವಣೆಗೆ 8 ತಿಂಗಳು ಇರುವಾಗಲೇ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡವು. ಈ ಮೈತ್ರಿ ಹಿಂದೆ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರ ತಂತ್ರಗಾರಿಕೆ ಇದೆ. ವಿಧಾನಸಭೆ ಚುನಾವಣೆಯಲ್ಲಿ ಹೀನಾಯವಾಗಿ ಸೋತ ಬಳಿಕ ಎರಡೂ ಪಕ್ಷಗಳು ಒಗ್ಗಟ್ಟಾಗಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದವು. ಇದು ಯಶಸ್ವಿಯಾಯಿತು. ರಾಜ್ಯದಲ್ಲಿ ಬಿಜೆಪಿ 17 ಮತ್ತು ಜೆಡಿಎಸ್ 2 ಕ್ಷೇತ್ರಗಳಲ್ಲಿ ಗೆದ್ದವು.

ಮಂಡ್ಯ ಲೋಕಸಭಾ ಕ್ಷೇತ್ರದಿಂದ ಗೆಲುವು ಸಾಧಿಸಿರುವ ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ಸಚಿವ ಸ್ಥಾನ ಸಿಕ್ಕಿದೆ. ಇದು ರಾಜ್ಯದಲ್ಲಿ ಜೆಡಿಎಸ್ ಮತ್ತೆ ಪುಟಿದೇಳಲು ಅನುಕೂಲಕರವಾಗಿದೆ. ಜೆಡಿಎಸ್ ರಾಜ್ಯಾದ್ಯಂತ ಪಕ್ಷ ಸಂಘಟನೆ ಅನುಕೂಲವಾಗಲಿದೆ.

## ಪ್ರಕರಣ ದಾಖಲು

ದೂರಿನ ಆಧಾರದ ಮೇಲೆ ಸಂಸದ ಮತ್ತು ಅವರ ಆಪ್ತ ಅಮಿತ್ ಯಾದವ್ ವಿರುದ್ಧ ಮೊಫುಸಿಲ್ ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ತನಿಖೆ ನಡೆಯುತ್ತಿದೆ. ಮತ್ತೊಂದೆಡೆ ಪಪ್ಪು ಯಾದವ್ ಮಾತನಾಡಿ, ತಾನು ರಾಜಕೀಯದಲ್ಲಿ ಬೆಳೆಯುತ್ತಿದ್ದೇನೆ ಎನ್ನುವ ಹೊಟ್ಟೆಕಿಚ್ಚಿನಿಂದ ಕೆಲವರು ಪಿತೂರಿ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಸುಪ್ರೀಂ ಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಮತ್ತು ತಪ್ಪಿತಸ್ಥರು ಯಾರೇ ಆಗಿದ್ದರೂ ಅವರನ್ನು ಗಲ್ಲಿಗೇರಿಸಬೇಕು''ಎಂದು ಅವರು ಹೇಳಿದರು. ಇತ್ತೀಚೆಗಷ್ಟೇ ನಡೆದ ಲೋಕಸಭಾ ಚುನಾವಣೆಯಲ್ಲಿ ಪಪ್ಪು ಯಾದವ್ ಅವರು ಬಿಹಾರದ ಪೂರ್ಣಿಯಾ ಲೋಕಸಭಾ ಕ್ಷೇತ್ರದಿಂದ ಆಯ್ಕೆಯಾದರು.

ಅವರು ಎರಡು ಅವಧಿಯ ಜೆಡಿ (ಯು) ಸಂಸದ ಸಂತೋಷ್ ಕುಶ್ವಾಹಾ ಅವರಿಗಿಂತ 23,847 ಮತಗಳ ಅಂತರದಿಂದ ಪೂರ್ಣಿಯಾ ಸ್ಥಾನವನ್ನು ಗೆದ್ದರು. ಸ್ವತಂತ್ರ ಅಭ್ಯರ್ಥಿ 5.67 ಲಕ್ಷ ಮತಗಳನ್ನು ಪಡೆದರೆ, ಜೆಡಿ (ಯು) ಅಭ್ಯರ್ಥಿ 5.43 ಲಕ್ಷ ಮತಗಳನ್ನು ಪಡೆದಿದ್ದಾರೆ.

## ದಾಸ್ ರಾಜೀನಾಮೆ

ರಾಜ್‌ಗಂಗ್‌ಪುರ, ಬಾಸುದೇವಪುರ, ಭವಾನಿಪಟ್ನಾ, ಜಿ.ಉದಯಗಿರಿ, ಬಾರಾಬತಿ-ಕಟಕ್, ಸನಖೇಮುಂಡಿ, ಮಹಾನಾ, ಗುಣುಪುರ್, ಬಿಸ್ಸಾಮ್ ಕಟಕ್, ರಾಯಗಢ, ಲಕ್ಷ್ಮೀಪುರ, ಜೇಪೋರ್, ಪೊತಂಗಿ ಸ್ಥಾನಗಳನ್ನು ಗೆದ್ದಿತ್ತು.

ಒಡಿಶಾ ಲೋಕಸಭಾ ಚುನಾವಣೆಯ ಫಲಿತಾಂಶಗಳು ಲೋಕಸಭೆ ಚುನಾವಣೆಯಲ್ಲೂ ಬಿಜೆಪಿ ಭರ್ಜರಿ ಗೆಲುವು ಸಾಧಿಸಿದೆ. ಇಲ್ಲಿನ 21 ಲೋಕಸಭಾ ಕ್ಷೇತ್ರಗಳ ಪೈಕಿ 20ರಲ್ಲಿ ಬಿಜೆಪಿ ಗೆದ್ದಿದೆ. ಅದೇ ಸಮಯದಲ್ಲಿ ಕಾಂಗ್ರೆಸ್ ಕೇವಲ ಒಂದು ಸ್ಥಾನಕ್ಕೆ ಸೀಮಿತವಾಗಿತ್ತು. ಆದರೆ, ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಆಡಳಿತ ಪಕ್ಷ ಬಿಜೆಡಿ ಖಾತೆ ತೆರೆಯಲೂ ಸಾಧ್ಯವಾಗಿಲ್ಲ.

2019 ಒಡಿಶಾ ಚುನಾವಣಾ ಸ್ಥಿತಿ 2019ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಡಿ 112 ಸ್ಥಾನಗಳನ್ನು ಪಡೆದಿತ್ತು. ಬಿಜೆಪಿ 23 ಸ್ಥಾನಗಳನ್ನು ಪಡೆದರೆ, ಕಾಂಗ್ರೆಸ್ ಒಂಬತ್ತು, ಸಿಪಿಐ(ಎಂ) ಒಂದು ಸ್ಥಾನ ಮತ್ತು ಒಂದು ಸ್ಥಾನ ಸ್ವತಂತ್ರ ಅಭ್ಯರ್ಥಿ ಪಾಲಾಯಿತು. ಈ ಚುನಾವಣೆಯಲ್ಲಿ ಬಿಜೆಡಿ ಶೇ.45ರಷ್ಟು ಮತಗಳನ್ನು ಪಡೆದಿದೆ. ಆದರೆ ಬಿಜೆಪಿ ಶೇ 33ರಷ್ಟು ಮತಗಳನ್ನು ಪಡೆದಿದೆ. ಕಾಂಗ್ರೆಸ್ ಶೇ.16 ಮತಗಳನ್ನು ಪಡೆದರೆ ಇತರರು ಶೇ.6 ಮತಗಳನ್ನು ಪಡೆದಿದ್ದಾರೆ.

## ವಿದ್ಯುತ್ ವಾಪಸ್

2023ರ ಅಕ್ಟೋಬರ್ ನಿಂದ 2024ರ ಮೇ ವರೆಗೆ ಪ್ರತಿದಿನ ಉತ್ತರ ಪ್ರದೇಶದಿಂದ 300 ರಿಂದ 600 ಮೆಗಾವ್ಯಾಟ್ ವಿದ್ಯುತ್ ಪಡೆದುಕೊಳ್ಳಲಾಗಿದೆ. ಇದೇ ರೀತಿ ಪಂಜಾಬ್ ನಿಂದ 2023ರ ನವೆಂಬರ್ ನಿಂದ 2024ರ ಮೇ ವರೆಗೆ ಪ್ರತಿದಿನ 500 ಮೆಗಾವ್ಯಾಟ್ ವಿದ್ಯುತ್ ಪಡೆದುಕೊಳ್ಳಲಾಗಿದೆ. ಇದೀಗ, ಜೂನ್ 16ರಿಂದ ಸೆಪ್ಟೆಂಬರ್ 30ರವರೆಗೆ ಹಿಂತಿರುಗಿಸಲಾಗುತ್ತದೆ ಎಂದು ಇಂಧನ ಸಚಿವ ಕೆಜೆ ಜಾರ್ಜ್ ಹೇಳಿದರು.

ಈ ವರ್ಷ ಫೆಬ್ರವರಿ 12 ರಂದು ರಾಜ್ಯದಲ್ಲಿ 17,220 ಮೆಗಾವ್ಯಾಟ್ ವಿದ್ಯುತ್ ಬಳಕೆಯಾಗಿದೆ. 2023ರ ಅಗಸ್ಟ್ 25 ರಂದು 16,950 ಮೆಗಾವ್ಯಾಟ್ ವಿದ್ಯುತ್ ಬಳಕೆಯಾಗಿದೆ. ಇದೇ ದಿನಾಂಕದಂದು 2022ರಲ್ಲಿ 11,268 ಮೆಗಾವ್ಯಾಟ್ ವಿದ್ಯುತ್ ಬಳಕೆಯಾಗಿತ್ತು. ಕಳೆದ ವರ್ಷ ಅಗಸ್ಟ್ ನಲ್ಲಿ ರಾಜ್ಯದಲ್ಲಿ ಪ್ರತಿದಿನ 1500-2000 ಮೆಗಾವ್ಯಾಟ್ ವಿದ್ಯುತ್ ಕೊರತೆಯಾಗಿತ್ತು ಎಂದು ಮಾಹಿತಿ ನೀಡಿದರು.

## ಕ್ಯಾಂಟೀನ್

ಸಂಚಾರ ನಿಲ್ಲಿಸಿದ ಇಂದಿರಾ ಮೊಬೈಲ್ ಕ್ಯಾಂಟೀನ್ ಗಳು: ಜಯನಗರದ 9ನೇ ಬ್ಲಾಕ್‌ನಲ್ಲಿರುವ ಸಂಚಾರಿ ಇಂದಿರಾ ಮೊಬೈಲ್ ಕ್ಯಾಂಟೀನ್ ನ ಡೋರ್ ಮುರಿದು ಹೋಗಿದೆ. ಟಯರ್ ಕಾಣೆಯಾಗಿದೆ. ವಸ್ತುಗಳು ಎಲ್ಲಂದರಲ್ಲಿ ಬಿದ್ದಿದ್ದಾವೇ, ಸ್ವಚ್ಛತೆಯೇ ಮರಿಚಿಕೆಯಾಗಿದೆ. ಇಲ್ಲಿನ ಇಂದಿರಾ ಮೊಬೈಲ್ ಕ್ಯಾಂಟೀನ್ ದುಸ್ಥಿತಿಗೆ ತಲುಪಿದ್ದು ಹೀಗೆಯೇ ಜನರಿಗೆ ಊಟ-ತಿಂಡಿ ಪೂರೈಕೆ ಮಾಡಲಾಗ್ತಿದೆ.

ಚಾಮರಾಜಪೇಟೆಯ ಹನುಮಂತನಗರದಲ್ಲಿ ಎರಡು ವರ್ಷದಿಂದ ಇಂದಿರಾ ಮೊಬೈಲ್ ಕ್ಯಾಂಟೀನ್ ನಿಂತಲ್ಲೇ ನಿಂತಿದೆ. ಗಾಡಿ ತುಕ್ಕು ಹಿಡಿದಿದ್ದು ಗುಜರಿಗೆ ಸೇರುವಂತಾಗಿದೆ. ಶ್ರೀನಗರ ಬಸ್ ನಿಲ್ದಾಣದಲ್ಲಿ ಸಾವಿರಾರು ಜನರಿಗೆ ಈ ಕ್ಯಾಂಟೀನ್ ಉಪಯೋಗವಾಗ್ತಿತ್ತು. ಕಳೆದ ಎರಡು ವರ್ಷದ ಹಿಂದೆ ಸ್ಥಗಿತಗೊಂಡಿದ್ದು ಬಡವರು ಊಟಕ್ಕೆ ಪರದಾಡುವಂತಾಗಿದೆ. ಬಿಬಿಎಂಪಿ ಅಧಿಕಾರಿಗಳ ಅಸಡ್ಡೆಯೇ ಇದ್ದಕ್ಕೆ ಕಾರಣ ಎಂದು ಸ್ಥಳೀಯ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಟ್ನಲ್ಲಿ ಸುಮಾರು 16 ಇಂದಿರಾ ಮೊಬೈಲ್ ಕ್ಯಾಂಟೀನ್ ಗಳು ನಿರ್ವಹಣೆ ಕೊರತೆಯಿಂದ ಕೆಟ್ಟು ಹೋಗಿದ್ದು. ಕಳೆದ ವರ್ಷ ಆಗಸ್ಟ್ ನಲ್ಲಿ ದುರಸ್ತಿ ಮಾಡಿ ಮರು ಆರಂಭಕ್ಕೆ ಸರ್ಕಾರ ಸೂಚಿಸಿತ್ತು. ಅದರಂತೆ ಬಿಬಿಎಂಪಿ 1.22 ಕೋಟಿ ರೂಪಾಯಿ ಖರ್ಚು ಮಾಡ್ತೀವಿ ಅಂದಿತ್ತು. ಆದರೆ ಅವುಗಳ ಸ್ಥಿತಿ ಮಾತ್ರ ಇನ್ನೂ ಸರಿಯಾಗಿಲ್ಲ. ಜನರ ಉಪಯೋಗಕ್ಕೆ ಬಾರದೇ ಮೂಲೆ ಸೇರಿದ್ರೆ, ಓಪನ್ ಇರುವ ಕಡೆ ಸ್ವಚ್ಚತೆಯೇ ಮಾಯವಾಗಿದೆ.

## ಜನರಲ್ಲಿ ಆತಂಕ

ಡೆಂಗ್ಯೂ ಪ್ರಕರಣಗಳ ಸಂಖ್ಯೆ ಇಳಿಮುಖದ ಲಕ್ಷಣ ಕಾಣ್ತಿಲ್ಲ, ತರೀಕೆರೆ, ಕಡೂರು, ಚಿಕ್ಕಮಗಳೂರು, ಮೂಡಿಗೆರೆ,

### ಮೊದಲನೇ ಪುಟದಿಂದ...

ಎನ್. ಆರ್. ಪುರ, ಕೊಪ್ಪ ತಾಲೂಕುಗಳಲ್ಲಿ ದಿನದಿಂದ ದಿನಕ್ಕೆ ಡೆಂಗ್ಯೂ ಸಂಖ್ಯೆ ದ್ವಿಗುಣಗೊಳ್ಳುತ್ತಿದೆ. ಒಂದು ದಶಕದ ಬಳಿಕ ಈ ಪರಿ ಮಹಾಮಾರಿ ಹರಡಿದ್ದು ಇದೇ ಮೊದಲು. ಬೇಸಿಗೆ ಅವಧಿಯಲ್ಲಿ ಮಳೆ ಇಲ್ಲದೆ ಚರಂಡಿ, ಮೋರಿ-ಕಾಲುವೆಗಳಲ್ಲಿ ನೀರು ನಿಂತು ಸೊಳ್ಳೆಗಳ ಲಾರ್ವ ಪ್ರಮಾಣ ಹೆಚ್ಚಾಗಿ ಸೊಳ್ಳೆಗಳ ಕಾಟವು ಜಿಲ್ಲೆಯಲ್ಲಿ ಮಿತಿ ಮೀರಿದೆ. ಇದರ ಪರಿಣಾಮ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ ರಂದು ವೈದ್ಯರು ತಿಳಿಸಿದ್ದಾರೆ.

ಜೊತೆಗೆ ವಾರಕ್ಕೊಮ್ಮೆ ನೀರು ಬರುತ್ತೆ ಅಂತ ನೀರನ್ನ ಶೇಖರಿಸಿಕೊಂಡು ಮುಚ್ಚದೆ ಇರೋದ್ರಿಂದಲೂ ಡೆಂಗ್ಯೂ ಬಂದಿದೆ ಅನ್ನೋದು ವೈದ್ಯರ ಸ್ಪಷ್ಟನೆ. ರೋಗದಿಂದ ಆಸ್ಪತ್ರೆಗೆ ದಾಖಲಾದ ರೋಗಿಗಳನ್ನು ಅವಶ್ಯಕತೆ ಇದ್ದರೆ ಮಾತ್ರ ಅಡ್ಮಿಟ್ ಮಾಡಿಕೊಳ್ಳಲಾಗುತ್ತಿದ್ದು, ಉಳಿದವರನ್ನು ಮನೆಯಲ್ಲಿಯೇ ಚಿಕಿತ್ಸೆ ನೀಡಲಾಗುತ್ತಿದೆ ಎಂದು ವಿಚಕ್ಷಣ ಅಧಿಕಾರಿ ಬಾಲಕೃಷ್ಣ ತಿಳಿಸಿದರು.

ಒಟ್ಟಾರೆ, ಡೆಂಗ್ಯೂ ಆತಂಕ ಬೇಡ, ಎಚ್ಚರವಿರಲಿ ಎನ್ನುವ ಸಂದೇಶವನ್ನು ಚಿಕ್ಕಮಗಳೂರು ಆರೋಗ್ಯ ಇಲಾಖೆ ನೀಡುತ್ತಿದ್ದು, ಸೊಳ್ಳೆಗಳಿಂದ ಸೂಕ್ತ ರಕ್ಷಣೆ ಪಡೆಯಲು ಜನರಿಗೆ ಸೂಕ್ತ ಮಾರ್ಗದರ್ಶನ ನೀಡಲಾಗುತ್ತಿದೆ. ಆದರೂ, ಈ ಪರಿ ಡೆಂಗ್ಯೂ ಮಹಾಮಾರಿ ಜಿಲ್ಲೆಯನ್ನು ಕಾಡುತ್ತಿದ್ದು ಸರ್ಕಾರ ಹಾಗೂ ಆರೋಗ್ಯ ಇಲಾಖೆ ಮತ್ತಷ್ಟು ಎಚ್ಚೆತ್ತುಕೊಳ್ಳುವ ಅವಶ್ಯಕತೆ ಇದೆ. ಇಲ್ಲವಾದರೆ ಮುಂದಿನ ದಿನಗಳಲ್ಲಿ ಬೆಡ್ ಗಳ ಸಮಸ್ಯೆ ಎದುರಾದರು ಆಶ್ಚರ್ಯವಿಲ್ಲ.

## ಕಲ್ಲೇಟು

ನಿಮ್ಮ ಸರ್ವ ಜನಾಂಗದ ಶಾಂತಿಯ ತೋಟದಲ್ಲಿ ಮುಸ್ಲಿಂ ಮತಾಂಧ ಮುಳ್ಳುಗಳೇ ಹೆಚ್ಚಾಗಿದ್ದು, ಹಿಂದೂಗಳಿಗೆ, ದೇಶಪ್ರೇಮಿಗಳಿಗೆ ನೆಮ್ಮದಿ ಇಲ್ಲದಂತಾಗಿದೆ' ಎಂದು ಅಶೋಕ್ ಉಲ್ಲೇಖಿಸಿದ್ದಾರೆ.

ಅಶೋಕ್ ಎಕ್ಸ್ ಸಂದೇಶ

ಮತ್ತೊಂದೆಡೆ, ಬಿಜೆಪಿಯ ಅಧಿಕೃತ ಎಕ್ಸ್ ಹ್ಯಾಂಡಲ್ ನಲ್ಲಿಯೂ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಗಿದೆ. ಇನ್ನು ಕರ್ನಾಟಕದಲ್ಲಿ ಭಾರತ್ ಮಾತಾ ಕೀ ಜೈ ಎಂದು ಕೂಗುವುದು ಸುರಕ್ಷಿತವಲ್ಲ. ತುಘಲಕ್ ಯುಗ ಮತ್ತೆ ಬಂದಂತೆ ಭಾಸವಾಗುತ್ತಿದೆ. ಸಿದ್ದರಾಮಯ್ಯ ನೇತೃತ್ವದ ಆಡಳಿತದಲ್ಲಿ ಭಾರತದ ವಿರುದ್ಧ ಬೆಳೆಯುತ್ತಿರುವ ದ್ವೇಷವು ಆತಂಕಕಾರಿಯಾಗಿದೆ. ಮಂಗಳೂರಿನಲ್ಲಿ ಭಾರತ್ ಮಾತಾ ಕಿ ಜೈ ಎಂದು ಘೋಷಣೆ ಕೂಗುತ್ತಾ ಪ್ರಧಾನಿ ಮೋದಿಯವರ ಚುನಾವಣಾ ಗೆಲುವಿನ ಸಂಭ್ರಮದಲ್ಲಿದ್ದ ಬಿಜೆಪಿ ಕಾರ್ಯಕರ್ತರಾದ ಹರೀಶ್ ಅಂಚನ್ ಮತ್ತು ನಂದಕುಮಾರ್ ಅವರ ಮೇಲೆ ಅಬೂಬಕ್ಕರ್, ಬಶೀರ್, ಸಿದ್ದಿಕ್, ಮೋನು ಮತ್ತು ಇತರ 20 ಮಂದಿ ಬರ್ಬರವಾಗಿ ಇರಿದಿದ್ದಾರೆ. ಈ ಹೇಯ ಕೃತ್ಯವು ಕಾಂಗ್ರೆಸ್ ಸರ್ಕಾರದ ಅಡಿಯಲ್ಲಿ ಕರ್ನಾಟಕದಲ್ಲಿ ಹದಗೆಟ್ಟ ಕಾನೂನು-ಸುವ್ಯವಸ್ಥೆಯನ್ನು ಎತ್ತಿ ತೋರಿಸುತ್ತದೆ. ಹಿಂಸಾತ್ಮಕ ಘಟನೆಗಳು ಮತ್ತು ಅನಿಯಂತ್ರಿತ ಆಕ್ರಮಣಶೀಲತೆಯ ಹೆಚ್ಚಳವು ಭಯ ಮತ್ತು ಅಸ್ಥಿರತೆಯ ವಾತಾವರಣವನ್ನು ಸೃಷ್ಟಿಸುತ್ತಿದೆ. ಇದು ನಾಗರಿಕರನ್ನು ರಕ್ಷಿಸಲು ಮತ್ತು ಶಾಂತಿಯನ್ನು ಕಾಪಾಡಿಕೊಳ್ಳಲು ಬಲವಾದ ಆಡಳಿತ ಮತ್ತು ಭದ್ರತಾ ಕ್ರಮಗಳ ತುರ್ತು ಅಗತ್ಯವನ್ನು ಒತ್ತಿಹೇಳುತ್ತದೆ ಎಂದು ಬಿಜೆಪಿ ಉಲ್ಲೇಖಿಸಿದೆ.

**ಬಿಜೆಪಿ ಎಕ್ಸ್ ಸಂದೇಶ:** ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ ಕೂಡ ಘಟನೆಯನ್ನು ಖಂಡಿಸಿದ್ದು, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಕಾಂಗ್ರೆಸ್ ಸರ್ಕಾರವು ಮೂಲಭೂತವಾದಿಗಳನ್ನು ಓಲೈಸುತ್ತಿರುವ ಕಾರಣ ಮತ್ತು ಅವರು ಕಾನೂನಿಗೆ ಹೆದರುವುದಿಲ್ಲ ಎಂಬ ಕಾರಣದಿಂದಾಗಿ ಇಂಥ ಘಟನೆಗಳು ನಡೆಯುತ್ತಿವೆ ಎಂದು ಟೀಕಿಸಿದ್ದಾರೆ.

ತಪ್ಪಿತಸ್ಥರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟದ ಮೂಲಕ ಉತ್ತರ ನೀಡಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

## ದಂಡ..!

ಜೂನ್ 12 ವರೆಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಕೆ ಮಾಡದ ವಾಹನ ಸವಾರರ ಮೇಲೆ ಕ್ರಮವಿಲ್ಲ ಎಂದು ಸಾರಿಗೆ ಇಲಾಖೆ ಹೇಳಿತ್ತು. ಆದರೆ, ಇದೀಗ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಕೆ ಅವಧಿ ಮತ್ತೆ ವಿಸ್ತರಣೆಯಿಲ್ಲ, ಡೆಡ್ ಲೈನ್ ನೀಡಿದ್ರೂ ಹೈ ಸೆಕ್ಯೂರಿಟಿ ರಿಜಿಸ್ಟ್ರೇಷನ್ ನಂಬರ್ ಪ್ಲೇಟ್ ಆಳವಡಿಸದ ವಾಹನ ಸವಾರರ ಮೇಲೆ ಆರ್‌ಟಿಓ ಸಮರ ಸಾರಲು ಮುಂದಾಗಿದೆ.

**ಹೆಚ್‌ಎಸ್‌ಆರ್‌ಪಿ ನಂಬರ್‌ಪ್ಲೇಟ್: ಜೂ.12ವರೆಗೂ ದಂಡವಿಲ್ಲ:** ಏಪ್ರಿಲ್ 2019 ಕ್ಕಿಂತ ಮೊದಲು ನೋಂದಣಿ ಮಾಡಿಕೊಂಡ ದ್ವಿಚಕ್ರ, ತ್ರಿಚಕ್ರ, ಲಘು, ಮಧ್ಯಮ, ಭಾರಿ ಕಾರು ಸೇರಿ ಎಲ್ಲಾ ವಾಹನಗಳಿಗೆ ನಿಯಮ ಅನ್ವಯವಾಗಲಿದೆ. ಆದ್ರೂ ಇಲ್ಲಿಯವರೆಗೆ ರಾಜ್ಯದಲ್ಲಿ ಇಲ್ಲಿಯವರೆಗೆ 35 ಲಕ್ಷ ವಾಹನಗಳಿಗೆ ಮಾತ್ರ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಕೆ ಮಾಡಲಾಗಿದೆ. ಇನ್ನೂ 1.54 ಕೋಟಿ ವಾಹನಗಳಿಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಸಬೇಕಿದೆ.

ಈಗಾಗಲೇ ಸಾರಿಗೆ ಇಲಾಖೆ ಮೂರು ಬಾರಿ ಡೆಡ್‌ಲೈನ್ ವಿಸ್ತರಣೆ ಮಾಡಿದೆ. ಇದೀಗ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಕೆಗೆ ಒಂದು ದಿನವಷ್ಟೇ ಬಾಕಿ ಇದೆ. ಆದ್ರೂ ಹೆಚ್ ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಕೆಗೆ ವಾಹನ ಸವಾರರು ಆಸಕ್ತಿ ತೋಡುತ್ತಿಲ್ಲ. ಜೂನ್ 13 ರಿಂದ ನಂಬರ್ ಪ್ಲೇಟ್ ಆಳವಡಿಸಿಕೊಳ್ಳದ ವಾಹನ ಸವಾರರಿಗೆ ಭಾರೀ ಶಾಕ್ ಕಾದಿದೆ.

ಜೂನ್ 13 ರಿಂದ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಇಲ್ಲ ಅಂದರೆ ದಂಡ ವಸೂಲಿಗೆ ತೀರ್ಮಾನಿಸಲಾಗಿದೆ. ಮೊದಲ ಬಾರಿಗೆ 500 ದಂಡ, ಎರಡನೇ ಬಾರಿ ಸಿಕ್ಕಿ ಬಿದ್ದರೆ 1000 ದಂಡಕ್ಕೆ ತೀರ್ಮಾನ ಮಾಡಲಾಗಿದೆ. ರಾಜ್ಯದಲ್ಲಿ ಎಲ್ಲಾ ವಾಹನಗಳಿಗೂ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಕಡ್ಡಾಯ ಮಾಡೋಕೆ ಸಾರಿಗೆ ಇಲಾಖೆ ಹೊರಟಿದೆ. ಹೀಗಾಗಿ ವಾಹನ ಸವಾರರಿಗೆ ಬಿಸಿ ಮುಟ್ಟಿಸಲು ಸಾರಿಗೆ ಇಲಾಖೆ ಅಧಿಕಾರಿಗಳು ಮುಂದಾಗಿದ್ದಾರೆ.

ಈ ಮೊದಲು ನವೆಂಬರ್ 17 ಕ್ಕೆ ಗಡುವು ನೀಡಿತ್ತು. ಆದ್ರೆ ವಾಹನ ಸವಾರರು ನಿರಾಸಕ್ತಿ ತೋರಿದ ಕಾರಣ ಫೆಬ್ರವರಿ 17 ವಗೆಗೆ ವಿಸ್ತರಣೆ ಮಾಡಲಾಗಿತ್ತು. ಬಳಿಕ ಮೇ 31 ವರೆಗೂ ಅವಧಿ ವಿಸ್ತರಣೆ ಮಾಡಲಾಗೊತ್ತು. ಆದ್ರೆ, ನಿಗದಿಪಡಿಸಿರೋ ಗಡುವು ಅಂತ್ಯವಾಗಲು ಇನ್ನೊಂದು ದಿನವಷ್ಟೇ ಬಾಕಿ ಇದೆ. ಹೀಗಾಗಿ ಇನ್ಮೇಲೆ ಕಾರ್ಯಾಚರಣೆ ನಡೆಸಿ ದಂಡ ವಸೂಲಿ ಮಾಡಲು ಸಾರಿಗೆ ಇಲಾಖೆ ತೀರ್ಮಾನ ಮಾಡಿದೆ. ಬೇಗನೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಆಳವಡಿಸಿಕೊಳ್ಳುವಂತೆ ಮತ್ತೊಮ್ಮೆ ಸಾರಿಗೆ ಇಲಾಖೆ ಮನವಿ ಮಾಡಿಕೊಂಡಿದೆ. ನಂಬರ್ ಪ್ಲೇಟ್ ಇಲ್ಲವಾದಲ್ಲಿ ಇನ್ಮೇಲೆ ದಂಡ ಕಟ್ಟಲೇಬೇಕು.

## ಪ್ರಜ್ವಲ್

ಈ ಪ್ರಕರಣದಿಂದ ಕುಟುಂಬದ ಜೊತೆಗೆ ತನಗಾದ ಸಮಸ್ಯೆ ಹಾಗೂ ನೋವಿನಿಂದ ಹತಾಶೆಗೊಳಗಾಗಿರೋ ಪ್ರಜ್ವಲ್ ಕಂಗೆಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಸದ್ಯ ತನ್ನ ಅಪ್ಪ ಎಚ್‌ಡಿ ರೇವಣ್ಣ ಇದ್ದ ಕ್ವಾರಂಟೈನ್ ಸೆಲ್‌ನಲ್ಲೇ ಪ್ರಜ್ವಲ್ ರೇವಣ್ಣನಿಗೂ ವಾಸ್ತವ್ಯಕ್ಕೆ ಅನುಕೂಲ ಮಾಡಿಕೊಡಲಾಗಿದ್ದು, ವಿಚಾರಣಾಧೀನಾ ಕೈದಿ ನಂಬರ್ 5664 ಅನ್ನು ಅಧಿಕಾರಿಗಳು ಕೊಟ್ಟಿದ್ದಾರೆ. ರಾತ್ರಿ ಜೈಲೂಟ ಚಪಾತಿ ಅನ್ನ ಸಾಂಬರ್ ಮಾಡಿದ್ದು, ಆದರೆ ರಾತ್ರಿ ನಿದ್ರೆ ಮಾಡದೆ ಬ್ಯಾರಕ್‌ನಲ್ಲಿ ಪ್ರಜ್ವಲ್ ರೇವಣ್ಣ ಓಡಾಟ ನಡೆಸಿದ್ದಾನೆ. ಸದ್ಯ ಯಾವ ಸಿಬ್ಬಂದಿ ಅಧಿಕಾರಿಗಳ ಜೊತೆ ಮಾತನಾಡದೆ ತನ್ನಷ್ಟಕ್ಕೇ ತಾನೇ ಇದ್ದಾರೆ ಎಂದು ತಿಳಿದು ಬಂದಿದೆ.

ಅಷ್ಟೇ ಅಲ್ಲದೇ ಈ ಪ್ರಕರಣದಲ್ಲಿ ತನ್ನ ಕುಟುಂಬಕ್ಕೆ ಮುಜುಗರ ಹಾಗೂ ತಂದೆಯ ಬಂಧನ, ತಾಯಿಯ ವಿಚಾರಣೆ ಹಾಗೂ ತಾನೂ ಬಂಧನಕ್ಕೊಳಗಾಗಿ ಜೈಲುವಾಸ ಅನುಭವಿಸುತ್ತಿರುವ ಬಗ್ಗೆ ಪ್ರಜ್ವಲ್ ರೇವಣ್ಣ ತೀವ್ರ ಹತಾಶೆಗೊಳಗಾಗಿದ್ದು, ಹಾಸನದಲ್ಲಿ ಗೆಲುವಿನ ನಿರೀಕ್ಷೆಯಲ್ಲಿದ್ದೂ ಸೋಲಾಗಿದ್ರಿಂದ ಭವಿಷ್ಯದ ಬಗ್ಗೆ ಮತ್ತಷ್ಟು ಚಿಂತೆಗೀಡಾಗಿದ್ದಾರೆ ಎಂದು ತಿಳಿದು ಬಂದಿದೆ. ಇದರಿಂದಾಗಿ ರಾತ್ರಿಯೆಲ್ಲಾ ನಿದ್ದೆ ಮಾಡದೆ ಮುಂಜಾನೆ ನಿದ್ರೆಗೆ ಜಾರಿದ್ದಾರೆ ಎಂದು ತಿಳಿದು ಬಂದಿದೆ.

## ಬಳ್ಳಾರಿ ಉಸ್ತುವಾರಿ ಸ್ಥಾನಕ್ಕಾಗಿ ಸಂತೋಷ್ ಲಾಡ್, ಕಂಪ್ಲಿ ಗಣೇಶ್, ಭರತ್ ರೆಡ್ಡಿ ಲಾಬಿ

**ಬಳ್ಳಾರಿ:** ರಾಜ್ಯ ರಾಜಕಾರಣದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಬ್ರಹ್ಮಾಂಡ ಭ್ರಷ್ಟಾಚಾರ ಮತ್ತು ಅಧಿಕಾರಿ ಆತ್ಮಹತ್ಯೆ ಪ್ರಕರಣದಲ್ಲಿ ಕೊನೆಗೂ ಸಚಿವ ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ನಾಗೇಂದ್ರ ರಾಜೀನಾಮೆ ಬಳಿಕ ಬಳ್ಳಾರಿ ಉಸ್ತುವಾರಿ ಸಚಿವರು ಯಾರು ಎಂಬ ಪ್ರಶ್ನೆ ಮೂಡಿದೆ. ನಾಗೇಂದ್ರ ರಾಜೀನಾಮೆ ನೀಡಿ ವಾರ ಕಳೆಯುತ್ತಾ ಬಂತು, ಹೀಗಾಗಿ ಮುಂದಿನ ಉಸ್ತುವಾರಿ ಸಚಿವ ಯಾರಾಗಲಿದ್ದಾರೆ ಎಂದು ಕುತೂಹಲ ಮೂಡಿದೆ. ಜೊತೆಗೆ ಜಿಲ್ಲೆಯ ಅಭಿವೃದ್ಧಿ ಕೆಡಿಪಿ ಮಿಟಿಂಗ್ ಆಗಬೇಕಾದರೆ ಉಸ್ತುವಾರಿ ಸಚಿವರ ಅಗತ್ಯವಿದೆ. ಸದ್ಯಕ್ಕೆ ಭ್ರಷ್ಟಾಚಾರ ಪ್ರಕರಣದ ತನಿಖೆ ಶೀಘ್ರದಲ್ಲೇ ಮುಗಿಯುವ ಲಕ್ಷಣಗಳು ಕಾಣುತ್ತಿಲ್ಲ. ಹೀಗಾಗಿ ಉಸ್ತುವಾರಿ ಸಚಿವರ ನೇಮಕಾತಿ ಸರ್ಕಾರಕ್ಕೂ ಅನಿವಾರ್ಯವಾಗಿದೆ. ಇದನ್ನೇ ಲಾಭವಾಗಿಸಿಕೊಳ್ಳಲು ಕೆಲ ಕಾಂಗ್ರೆಸ್ ನಾಯಕರು ಲಾಬಿ ನಡೆಸುತ್ತಿದ್ದಾರೆ.

ಈ ಮಧ್ಯೆ, ಬೆಂಗಳೂರಿನಲ್ಲಿ ಸೋಮವಾರ ನಡೆದ ಕಾಂಗ್ರೆಸ್ ನಾಯಕರ ಸಭೆಯಲ್ಲಿ ಕ್ಯಾಬಿನೆಟ್ ವಿಸ್ತರಣೆ ಮತ್ತು ಕೆಲ ಖಾತೆಯ ಸಚಿವರ ಬದಲಾವಣೆ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದೆ. ಈಗಾಗಲೇ ಬಳ್ಳಾರಿ ಉಸ್ತುವಾರಿ ಸಚಿವ ಸ್ಥಾನ ಮತ್ತು ಕ್ರೀಡಾ ಸಚಿವ ಸ್ಥಾನ ಖಾಲಿ ಇದ್ದು ಶೀಘ್ರದಲ್ಲೇ ಸರ್ಕಾರ ನೇಮಕ ಮಾಡುವ ನಿರೀಕ್ಷೆ ಇದೆ. ಹೀಗಾಗಿ ಮತ್ತೆ ಬಳ್ಳಾರಿ ರಾಜಕಾರಣ ಹಿಡಿತ ಸಾಧಿಸಲು ಪೈಪೋಟಿ ಶುರುವಾಗಿದೆ. ಸಂತೋಷ್ ಲಾಡ್ ಬಳ್ಳಾರಿ ಉಸ್ತುವಾರಿ ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ ಎನ್ನಲಾಗುತ್ತಿದೆ. ಜೊತೆಗೆ ಕಂಪ್ಲಿ ಶಾಸಕ ಗಣೇಶ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಕೂಡ ಸಚಿವ ಸ್ಥಾನಕ್ಕೆ ಲಾಬಿ ನಡೆಸುತ್ತಿದ್ದಾರೆ. ಇದರ ಮಧ್ಯೆ ಅಕ್ಕ ಪಕ್ಕದ ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕರು ಕೂಡ ಸಚಿವ ಸ್ಥಾನ ಗಿಟ್ಟಿಸಿಕೊಳ್ಳಲು ತೆರೆಮರೆಯಲ್ಲಿ ಪ್ರಯತ್ನ ನಡೆಸುತ್ತಿದ್ದಾರೆ.

ಒಟ್ಟಿನಲ್ಲಿ ಗಣಿನಾಡು ಬಳ್ಳಾರಿ ಉಸ್ತುವಾರಿ ಸಚಿವ ಸ್ಥಾನ ಖಾಲಿಯಾಗುತ್ತಿದ್ದಂತೆಯೇ ಕಾಂಗ್ರೆಸ್‌ನಲ್ಲಿ ಪೈಪೋಟಿ ಶುರುವಾಗಿದೆ. ಸರ್ಕಾರ ಯಾರನ್ನು ಉಸ್ತುವಾರಿ ಮಂತ್ರಿಯನ್ನಾಗಿ ನೇಮಕ ಮಾಡಲಿದೆ ಎಂದು ಕಾದು ನೋಡಬೇಕಿದೆ.

## ಪರಪ್ಪನ ಅಗ್ರಹಾರದಲ್ಲಿ ವಿಚಾರಣಾ ಕೈದಿ ಮೇಲೆ ಹಲ್ಲೆ ಆರೋಪ

**ಬೆಂಗಳೂರು:** ಬೆಂಗಳೂರು ಕೇಂದ್ರ ಕಾರಾಗೃಹ (ಪರಪ್ಪನ ಅಗ್ರಹಾರ) ಜೈಲಿನಲ್ಲಿ ಮತ್ತೊಂದು ಹಲ್ಲೆ ಪ್ರಕರಣ ಬೆಳಕಿಗೆ ಬಂದಿದೆ. ಪರಪ್ಪನ ಅಗ್ರಹಾರ ಜೈಲು ಸಿಬ್ಬಂದಿ ಮತ್ತು ಸಜಾ ಕೈದಿಗಳು ವಿಚಾರಣಾಧೀನ ಕೈದಿ ಮೇಲೆ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ವಿಚಾರಣಾಧೀನ ಕೈದಿ ನಾಗರಾಜ್ ಹಲ್ಲೆಗೊಳಗಾದವರು. ಹಲ್ಲೆಗೊಳಗಾದ ನಾಗರಾಜ್ ಕೊಲೆ ಪ್ರಕರಣದ ಆರೋಪಿಯಾಗಿದ್ದು, ಮಂಡ್ಯದಿಂದ ಪರಪ್ಪನ ಅಗ್ರಹಾರಕ್ಕೆ ಶಿಫ್ಟ್ ಆಗಿದ್ದಾರೆ.

ಹೇಳಿದ ಕೆಲಸ ಮಾಡದಿದ್ದರೆ ಸಜಾ ಕೈದಿಗಳು ವಿಚಾರಣಾ ಕೈದಿಗಳು ಮೇಲೆ ಇಲ್ಲ-ಸಲ್ಲದ ಸುಳ್ಳು ಆರೋಪಗಳನ್ನು ಮಾಡುತ್ತಾರೆ. ಜೈಲು ಸಿಬ್ಬಂದಿಗೆ ಸುಳ್ಳು ಹೇಳಿ, ವಿಚಾರಣಾ ಕೈದಿಗೆ ಹಲ್ಲೆ ಮಾಡುತ್ತಾರೆ. ಸಜಾ ಕೈದಿಗಳ ಮಾತನ್ನು ನಂಬಿ 15 ಜನ ಜೈಲು ಸಿಬ್ಬಂದಿ ನಾಗರಾಜ್ ಮೇಲೆ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ಅಲ್ಲದೆ ಹಲ್ಲೆ ಬಳಿಕ ಚಿಕಿತ್ಸೆ ಕೊಡಿಸದೆ ದರ್ಪ ಮೆರೆದಿದ್ದಾರೆ.

ಜೈಲಿನಲ್ಲಿನ ಸೀನಿಯರ್ ಕೈದಿಗಳ ವಿರುದ್ಧವೂ ದೌರ್ಜನ್ಯ, ಹಲ್ಲೆ ಆರೋಪವಿದೆ. ಕೈದಿ ನಟರಾಜ್ ಎಂಬುವನು ನಾಗರಾಜ ಮೇಲೆ ಹಲ್ಲೆ ಮಾಡಿರುವ ಹಲ್ಲೆ ಮಾಡಿದ್ದಾನೆ ಎಂಬ ಆರೋಪ ಹೊರಿಸಲಾಗಿದೆ. ಈ ಹಲ್ಲೆಗಳ ಕುರಿತು ನಾಗರಾಜ್ ವಿಡಿಯೋ ಹೇಳಿಕೆ ನೀಡಿ, ತಾಯಿಗೆ ವಾಟ್ಸಪ್ ಮೂಲಕ ಕಳುಹಿಸಿದ್ದಾರೆ.

ಜೈಲಿನಲ್ಲಿ ಮಗ ನಾಗರಾಜ್ ಪರಿಸ್ಥಿತಿ ಕಂಡು ತಾಯಿ ಕಣ್ಣೀರು ಹಾಕಿದ್ದಾರೆ. ನ್ಯಾಯಕ್ಕಾಗಿ ವಿಡಿಯೋ ಸಮೇತ ಮಾನವಹಕ್ಕು ಆಯೋಗಕ್ಕೆ ನಾಗರಾಜ್ ತಾಯಿ ದೂರು ನೀಡಿದ್ದಾರೆ.

## ಉದ್ಯೋಗಕ್ಕಾಗಿ ನೇರ ಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಮೆ॥ ಕ್ರೆಡಿಟ್ ಆಕ್ಸಿಸ್ ಗ್ರಾಮೀಣ್ ಲಿಮಿಟೆಡ್ ಕಂಪನಿಯ ಸಹಯೋಗದಲ್ಲಿ ಟ್ರೈನಿ ಕೇಂದ್ರ ಮ್ಯಾನೇಜರ್ ಹುದ್ದೆಗಳಿಗೆ ಉದ್ಯೋಗ ನೀಡುವ ಕುರಿತು ಜೂನ್ 14 ರಂದು ಬೆಳಗ್ಗೆ 10 ಗಂಟೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ (ಯಾವುದೇ ಟ್ರೇಡ್) ಹಾಗೂ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 28 ವರ್ಷದೊಳಗಿನ ಪುರುಷ ಅಭ್ಯರ್ಥಿಗಳು ಮತ್ತು 18 ರಿಂದ 35 ವರ್ಷದೊಳಗಿನ ಮಹಿಳಾ ಅಭ್ಯರ್ಥಿಗಳು ಜೂನ್ 14 ರಂದು ಬೆಳಿಗ್ಗೆ 10.00 ಗಂಟೆಗೆ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ತಮ್ಮ ಬಯೋಡೇಟಾಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124/9164642684 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸದ್ದಾರೆ.

## ನಾಳೆ ದೂರು ಸ್ವೀಕಾರ ಸಭೆ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಗಳು ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕು ಕಚೇರಿ ಆವರಣದಲ್ಲಿ ಜೂನ್ 12 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1:30 ಗಂಟೆಯವರೆಗೆ ಸಾರ್ವಜನಿಕರ ಕುಂದು ಕೊರತೆ ಸಭೆ ನಡೆಸಿ ಸಾರ್ವಜನಿಕರಿಂದ ದೂರು/ಅಹವಾಲು ಸ್ವೀಕಾರ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದೂರುಗಳನ್ನು ಸ್ವೀಕಾರ ಮಾಡಲಿದ್ದಾರೆ. ಸರ್ಕಾರಿ ಮತ್ತು ಅರೆಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲು ಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ ಅಹವಾಲುಗಳೇನಾದರೂ ಇದ್ದಲ್ಲಿ ಸ್ವೀಕರಿಸಲಾಗುವುದು. ಲೋಕಾಯುಕ್ತ ಡಿವೈಎಸ್ಪಿ ಸುನಿಲ್ಕುಮಾರ್ ಹೆಚ್.ಟಿ, ಪೊಲೀಸ್ ಇನ್ಸ್ಪೆಕ್ಟರ್ ಮೋಹನ್‌ರೆಡ್ಡಿ ಆರ್.ಎಂ, ಹಾಗೂ ಬ್ಯಾಟರಾಯಗೌಡ. ಬಿ.ಪಿ ಅವರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸುರೇಶ್ ಬಾಬು ಎಸ್ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

**ಮಂಡ್ಯ:** ತೂಬಿನಕೆರೆ ವಿದ್ಯುತ್ ವಿತರಣಾ ಕೇಂದ್ರದ 66/11 ಫೀಡರ್ ಗಳ ಮಾರ್ಗದಲ್ಲಿ ತ್ರೈಮಾಸಿಕ ಕಾರ್ಯನಿರ್ವಾಹಣೆ ಹಮ್ಮಿಕೊಂಡಿರುವುದರಿಂದ ಜೂನ್ 12 ರಂದು ಬೆಳಿಗ್ಗೆ 09 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ನಲ್ಲಿ ಅಡಚಣೆ ಉಂಟಾಗಲಿದೆ. ವ್ಯತ್ಯಯವಾಗಬಹುದಾದ ಪ್ರದೇಶಗಳು ತೂಬಿನಕೆರೆ, ತೂಬಿನಕೆರೆ ಇಂಡಸ್ಟ್ರಿಯಲ್ ಏರಿಯಾ, ಉರಮಾರಕಸಲಗೆರೆ, ಯಲಿಯೂರು, ಕಾಳೇನಹಳ್ಳಿ, ಎಲೆಚಾಕನಹಳ್ಳಿ, ರಾಗಿಮುದ್ದನಹಳ್ಳಿ, ಸುಂಡಹಳ್ಳಿ, ಪೀಹಳ್ಳಿ , ಕೊಡಿಯಾಲ ಆಲಗೂಡು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುವುದರಿಂದ ಕಂಪನಿಯೊಂದಿಗೆ ಸಹಕರಿಸಬೇಕೆಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜವರೇಗೌಡ ನಾಪತ್ತೆ

**ಮಂಡ್ಯ:** ಮದ್ದೂರು ತಾಲ್ಲೂಕು, ಸಿ.ಎ ಕೆರೆ ಹೋಬಳಿ ಕಡಿಲುವಾಗಿಲು ಗ್ರಾಮದ ಜವರೇಗೌಡ (54) ಎಂಬುವವರು ಕಾಣೆಯಗಿದ್ದಾರೆ ಎಂದು ಕೆ.ಎಂ ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.5 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈ ಬಣ್ಣ, ಬಿಳಿಯ ಗಡ್ಡ ಮೀಸೆ ಬಿಟ್ಟಿರುತ್ತಾರೆ, ಕೈಯಲ್ಲಿ ಯಾವಾಗಲೂ ದೊಣ್ಣೆ ಮತ್ತು ಬೆಡ್ ಶೀಟ್ ನ್ನು ಹಿಡಿದಿದ್ದು ಕಾಣೆಯಾದ ದಿನ ತುಂಬುದೋಳಿನ ಶರ್ಟ್, ಪಟಪಟ್ಟೆ ನೀಲಿ ಮತ್ತು ಬಿಳಿ ಗೆರೆಯುಳ್ಳ ಲುಂಗಿ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ:9480804835 ನ್ನು ಸಂಪರ್ಕಿಸಬಹುದು ಎಂದು ಕೆ.ಎಂ. ದೊಡ್ಡಿ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ತೊರೆಬೊಮ್ಮನಹಳ್ಳಿ ಗ್ರಾಮದ ನಂದೀಶ್ (37) ಎಂಬುವವರು ಕಾಣೆಯಾಗಿದ್ದಾರೆ ಎಂದು ಕೆ.ಎಂ ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.5 ಅಡಿ ಎತ್ತರ, ಗೋದಿ ಮಯ ಬಣ್ಣ, ಗಡ್ಡ ಮೀಸೆ ಬಿಟ್ಟಿದ್ದು ಕಾಣೆಯಾದ ದಿನ ಲೈಟ್ ಗ್ರೀನ್ ಟೀ ಶರ್ಟ್ ನೀಲಿ ಲುಂಗಿ, ಕೆಂಪು ಸಣ್ಣ ಗೆರೆಯ ಟವಲ್ಲು ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ:9480804835 ನ್ನು ಸಂಪರ್ಕಿಸಬಹುದು ಎಂದು ಕೆ.ಎಂ. ದೊಡ್ಡಿ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ತಿಳಿಸಿರುತ್ತಾರೆ.

## ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ಮಂಡ್ಯ ನಗರದ ಸೋಮಸುಂದರ್ (43) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.3 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಬಣ್ಣ, ಸಾಧಾರಣ ಮೈಕಟ್ಟು, ಗಡ್ಡ ಮೀಸೆ ಬಿಟ್ಟಿರುತ್ತಾರೆ, ಬಲ ಕೈಯಲ್ಲಿ ಪವಿತ್ರ ಎಂಸು ಹಸಿರು ಅಚ್ಚೆ ಇದ್ದು ಕಾಣೆಯಾದ ದಿನ ಕ್ರೀಮ್ ಕಲರ್ ಅರ್ಧತೋಳಿನ ಶರ್ಟ್ ಮತ್ತು ನೀಲಿ ಬಣ್ಣದ ಪ್ಯಾಂಟ್ ಹಾಗೂ ಕಪ್ಪು ಬಣ್ಣಸ ಟವಲ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-224500/224666/22488 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಾರಸುದಾರರ ಪತ್ತೆಗಾಗಿ

**ಮಂಡ್ಯ:** ಮಂಡ್ಯದ ಕಲ್ಲಹಳ್ಳಿ ಬಳಿ ಅಪರಿಚಿತ ವ್ಯಕ್ತಿಯೊಬ್ಬ ಅಸ್ವಸ್ಥನಾಗಿ ಬಿದ್ದಿದ್ದವನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಅಪರಿಚಿತ ವ್ಯಕ್ತಿಯು 5.5 ಅಡಿ ಎತ್ತರ, 40 ವರ್ಷ, ಕೋಲುಮುಖ, ಎಣ್ಣೆಗೆಂಪು ಬಣ್ಣ, ತೆಳ್ಳಗಿನ ಶರೀರ, ಗಡ್ಡ ಮೀಸೆ ಬಿಟ್ಟಿರುತ್ತಾರೆ.ವಾರಸುದಾರರಿದ್ದಲ್ಲಿ ದೂ.ಸಂ: 08232-224500/224666/22488 ನ್ನು ಸಂಪರ್ಕಿಸಬಹುದು.



**ಸ್ವಯಂ ರಕ್ತದಾನ ಶಿಬಿರ**

**ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರಿನಲ್ಲಿ ಸೋಮವಾರ ಆಯೋಜಿಸಿದ್ದ ಬಸವಜಯಂತಿ ಕಾರ್ಯಕ್ರಮದ ಅಂಗವಾಗಿ ರಕ್ತದಾನ ಶಿಬಿರ ಏರ್ಪಡಿಸಲಾಗಿದ್ದು ಅಪಾರ ಸಂಖ್ಯೆಯಲ್ಲಿ ಜನರು ಸ್ವಯಂ ಪ್ರೇರಿತರಾಗಿ ಬಂದು ರಕ್ತದಾನ ಮಾಡಿದರು.**

## ಶೌಚಾಲಯ ನಿರ್ಮಿಸುವಂತೆ ಮನವಿ

**ವಿಜಯಪುರ:** ಪಟ್ಟಣದ ಚನ್ನರಾಯಪಟ್ಟಣ ಸರ್ಕಲ್‌ನಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಿಸುವಂತೆ ಇಲ್ಲಿನ ಜನರು ಪುರಸಭೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಕೋಲಾರ ಮುಖ್ಯ ರಸ್ತೆಯಲ್ಲಿರುವ ಚನ್ನರಾಯಪಟ್ಟಣ ಸರ್ಕಲ್ ಒಂದು ಪ್ರಮುಖ ವ್ಯಾಪಾರ ಕೇಂದ್ರವಾಗಿದೆ. ಶಾಲೆಗಳು ಸೇರಿದಂತೆ ನೂರಾರು ವ್ಯಾಪಾರ ಮಳಿಗೆಗಳಿವೆ. ಇಂದಿರಾನಗರ, ಮಹಬೂಬ್ ನಗರ, ರಾಜೀವ್ ನಗರ, ಟಿಪ್ಪುನಗರ, ಶಾಂತಿನಗರ, ಸೇರಿದಂತೆ ಬಹಳಷ್ಟು ವಾರ್ಡುಗಳ ಜನರು, ಚಿಕ್ಕಬಳ್ಳಾಪುರ, ಕೋಲಾರ, ಹೊಸಕೋಟೆಯ ಕಡೆಗೆ ಹೋಗಲು ಬಸ್ಸಿಗಾಗಿ ಇಲ್ಲಿಗೆ ಬಂದು ನಿಲ್ಲುತ್ತಾರೆ. ಆದರೆ, ಇಲ್ಲಿ ಅಗತ್ಯವಾಗಿ ಬೇಕಾಗಿರುವ ಶೌಚಾಲಯಗಳಿಲ್ಲ. ಇಲ್ಲಿನ ವ್ಯಾಪಾರಿಗಳು ಮೂತ್ರ ವಿಸರ್ಜನೆಗೆ ಹೋಗಬೇಕಾದರೆ, ಅರ್ಧ ಕಿ.ಮೀ. ದೂರದಲ್ಲಿರುವ ಬಸ್ ನಿಲ್ದಾಣಕ್ಕೆ ಹೋಗಬೇಕು. ಅಂಗಡಿಗಳನ್ನು ಬಿಟ್ಟು ಹೋಗುವುದಕ್ಕೆ ಸಾಧ್ಯವಾಗುವುದಿಲ್ಲ. ಕನಿಷ್ಟ ಮೂತ್ರ ವಿಸರ್ಜನೆಗಾದರೂ ತುರ್ತಾಗಿ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು, ಮಹಿಳೆಯರು, ವೃದ್ಧರು, ಎಲ್ಲರೂ ಇಲ್ಲಿಗೆ ಬರುತ್ತಾರೆ. ಬಸ್ಸು ಹತ್ತಿ ಇಳಿಯುತ್ತಾರೆ. ಇಲ್ಲಿ ಶೌಚಾಲಯಗಳಿಲ್ಲದ ಕಾರಣ, ವಿದ್ಯಾರ್ಥಿನಿಯರು, ಮಹಿಳೆಯರು ಪರದಾಡುತ್ತಾರೆ. ಒಂದು ಬಾರಿ ಪುರಸಭೆಯವರು, ಶೌಚಾಲಯ ನಿರ್ಮಾಣ ಮಾಡುವುದಕ್ಕೆ ಜಾಗ ಗುರ್ತಿಸಿಕೊಂಡು ಹೋದರೂ ಪುನಃ ಇದರ ಬಗ್ಗೆ ಪ್ರಸ್ತಾಪವೇ ಇಲ್ಲದಂತಾಗಿದೆ. ಪುರುಷರು ಹೇಗೋ ಹೊರಗೆ ಹೋಗುತ್ತಾರೆ. ಮಹಿಳೆಯರು, ಹೆಣ್ಣು ಮಕ್ಕಳು ಹೋಗುವುದಕ್ಕೆ ಸಾಧ್ಯವೇ? ಆದ್ದರಿಂದ ಪುರಸಭೆ ಅಧಿಕಾರಿಗಳು, ಇಲ್ಲಿ ಶೌಚಾಲಯ ನಿರ್ಮಿಸುವುದಕ್ಕೆ ಮೊದಲ ಆದ್ಯತೆ ಕೊಡಬೇಕು ಎಂದು ಇಲ್ಲಿನ ವ್ಯಾಪಾರಿ ಶಿವಕುಮಾರ್ ಹೇಳಿದರು. ನಾವು ಬೆಳಿಗ್ಗೆ 4 ಗಂಟೆಗೆ ಬಂದರೆ, ರಾತ್ರಿ 8 ಗಂಟೆಯವರೆಗೂ ಇಲ್ಲೆ ಹೊಟೇಲ್ ನಲ್ಲಿ ಕೆಲಸ ಮಾಡಬೇಕು. ಶೌಚಾಲಯಗಳಿಲ್ಲದ ಕಾರಣ, ಹೆಚ್ಚು ನೀರು ಕುಡಿಯುವದಕ್ಕೆ ಹಿಂಜರಿಕೆಯಾಗುತ್ತದೆ. ಹೊಟೇಲ್ ನಲ್ಲಿ ಗ್ರಾಹಕರನ್ನು ಬಿಟ್ಟು ಪದೇ ಪದೇ ಹೊರಗೆ ಹೋಗುವುದಕ್ಕೆ ಆಗಲ್ಲ. ಶೌಚಾಲಯವಿದ್ದರೆ ನಮಗೂ ಅನುಕೂಲವಾಗುತ್ತದೆ ಎಂದು ಹೊಟೇಲ್ ಕಾರ್ಮಿಕ ಚಂದ್ರಕುಮಾರ್ ಹೇಳಿದರು.

## ಮೋದಿ ಪ್ರಮಾಣವಚನ ಸ್ವೀಕಾರ ಸಮಾರಂಭ ವೀಕ್ಷಿಸಲು ಎಲ್ಇಡಿ ವ್ಯವಸ್ಥೆ

**ವಿಜಯಪುರ:** ಪ್ರಧಾನಿ ನರೇಂದ್ರ, ಮೋದಿ ರವರು ಮೂರನೇ ಬಾರಿಗೆ ಎನ್ ಡಿ ಎ ಪಕ್ಷಗಳ ನೇತೃತ್ವದಲ್ಲಿ ಪ್ರಧಾನಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಕ್ಷಣಗಳನ್ನು ಸ್ಮರಣೀಯವಾಗಿಸುವ ದೃಷ್ಟಿಯಿಂದ ಪಟ್ಟಣದ ಅಂಕತಟ್ಟಿ ನಂಜುಂಡಪ್ಪ ವೃತ್ತದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಬೃಹತ್ ಪರದೆಯ ಮೇಲೆ ಸಾರ್ವಜನಿಕರಿಗೆ ಪ್ರಮಾಣವಚನ ಸ್ವೀಕಾರ ಸಮಾರಂಭದ ನೇರ ಪ್ರಸಾರವನ್ನು ವ್ಯವಸ್ಥೆ ಮಾಡಿದ್ದರು. ಪ್ರಧಾನಿಯಾಗಿ ನರೇಂದ್ರ, ಮೋದಿ ಪ್ರಮಾಣ ವಚನ ಸ್ವೀಕರಿಸುತ್ತಿದ್ದಂತೆಯೇ ಪಟಾಕಿಗಳನ್ನು ಸಿಡಿಸಿ, ಸಿಹಿ ಹಂಚಿ, ಸಂಭ್ರಮಿಸಿದರು. ಟೌನ್ ಜೆಡಿಎಸ್ ಬಿಜೆಪಿ ಅಧ್ಯಕ್ಷ ಆರ್ ಸಿ ಮಂಜುನಾಥ್, ಕಾರ್ಯದರ್ಶಿ ಮುನೀಂದ್ರ, ಜಿಲ್ಲಾ ಉಪಾಧ್ಯಕ್ಷ ಕನಕರಾಜು, ರಾಮಕೃಷ್ಣ ಹೆಗಡೆ, ರಾಮು ಭಗವಾನ್, ಪುರಸಭಾ ಸದಸ್ಯರಾದ ಶಿಲ್ಪ ಅಜಿತ್, ಮಾಜಿ ಸದಸ್ಯ ವರದರಾಜು, ತಾಲೂಕು ಬಿಜೆಪಿ ಕಾರ್ಯದರ್ಶಿ ರವಿಕುಮಾರ್, ಸುಬ್ಬಣ್ಣ, ಮುನಿಕೃಷ್ಣ ಮತ್ತಿತರೆ ಮುಖಂಡರುಗಳು ಉಪಸ್ಥಿತರಿದ್ದರು.



### ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ ಸೂಚನೆ

## ಸ್ಕೌಟ್ಸ್-ಗೈಡ್ಸ್ ಯೂನಿಟ್ ಹೆಚ್ಚಿಸಿ

**ಮಂಡ್ಯ:** ಜಿಲ್ಲೆಯಲ್ಲಿ ಇರುವ ಸರ್ಕಾರಿ , ಖಾಸಗಿ , ವಸತಿ ಶಾಲೆಗಳಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ಯೂನಿಟ್ ಪ್ರಾರಂಭಿಸಿ ತರಬೇತಿ ನೀಡಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ 2022-23 ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆ ಯನ್ನು ಕುರಿತು ಮಾತನಾಡಿದರು.

ಸ್ಕೌಟ್ಸ್ ಅಂಡ್ ಗೈಡ್ಸ್ ನಿರ್ವಹಿಸುವ ಕೆಲಸಗಳು ಮಕ್ಕಳಲ್ಲಿ ಶಿಸ್ತು ಹಾಗೂ ಸೇವಾ ಮನೋಭಾವ ಬೆಳೆಸುತ್ತದೆ. ಪೋಷಕರು ತಮ್ಮ ಮಕ್ಕಳನ್ನು ಸ್ಕೌಟ್ಸ್ ಅಂಡ್ ಗೈಡ್ಸ್ ಯೂನಿಟ್ ಗೆ ಸೇರಿಸಿ ತರಬೇತಿ ಕೊಡಿಸಿ ಎಂದು ಹೇಳಿದರು.

ಸ್ಕೌಟ್ಸ್ ಅಂಡ್ ಗೈಡ್ಸ್ ಸೇರಿದರೆ ಆಗುವ ಅನುಕೂಲತೆಗಳ ಬಗ್ಗೆ ಮಕ್ಕಳಿಗೆ ತಿಳಿಸಿ ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿ ನೊಂದಣಿಯಾಗುವಂತೆ ಪ್ರೇರೇಪಿಸಬೇಕು. ಸ್ಕೌಟ್ಸ್ ಮತ್ತು ಗೈಡ್ಸ್ ಬಗ್ಗೆ ಶಾಲೆಯಲ್ಲಿ ಹೆಚ್ಚು ಪ್ರದರ್ಶನ ಗಳನ್ನು ಏರ್ಪಡಿಸಿ ಚಟುವಟಿಕೆಗಳನ್ನು ಹೆಚ್ಚಾಗಿ ಮಾಡಿಸಬೇಕು, ಇದರ ಜೊತೆಗೆ ಶಿಕ್ಷಕರು ಕೂಡ ಭಾಗಿಯಾಗಬೇಕು ಎಂದು ತಿಳಿಸಿದರು.

ವಸತಿ ಶಾಲೆಗಳಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ಯೂನಿಟ್ ಜಿಲ್ಲೆಯಲ್ಲಿರುವ ವಸತಿ ಶಾಲೆಗಳಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ನ ಯೂನಿಟ್ ಆರಂಭಿಸಬೇಕು. ಮಕ್ಕಳೇ ದೇಶದ ಮುಂದಿನ ಆಸ್ತಿ. ಮಕ್ಕಳಿಂದ ದೇಶಕ್ಕೆ ಒಳಿತಾಗಬೇಕು ಎಂದರೆ ಅವರಿಗೆ ಶಿಸ್ತು, ಮೌಲ್ಯಯುತ ಮತ್ತು ಸಮಾಜಮುಖಿ ಕೆಲಸಗಳನ್ನು ಚಿಕ್ಕ ವಯಸ್ಸಿನಿಂದಲೇ ಅಭ್ಯಾಸ ಮಾಡಿಸಬೇಕು ಎಂದು ಹೇಳಿದರು.

ಕನ್ನಡ ಅಥವಾ ಸಮಾಜ ವಿಜ್ಞಾನದ ಶಿಕ್ಷಕರಿಗೆ ಸ್ಕೌಟ್ಸ್ ಅಂಡ್ ಗೈಡ್ಸ್ ನ ಬಗ್ಗೆ ತರಬೇತಿ ಕೊಡಿಸಿ ಅವರ ಮೂಲಕ ಮಕ್ಕಳಿಗೆ ಇದರ ಅರಿವು ಮೂಡಿಸಬೇಕು ಹಾಗೂ ಸ್ಕೌಟ್ಸ್ ಅಂಡ್ ಗೈಡ್ಸ್ ನ ಬಗ್ಗೆ ಚಟುವಟಿಕೆ ಮಾಡುವುದರ ಮುಖಾಂತರ ಅವರನ್ನು ಪ್ರೇರೇಪಿಸಬೇಕು ಎಂದು ಹೇಳಿದರು.

ಸ್ಕೌಟ್ಸ್ ಅಂಡ್ ಗೈಡ್ಸ್ ನಲ್ಲಿ ಮಕ್ಕಳು ಹೆಚ್ಚು ಭಾಗವಹಿಸುವುದರಿಂದ ಅವರಿಗೆ ಇಂಜಿನಿಯರಿಂಗ್ ನ ಬೇರೆ ಬೇರೆ ಕೋರ್ಸ್ ನಲ್ಲಿ ಮೀಸಲಾತಿ ಇರುತ್ತದೆ. ಹೆಚ್ಚಾಗಿ ಮಕ್ಕಳನ್ನು ಸ್ಕೌಟ್ಸ್ ಅಂಡ್ ಗೈಡ್ಸ್ ಗೆ ಸೇರಿಸಿ ಎಂದು ಹೇಳಿದರು.

ಖಾಸಗಿ ಶಾಲೆಗಳಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ಬಗ್ಗೆ ಹೆಚ್ಚು ಆಸಕ್ತಿ ತೋರುತ್ತಿಲ್ಲ ಎಂಬ ದೂರುಗಳು ಬರುತ್ತಿವೆ ಇದರ ಬಗ್ಗೆ ಖಾಸಗಿ ಶಾಲೆಯ ಪ್ರಾಂಶುಪಾಲರುಗಳು ಗಮನಹರಿಸಿ ಯೂನಿಟ್ ಪ್ರಾರಂಭ ಮಾಡಿ. ಇದರಿಂದ ಮಕ್ಕಳಿಗೆ ಹೆಚ್ಚು ಅನುಕೂಲವಾಗಲಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸೀಫ್ ಅವರು ಮಾತನಾಡಿ ಎಚ್ ಮಲ್ಲಿಗೆರೆಯಲ್ಲಿರುವ ಸರ್ಕಾರಿ ಜಾಗದಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ತರಬೇತಿ ಕೇಂದ್ರ ಮಾಡಿ ಕ್ಯಾಂಪಸ್ ತೆರೆಯಬೇಕು ಎಂಬ ಉದ್ದೇಶದಿಂದ 2 ಎಕರೆ ಜಮೀನು ಕೊಡಬೇಕೆಂದು ಮನವಿ ಸಲ್ಲಿಸಲಾಗಿದ್ದು, ಜಿಲ್ಲಾಡಳಿತವು ಇದಕ್ಕೆ ಸಹಕಾರ ನೀಡಿದೆ ಅದಕ್ಕೆ ಬೇಕಾದಂತಹ ದಾಖಲೆಗಳನ್ನು ಸಿದ್ದಪಡಿಸಿಕೊಳ್ಳಬೇಕಿದೆ ಎಂದರು.

ಸಭೆಯಲ್ಲಿ ಆಯುಷ್ ಇಲಾಖೆಯ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಸೀತಾ ಲಕ್ಷ್ಮಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಚಂದ್ರಕಾಂತ, ಭಾರತ್ ಸ್ಕೌಟ್ಸ್ ಗೈಡ್ ನ ಜಿಲ್ಲಾ ಮುಖ್ಯ ಆಯುಕ್ತರಾದ ಭಕ್ತ ವತ್ಸಲ, (ಗೈಡ್) ಜಿಲ್ಲಾ ಆಯುಕ್ತ ರಾದ ಕೆ.ಸಿ. ನಾಗಮ್ಮ, (ಸ್ಕೌಟ್) ಡಾ.ಅನಿಲ್ ಕುಮಾರ್, ಕೇಂದ್ರ ಸ್ಥಾನಿಕ ಆಯುಕ್ತರಾದ ನಾಗರೇವಕ್ಕ, ಖಜಾಂಚಿ ಹೆಚ್.ವಿ.ಜಯರಾಂ, ಕಾರ್ಯದರ್ಶಿ ಶಿವರಾಮೇಗೌಡ, ಜಂಟಿ ಕಾರ್ಯದರ್ಶಿ ಪದ್ಮಾವತಿ, ಮಂಡ್ಯ ದಕ್ಷಿಣ ವಲಯ ಸ್ಥಳೀಯ ಕಾರ್ಯದರ್ಶಿ ಸೌಮ್ಯಲತ, ಶ್ರೀ ರಂಗ ಪಟ್ಟಣ ತಾಲ್ಲೂಕು ಜಂಟಿ ಕಾರ್ಯದರ್ಶಿ ಮತ್ತು ಅಜೀವ ಸದಸ್ಯರು ಮಂಜುಳ, ಅಜೀವ ಸದಸ್ಯರುಗಳಾದ ಚಂದ್ರಕಲಾ ಉಪಸ್ಥಿತರಿದ್ದರು.



## ಕೇಂದ್ರೀಯ ವಿದ್ಯಾಲಯದಲ್ಲಿ ಶಿಕ್ಷಕರ ನೇಮಕಕ್ಕೆ ಕ್ರಮ

ಕೇಂದ್ರೀಯ ವಿದ್ಯಾಲಯದಲ್ಲಿ ಶಿಕ್ಷಕರ ಕೊರತೆ ಇದ್ದು, ಭರ್ತಿ ಮಾಡುವ ಪ್ರಕ್ರಿಯೆ ನಡೆಸಲಾಗುತ್ತಿದೆ. ಈಗಿರುವ ಶಿಕ್ಷಕರ ಸಹಕಾರದೊಂದಿಗೆ ವ್ಯವಸ್ಥಿತವಾಗಿ ತರಗತಿಗಳನ್ನು ನಡೆಸುವಂತೆ ಜಿಲ್ಲಾಧಿಕಾರಿ ಡಾ ಕುಮಾರ ಅವರು ಪ್ರಾಂಶುಪಾಲರಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರೀಯ ವಿದ್ಯಾಲಯದ ಪೋಷಕರ ಸಭೆ ಹಾಗೂ ಕೇಂದ್ರ ವಿದ್ಯಾಲಯದ ಕಟ್ಟಡ ಕಾಮಗಾರಿ ಸಭೆ ಕುರಿತು ಮಾತನಾಡಿದರು. ಕೇಂದ್ರೀಯ ವಿದ್ಯಾಲಯಗಳಲ್ಲಿ ವಿಷಯವಾರು ಶಿಕ್ಷಕರ ಕೊರತೆ ಹಾಗೂ ಇರುವ ಶಿಕ್ಷಕರು ಕೆಲಸಗಳನ್ನು ಸರಿಯಾಗಿ ನಿಭಾಯಿಸುತ್ತಿಲ್ಲ, ಸಂವಾಹನದಲ್ಲಿ ಭಾಷೆಯ ತೊಂದರೆ ಉಂಟಾಗುತ್ತಿದೆ ಎಂದು ಪೋಷಕರು ದೂರು ಸಲ್ಲಿಸಿದ್ದು, ಪ್ರಾಂಶುಪಾಲರು ತೊಂದರೆಗಳನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಿದರು. ಮಕ್ಕಳಲ್ಲಿ ಯಾವುದೇ ಬೇಧಬಾವ ಮಾಡಬಾರದು, ಭಾಷೆ ಕೊರತೆಯ ನೆಪ ಹೇಳದೆ ಮಕ್ಕಳಿಗೆ ಸರಿಯಾಗಿ ತರಗತಿಗಳನ್ನು ಮಾಡಬೇಕು, ಎಲ್ಲಾ ರೀತಿಯ ಚಟುವಟಿಕೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಾಡಬೇಕು ಪೋಷಕರ ಸಭೆ ನಡೆಸಿ ಮಕ್ಕಳ ಬಗ್ಗೆ ವರದಿ ಸಲ್ಲಿಸಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ. ಎಚ್ ಎಲ್ ನಾಗರಾಜ್ ಅವರು ಮಾತನಾಡಿ ಆಯಾ ವಿಷಯಗಳಿಗೆ ಸಂಬಂಧಿಸಿದ ಶಿಕ್ಷಕರನ್ನು ಸದ್ಯದಲ್ಲಿ ನೇಮಕ ಮಾಡಲಾಗುವುದು, ಹಾಗೂ ಕಟ್ಟಡ ಕಾಮಗಾರಿ ಕೆಲಸವು ಅಂತಿಮ ಹಂತದಲ್ಲಿದ್ದು, ಇದರ ಬಗ್ಗೆ ಪೋಷಕರಿಗೆ ಯಾವುದೇ ಆತಂಕ ಬೇಡ ಎಂದು ಹೇಳಿದರು.

ಗಣಿತ ಹಾಗೂ ಹಿಂದಿ ವಿಷಯಗಳಲ್ಲಿ ಸ್ವಲ್ಪ ನಿಗಾವಹಿಸಿ ತರಗತಿಗಳನ್ನು ಮಾಡಿ ಉಳಿದ ವಿಷಯಗಳಂತೆ ಈವಿಷಯಗಳು ಸುಲಭವಲ್ಲ ಆದ್ದರಿಂದ ತರಗತಿಗಳನ್ನು ಸರಿಯಾಗಿ ನಡೆಸಿ ಮತ್ತೊಮ್ಮೆ ಪೋಷಕರಿಂದ ಯಾವುದೇ ದೂರುಗಳು ಬರಬಾರದು ಎಂದು ತಿಳಿಸಿದರು. ಸಭೆಯಲ್ಲಿ ಕೇಂದ್ರಿಯ ಪ್ರಾಂಶುಪಾಲರಾದ ಭರತ್ ಲಾಲ್ ಮೀನಾ, ಮುಖಂಡರುಗಳಾದ ಪ್ರೊ. ಬಿ. ಜಯಪ್ರಕಾಶ್ ಗೌಡ, ಕೀಲಾರಕೃಷ್ಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಆಯುಷ್ ಇಲಾಖೆಯಿಂದ ''ಯೋಗೋತ್ಸವ'' ವಿನೂತನ ಕಾರ್ಯಕ್ರಮ

**ಬೆಂಗಳೂರು:** 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಯೋಗದ ಮಹತ್ವವನ್ನು ಸಾರ್ವಜನಿಕರಿಗೆ ಇನ್ನಷ್ಟು ತಲುಪುವ ಉದ್ದೇಶದಿಂದ ಯೋಗ ದಿನದ ಪೂರ್ವಭಾವಿಯಾಗಿ ಯೋಗೋತ್ಸವ ಎಂಬ ವಿನೂತನ ಕಾರ್ಯಕ್ರಮವನ್ನು ಆಯುಷ್ ಇಲಾಖೆಯು ಹಮ್ಮಿಕೊಂಡಿರುತ್ತದೆ.

ಈ ಯೋಗೋತ್ಸವದ ಅಂಗವಾಗಿ ವಿವಿಧ ಸಂಘ-ಸಂಸ್ಥೆಗಳು/ ಇಲಾಖೆಗಳು ಆಯುಷ್ ಇಲಾಖೆ ಸಹಕಾರದೊಂದಿಗೆ ಜೂನ್ 11 ರಿಂದ 20 ರವರೆಗೆ ಹತ್ತು ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಿವೆ.

ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಸಂಸ್ಥೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು /ಸಂಘ ಸಂಸ್ಥೆ ಯೋಗೋತ್ಸವದಲ್ಲಿ ಭಾಗವಹಿಸುತ್ತಿದ್ದು, ಈ 04 ಸಂಸ್ಥೆಗಳಲ್ಲಿ ಸುಮಾರು 4 ಲಕ್ಷ ಮಂದಿ ರಾಜ್ಯಾದ್ಯಂತ ಯೋಗ ಪ್ರದರ್ಶನವನ್ನು ಮಾಡುವುದರ ಮೂಲಕ ಯೋಗೋತ್ಸವನ್ನು ಆಚರಿಸಲಿದ್ದಾರೆ. ಅಲ್ಲದೆ ಈ ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯಿಂದ ಆರೋಗ್ಯಕರ ಜೀವನ ಶೈಲಿಯ ಕುರಿತು ಮಾಹಿತಿ ಹಾಗೂ ಆಯುಷ್ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಲಾಗುವುದು.

ಬೆಂಗಳೂರಿನಲ್ಲಿನ ಬೆಂಗಳೂರು ಅಪಾರ್ಟ್‌ಮೆಂಟ್ ಅಸೋಸಿಯೇಷನ್, ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆ, ಜೈನ್ ಯುನಿವರ್ಸಿಟಿ, ಲೂಲು ಮಾಲ್ ಹಾಗೂ ಮಾಲ್ ಆಫ್ ಏಷ್ಯಾ, ಸ್ಥಳಗಳಲ್ಲಿ ಯೋಗ ತರಬೇತಿ, ಆಯುಷ್ ವೈದ್ಯ ಪದ್ಧತಿಗಳ ಕುರಿತು ಅರಿವು ಹಾಗೂ ಆಯು? ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯುಷ್ಇಲಾಖಾ ವತಿಯಿಂದ ನಡೆಸಲಾಗುವುದು.

ಈ ಕಾರ್ಯಕ್ರಮಗಳಿಗೆ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ, ಯೋಗ ಗಂಗೋತ್ರಿ ಟ್ರಸ್ಟ್, ಶ್ರೀ ಪತಂಜಲಿ ಯೋಗಾಶ್ರಮ ಟ್ರಸ್ಟ್, ಸಂಯಮ ಟ್ರಸ್ಟ್ ಹಾಗೂ ಇನ್ನಿತರ ಖಾಸಗಿ ಯೋಗ ಸಂಸ್ಥೆಗಳು ಅಗತ್ಯ ಸಹಕಾರವನ್ನು ನೀಡಲಿವೆ ಎಂದು ಆಯುಷ್ ಇಲಾಖೆಯ ಯೋಗ ಮತ್ತು ನ್ಯಾಚುರೋಪತಿ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಚಿತ ಯೋಗ ತರಬೇತಿ ಶಿಬಿರ

**ಬೆಂಗಳೂರು : ಯೋಗೋತ್ಸವ 2024ರ ಅಂಗವಾಗಿ ಶ್ರೀ ಜಯಚಾಮರಾಜೇಂದ್ರ, ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆ, ಹಾಗೂ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಯೋಗ ವಿಭಾಗದ ವತಿಯಿಂದ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಉಚಿತ ಯೋಗಾಸನ, ಪ್ರಾಣಾಯಾಮ, ಧ್ಯಾನ ತರಗತಿಗಳು ಹಾಗೂ ವಿಶೇಷ ಉಪನ್ಯಾಸಗಳನ್ನು ಜೂನ್ 11 ರಿಂದ 20 ರವರೆಗೆ ಬೆಳಿಗ್ಗೆ 7 ಗಂಟೆಯಿಂದ ಅಪರಾಹ್ನ 12 ಗಂಟೆಯವರೆಗೆ ಆಸ್ಪತ್ರೆಯ ಯೋಗ ವಿಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ. ಆಸಕ್ತರು ನೋಂದಣಿಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾರ್ತಿಕ್ ಮೊಬೈಲ್ ಸಂಖ್ಯೆ 9845986119 ಅಥವಾ ದೂರವಾಣಿ ಸಂಖ್ಯೆ 080-22872848 ಇ-ಮೇಲ್ ಠಿಡಿಟಿಛಿಠಿಚಿಟರಂಚಿಟಛಿ9ರಟಚಿಟ.ಛಿಂಟ ನ್ನು ಸಂಪರ್ಕಿಸಬಹುದು ಎಂದು ಬೆಂಗಳೂರಿನ ಶ್ರೀ ಜಯಚಾಮರಾಜೇಂದ್ರ ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಜೂ.27ರಿಂದ ಅಗ್ನಿವೀರ್ ನೇಮಕಾತಿ ರ್ಯಾಲಿ

**ಬೆಂಗಳೂರು:** ಬೆಂಗಳೂರಿನ ಪ್ರಧಾನ ಕಚೇರಿ ನೇಮಕಾತಿ ವಲಯದ ಆಶ್ರಯದಲ್ಲಿ ಕರ್ನಾಟಕ ರಾಜ್ಯದ ಬೆಂಗಳೂರು ಗ್ರಾಮಾಂತರ, ತುಮಕೂರು, ಮಂಡ್ಯ, ಮೈಸೂರು, ಬಳ್ಳಾರಿ, ಚಾಮರಾಜನಗರ, ರಾಮನಗರ, ಕೊಡಗು, ಕೋಲಾರ, ಚಿಕ್ಕಬಳ್ಳಾಪುರ, ಹಾಸನ, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳು ಹಾಗೂ ಬೆಂಗಳೂರು ನಗರದಿಂದ ಆಯ್ಕೆಯಾದ ಪುರುಷ ಅಭ್ಯರ್ಥಿಗಳಿಗೆ ಮಾತ್ರ ಅಗ್ನಿವೀರ್ ನೇಮಕಾತಿ ರ್ಯಾಲಿಯನ್ನು 2024 ನೇ ಜೂನ್ 27 ರಿಂದ ಜುಲೈ 02 ರವರೆಗೆ ಮಡಿಕೇರಿಯ ಜನರಲ್ ತಿಮ್ಮಯ್ಯ ಜಿಲ್ಲಾ ಮೈದಾನದಲ್ಲಿ ನಡೆಸಲು ನಿರ್ಧರಿಸಲಾಗಿದೆ. 2024ನೇ 22 ಏಪ್ರಿಲ್ ನಿಂದ 07 ಮೇ ರವರೆಗೆ ನಡೆಸಲಾದ ಸಾಮಾನ್ಯ ಪ್ರವೇಶ ಪರೀಕ್ಷೆಯ ನಂತರ ಶಾರ್ಟ್‌ಲಿಸ್ಟ್ ಮಾಡಿದ ಅಭ್ಯರ್ಥಿಗಳಿಗೆ ರ್ಯಾಲಿಯನ್ನು ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಆಫೀಸ್ ಅಸಿಸ್ಟೆಂಟ್/ಸ್ಟೋರ್ ಕೀಪರ್ ಟೆಕ್ನಿಕಲ್, ಅಗ್ನಿವೀರ್ ಟ್ರೇಡ್ಸ್‌ಮನ್ 10 ನೇ ಉತ್ತೀರ್ಣರು ಮತ್ತು ಅಗ್ನಿವೀರ್ 10 ನೇ ಉತ್ತೀರ್ಣರ ದಾಖಲಾತಿಗಾಗಿ ನಡೆಸಲಾಗುತ್ತಿದೆ. ಸೇನೆಯಲ್ಲಿ ಅಭ್ಯರ್ಥಿಗಳ ವಿಭಾಗಗಳು/ಪ್ರವೇಶಗಳು ರ್ಯಾಲಿಯನ್ನು ಸುಗಮವಾಗಿ ನಡೆಸಲು ನಾಗರಿಕ ಆಡಳಿತವು ಪೂರ್ವಭಾವಿಯಾಗಿ ಎಲ್ಲಾ ಅಗತ್ಯ ಸಹಾಯವನ್ನು ಒದಗಿಸುತ್ತಿದೆ. ಸಿವಿಲ್ ಅಡ್ಮಿನಿಸ್ಟ್ರೇಷನ್ ವತಿಯಿಂದ ಫೀಲ್ಡ್ ಮಾರ್ಷಲ್ ಕೆ.ಎಂ ಕರಿಯಪ್ಪ ಮೆಮೋರಿಯಲ್ ಹಾಲ್, ಮಡಿಕೇರಿಯಲ್ಲಿ ಎಲ್ಲಾ ಹೊರ ರಾಜ್ಯಗಳ ಅಭ್ಯರ್ಥಿಗಳಿಗೆ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಶಾರ್ಟ್‌ಲಿಸ್ಟ್ ಮಾಡಲಾದ ಅಭ್ಯರ್ಥಿಗಳ ಪ್ರವೇಶ ಕಾರ್ಡ್‌ಗಳನ್ನು ಈಗಾಗಲೇ ಅವರ ನೋಂದಾಯಿತ ಇ-ಮೇಲ್ ಐಡಿಗೆ ಕಳುಹಿಸಲಾಗಿದೆ ಮತ್ತು ಅವರ ಬಳಕೆದಾರ ಹೆಸರು ಮತ್ತು ಪಾಸ್ವರ್ಡ್ ಮೂಲಕ ಲಾಗಿನ್ ಆಗಿ ಭಾರತೀಯ ಸೇನೆಯ ವೆಬ್ಸೈಟ್‌ನಲ್ಲಿ ಸಹ ಮಾಹಿತಿ ಲಭ್ಯವಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಜೂನ್ 14 ರಿಂದ 22 ರವರೆಗೆ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಪರೀಕ್ಷೆ-2 ನಡೆಯಲಿದ್ದು, ಪರೀಕ್ಷೆಯು ಬೇರೆ ಬೇರೆ ಪರೀಕ್ಷಾ ಕೇಂದ್ರಗಳಲ್ಲಿ ಇರುವುದರಿಂದ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಪರೀಕ್ಷೆಗೆ ಹಾಜರಾಗಲು ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. ಎಸ್.ಎಸ್.ಎಲ್.ಸಿ ಪರೀಕ್ಷೆ-02 ರ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಿಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೊ?ಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಮನವಿ

## ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ

**ಚಿಕ್ಕಬಳ್ಳಾಪುರ:** ಜೂನ್ 19 ಮತ್ತು 20ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿರುವ ಜಿಲ್ಲಾಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ನೌಕರರು, ಅಧಿಕಾರಿಗಳು ಸಕ್ರಿಯವಾಗಿ ಭಾಗವಹಿಸುವಂತೆ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸರ್ಕಾರಿ ನೌಕರರ ಕ್ರೀಡಾಕೂಟ ಆಯೋಜನೆಯ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿಗಳು ಮತ್ತು ನೌಕರರು ತಮ್ಮ ಕಾರ್ಯಕ್ಷಮತೆಯನ್ನು ವೃದ್ಧಿಸಿಕೊಳ್ಳಬೇಕಾದರೆ ಯಾವುದಾದರೂ ಒಂದು ಕ್ರೀಡೆ, ಸಂಸ್ಕೃತಿಕ ಸ್ಪರ್ಧೆ, ಯೋಗ, ವ್ಯಾಯಾಮದಲ್ಲಿ ತೊಡಗಿಸಿಕೊಂಡರೆ ಉತ್ತಮ. ಆ ನಿಟ್ಟಿನಲ್ಲಿ ಸರ್ಕಾರಿ ಆಡಳಿತ ವರ್ಗದವರಿಗೆ ಅನುಕೂಲವಾಗಲು ಕ್ರೀಡಾಕೂಟ ಮತ್ತು ಸಂಸ್ಕೃತಿಕ ಸ್ಪರ್ಧೆಗಳನ್ನು ಹಿಂದಿನಿಂದಲು ನಡೆಸಿಕೊಂಡು ಬರುತ್ತಿರುವುದು ಪರಂಪರೆಯಾಗಿದೆ, ಅದರಂತೆ ಈವರ್ಷವು ಸಹ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಜಿಲ್ಲೆಯಲ್ಲಿ ಆಯೋಜಿಸಬೇಕು. ಈ ಬಾರಿ ತಾಲ್ಲೂಕು ಮಟ್ಟದಲ್ಲಿ ಕ್ರೀಡಾಕೂಟ ಮತ್ತು ಸಾಂಸ್ಕೃತಿ ಸ್ಪರ್ಧೆಗಳನ್ನು ನಡೆಸದೆ ನೇರವಾಗಿ ಜಿಲ್ಲಾ ಮಟ್ಟದಲ್ಲೇ ಆಯೋಜಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಅಧಿಕಾರಿಗಳು ಮತ್ತು ನೌಕರರು ನೇರವಾಗಿ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬಹುದಾಗಿದೆ. ಆ ಹಿನ್ನೆಲೆಯಲ್ಲಿ ಜೂನ್ 19 ಮತ್ತು 20 ರಂದು ಜಿಲ್ಲಾಮಟ್ಟದ ಕ್ರೀಡಾಕೂಟವನ್ನು ಅತ್ಯಂತ ಸಮರ್ಪಕವಾಗಿ ಶಿಷ್ಟಾಚಾರ ಪಾಲಿಸಿಕೊಂಡು ಆಯೋಜಿಸಬೇಕು. ಜಿಲ್ಲೆಯ ಮೂಲೆ ಮೂಲೆಯಿಂದ ಕ್ರೀಡಾಕೂಟಕ್ಕೆ ಆಗಮಿಸುವವರಿಗೆ ಸಕಲ ವ್ಯವಸ್ಥೆಗಳನ್ನು ಸುಸೂತ್ರವಾಗಿ ಆಯೋಜಿಸಬೇಕಾಗಿರುತ್ತದೆ. ತೀರ್ಪುಗಾರರ ನಿಯೋಜನೆ ಕ್ರೀಡಾಂಗಣ ಸಿದ್ದತೆ, ಕ್ರೀಡಾ ಪರಿಕರಗಳು ಪೂರೈಕೆ,ಆಹ್ವಾನ ಪತ್ರಿಕೆ ಮುದ್ರಣ ವಿತರಣೆ, ಭದ್ರತೆ,ಆಂಬುಲೆನ್ಸ್ ಮತ್ತು ಆರೋಗ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಕ್ರೀಡಾಕೂಟವನ್ನು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಆಯೋಜಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಇತರ ಇಲಾಖೆಯ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು. ಜಿಲ್ಲಾ ಮತ್ತು ತಾಲೂಕು ಮಟ್ಟದ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಪದಾಧಿಕಾರಿಗಳಿಂದ ಸಲಹೆಗಳನ್ನು ಜಿಲ್ಲಾಧಿಕಾರಿಗಳು ಆಲಿಸಿದರು.



ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಜಿಲ್ಲಾಡಳಿತದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಕಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹರೀಶ್, ಉಪಾಧ್ಯಕ್ಷರಾದ ಬಸವರಾಜ್ ಮತ್ತು ಶ್ರೀನಿವಾಸ್, ಖಜಾಂಚಿ ದಿನೇಶ್, ಕ್ರೀಡಾ ಕಾರ್ಯದರ್ಶಿ ಶಿವಕುಮಾರ್, ಗುಡಿಬಂಡೆ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಕೆ.ವಿ.ನಾರಾಯಣಸ್ವಾಮಿ, ಬಾಗೇಪಲ್ಲಿ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಸತ್ಯನಾರಾಯಣರೆಡ್ಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಗಾಯಿತ್ರಿ, ಸೇರಿದಂತೆ ವಿವಿಧ ಇಲಾಖೆಯ ಅಧಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಮತ್ತು ಮುಖ್ಯಸ್ಥರು ಭಾಗವಹಿಸಿದ್ದರು.

## ಅನಧಿಕೃತವಾಗಿ ಪ್ರಯಾಣ ಮಾಡಿದ ಪ್ರಯಾಣಿಕರಿಂದ ದಂಡ ವಸೂಲಿ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಏಪ್ರಿಲ್-2024 ರ ಮಾಹೆಯಲ್ಲಿ ಒಟ್ಟು 19,146 ಟ್ರಿಪ್ಪಗಳನ್ನು ತಪಾಸಿಸಿ 3924 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ. 7,95,540/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ 1023 ಪ್ರಕರಣಗಳನ್ನು ದಾಖಲಿಸಿದೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 489 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 48,900/- ಅನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಒಟ್ಟಾರೆಯಾಗಿ ಏಪ್ರಿಲ್-2024 ರ ಮಾಹೆಯಲ್ಲಿ 4,413 ಪ್ರಯಾಣಿಕರಿಂದ ಒಟ್ಟು ರೂ. 8,44,440/- ದಂಡವನ್ನು ವಸೂಲಿ ಮಾಡಲಾಗಿದೆ. ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡುವಂತೆ ಪ್ರಕಟಣೆ ತಿಳಿಸಿದೆ.

## ಪೋಷಕರ ಒಪ್ಪಿಗೆ ಮೇರೆಗೆ ಲಾಟರಿ ಮೂಲಕ ಆಯ್ಕೆ ಸ್ಥಗಿತ
# ಕೆಪಿಎಸ್ ಶಾಲೆಗೆ ಅರ್ಜಿ ಹಾಕಿದ 69 ಮಂದಿಗೂ ಪ್ರವೇಶ



**ಹುಳಿಯಾರು:** ಹುಳಿಯಾರು-ಕೆಂಕೆರೆ ಕರ್ನಾಟಕ ಪಬ್ಲಿಕ್ ಶಾಲೆಗೆ 2024-25 ನೇ ಸಾಲಿನ ಎಲ್‌ಕೆಜಿಗೆ 30 ವಿದ್ಯಾರ್ಥಿಗಳ ಆಯ್ಕೆಗೆ 69 ಅರ್ಜಿಗಳು ಬಂದಿದ್ದರಿಂದ ಸರ್ಕಾರದ ನಿಯಮದಂತೆ ಲಕ್ಕಿಡಿಪ್ ಮೂಲಕ 30 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಸೋಮವಾರ ಸಭೆ ಕರೆಯಲಾಗಿತ್ತು. ಆದರೆ ಆಗಮಿಸಿದ್ದ ಪೋಷಕರ ಒಪ್ಪಿಗೆಯ ಮೇರೆಗೆ ಲಕ್ಕಿಡಿಪ್ ಕೈ ಬಿಟ್ಟು ಅರ್ಜಿ ಹಾಕಿದ 69 ವಿದ್ಯಾರ್ಥಿಗಳನ್ನು ಪ್ರವೇಶ ಮಾಡಿಕೊಳ್ಳಲು ನಿರ್ಧರಿಸಲಾಯಿತು.

2024-25 ನೇ ಸಾಲಿನ ಎಲ್‌ಕೆಜಿ ಪ್ರವೇಶವನ್ನು ಮೇ.29 ರಿಂದ ಆರಂಭಿಸಲಾಗಿತ್ತು. ಮೊದಲ ದಿನವೇ 25 ಅರ್ಜಿಗಳು ದಾಖಲಾದವು. ನಂತರದ ದಿನಗಳಲ್ಲಿ 44 ಅರ್ಜಿಗಳು ಸೇರಿ ಒಟ್ಟು 69 ಅರ್ಜಿಗಳು ಬಂದಿದ್ದವು. ಹಾಗಾಗಿ ಸರ್ಕಾರದ ನಿಯಮದಂತೆ ಲಾಟರಿ ಮೂಲಕ 30 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಶಾಲಾ ಆವರಣದಲ್ಲಿ ಸೋಮವಾರ ಪೋಷಕರ ಸಭೆ ಕರೆಯಲಾಗಿತ್ತು.

ಸಭೆಯಲ್ಲಿ ಪ್ರಾಚಾರ್ಯ ಕೃಷ್ಣಮೂರ್ತಿ ಅವರು ಮಾತನಾಡಿ ಸರ್ಕಾರ 30 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕೊಡುವಂತೆ ಸೂಚಿಸಿದೆ. ಹಾಗಾಗಿ 30 ವಿದ್ಯಾರ್ಥಿಗಳಿಗೆ ಮಾತ್ರ ಅನುದಾನ. ಪೌಷ್ಠಿಕ ಆಹಾರ ಸೇರಿದಂತೆ ಕಲಿಕಾ ಸಾಮಗ್ರಿಗಳನ್ನು ನೀಡುತ್ತದೆ. 2 ವರ್ಷಗಳಿಂದ ಪೋಷಕರೇ ಇರುವ ಸೌಲಭ್ಯಗಳಲ್ಲೇ ಅನುಸರಿಸಿಕೊಂಡು ತಮ್ಮ ಮಕ್ಕಳನ್ನು ಓದಿಸುತ್ತೇನೆಂದು ಸಹಮತಿ ಸೂಚಿಸಿದ್ದರಿಂದ 60 ತಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸೇರಿಕೊಂಡೆವು. ಈಗಲೂ ಸಹ ಪೋಷಕರು ಒಪ್ಪಿದರೆ ಅರ್ಜಿ ಹಾಕಿದ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರವೇಶ ಕೊಡುತ್ತೇವೆ ಎಂದರು.

ಇದಕ್ಕೆ ಆಗಮಿಸಿದ್ದ ಐವತ್ತಕ್ಕೂ ಹೆಚ್ಚು ಪೋಷಕರು ಸಹಮತಿ ವ್ಯಕ್ತಪಡಿಸಿದರಲ್ಲದೆ ಹೆಚ್ಚುವರಿಯಾಘಿ ಪ್ರವೇಶ ನೀಡುವುದರಿಂದ ಆಗುವ ಆರ್ಥಿಕ ಹೊರೆಯನ್ನು ಪ್ರವೇಶ ಪಡೆದ ಎಲ್ಲಾ ಪೋಷಕರೂ ಸಮನಾಗಿ ಭರಿಸಲು ಸಿದ್ಧರಿದ್ದೇವೆ. ಹಾಗಾಗಿ ಲಾಟರಿ ಮೂಲಕ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆ ಕೈ ಬಿಟ್ಟು ಎಲ್ಲರಿಗೂ ಪ್ರವೇಶ ಕೊಡಿ ಎಂದು ಕೇಳಿಕೊಂಡರು. ಅದರಂತೆ 69 ವಿದ್ಯಾರ್ಥಿಗಳಿಗೂ ಪ್ರವೇಶ ಕೊಡುವುದಾಗಿ ತಿಳಿಸಿ ಪ್ರಚಾರ್ಯರು ಸಭೆ ಮುಕ್ತಾಯ ಮಾಡಿದರು. ಶಾಲಾಭಿವೃದ್ಧಿ ಸಮಿತಿಯ ಶೇಖರ್, ಚನ್ನಕೇಶವ, ಆನಂದ್. ಪಪಂ ಸದಸ್ಯರಾದ ರಾಜುಬಡಗಿ, ಸಿದ್ದಿಕ್, ಉಪಪ್ರಾಚಾರ್ಯೆ ಜ್ಯೋತಿ, ಮುಖ್ಯಶಿಕ್ಷಕಿ ಸಿ.ಡಿ.ಸರೋಜಮ್ಮ, ಶಿಕ್ಷಕರುಗಳಾದ ಹರ್ಷಿಯಾ, ಅಭಿನಂದನ್, ಪುಷ್ಪಾವತಿ, ಮಮತ ಉಪಸ್ಥಿತರಿದ್ದರು.

**ಟಿಸಿ ಹೋಗಿದ್ದ ಜಾಗಕ್ಕೆ ಲಾಟರಿ ಮೂಲಕ ಆಯ್ಕೆ:** ಯುಕೆಜಿ ರಿಂದ 5 ನೇ ತರಗತಿಯವರೆವಿಗೆ ವಿದ್ಯಾರ್ಥಿಗಳು ಟಿಸಿ ಪಡೆದು ಹೋಗಿದ್ದರು. ಇವರ ಜಾಗಕ್ಕೆ ಪ್ರವೇಶ ಕೋರಿ 80 ಅರ್ಜಿಗಳು ಬಂದಿದ್ದವು. ಸರ್ಕಾರದ ನಿಯಮದಂತೆ ಒಂದು ತರಗತಿಗೆ 30 ವಿದ್ಯಾರ್ಥಿಗಳ ಗರಿಷ್ಠ ಮಿತಿ ಇರುವುದರಿಂದ ಲಾಟರಿ ಮೂಲಕ ಆಯ್ಕೆ ಮಾಡಲಾಯಿತು. ಯುಕೆಜಿಗೆ 7, 1 ನೇ ತರಗತಿಗೆ 12, 2 ನೇ ತರಗತಿಗೆ 2, 3 ನೇ ತರಗತಿಗೆ 6, 4 ನೇ ತರಗತಿಗೆ 1 ಹಾಗೂ 5 ನೇ ತರಗತಿಗೆ 2 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಯಿತು.

# ವಿಶ್ವ ಮಲೇರಿಯಾ ದಿನ ಆಚರಣೆ

**ಹುಳಿಯಾರು:** ಹುಳಿಯಾರಿನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಲೇರಿಯಾ ಮಾಸಾಚರಣೆ ಕಾರ್ಯಕ್ರಮವನ್ನು ಸಓಮವರ ನಡೆಸಲಾಯಿತು.

ಆಯುಷ್ ವೈದ್ಯರಾದ ಡಾ.ಚಂದನ ಅವರು ಸಾರ್ವಜನಿಕರು ತಮ್ಮ ಸುತ್ತಮುತ್ತಲಿನ ಪರಿಸವನ್ನು ಶುಚಿಯಾಗಿ ಇಟ್ಟುಕೊಳ್ಳುವುದರ ಮುಖಾಂತರ ಹಾಗೂ ಸ್ವಚ್ಛತೆಯನ್ನು ಕಾಪಾಡಿಕೊಂಡು ಮಲೇರಿಯಾ ತಡೆಗೆ ಆರೋಗ್ಯ ಇಲಾಖೆ ಯೊಂದಿಗೆ ಕೈಜೋಡಿಸಬೇಕು ಎಂದರಲ್ಲದೆ ಮಲೇರಿಯ ಮುಂಜಾಗೃತ ಕ್ರಮ ಮತ್ತು ಚಿಕಿತ್ಸೆ ಬಗ್ಗೆ ಮಾಹಿತಿ ನೀಡಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿ.ವಿ.ವೆಂಕಟರಾಮಯ್ಯ ಮಾತನಾಡಿ ಮಳೆಗಾಲ ಆರಂಭವಾಗಿದ್ದು, ಮಳೆಯ ನೀರು ನಿಂತಲ್ಲೆ ನಿಂತು ಕೊಳ್ಳುವುದರಿಂದ ಸೊಳ್ಳೆಗಳು ಮಳೆಯ ನೀರಿನಲ್ಲಿ ವಾಸ ಮಾಡುತ್ತಯಾದ್ದರಿಂದ ರೋಗಗಳು ಹರಡುತ್ತದೆ, ಈ ಹಿನ್ನೆಲೆಯಲ್ಲಿ ಮಳೆ ನೀರು ನಿಂತಲ್ಲೇ ನಿಲ್ಲದಂತೆ ಎಲ್ಲೆಡೆ ಸ್ವಚ್ಛತೆಯಿಂದ ಇರುವಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ರೇಣುಕರಾಜು, ಆರೋಗ್ಯ ಸುರಕ್ಷತಾಧಿಕಾರಿಗಳಾದ ವೀಣಾ, ಮಧು, ಸಮುದಾಯ ಆರೋಗ್ಯ ಅಧಿಕಾರಿಗಳಾದ ಯಾಸ್ಮೀನ್ ಬಾನು, ಅಶ್ವಿನಿ ಉಪಸ್ಥಿತರಿದ್ದರು.




## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ವಕೀಲರ ಸಂಘ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ''ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಜಾಥಾ ಕಾರ್ಯಕ್ರಮ'' ಮತ್ತು ಸಭಾ ಕಾರ್ಯಕ್ರಮವನ್ನು ಜೂನ್ 12 ರಂದು ಬೆಳಿಗ್ಗೆ 8:30 ಗಂಟೆಗೆ ನಗರದ ಜೂನಿಯರ್ ಕಾಲೇಜು ಆವರಣದಿಂದ ಜಾಥಾ ಕಾರ್ಯಕ್ರಮವನ್ನು ಹಾಗೂ ಬೆಳಿಗ್ಗೆ 10 ಗಂಟೆಗೆ ನಗರದ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಸಭಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಾಥಾ ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್. ನಾಗೇಶ್, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಉಮೇಶ ಹೆಚ್.ಕೆ ರವರು ನೆರವೇರಿಸಲಿದ್ದಾರೆ. ಸಭಾ ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನೇರಳೆ ವೀರಭದ್ರಯ್ಯಾ ಭವಾನಿ ರವರು ನೆರವೇರಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘದ ಅಧ್ಯಕ್ಷರಾದ ಪಿ.ಎನ್. ರವೀಂದ್ರ ರವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್. ನಾಗೇಶ್, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಉಮೇಶ ಹೆಚ್.ಕೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಆರ್. ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿಗಳಾದ ಎಸ್.ಎಂ. ಮುರಳಿಮೋಹನ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರ್. ವರಲಕ್ಷ್ಮೀ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಪಿ. ಬೈಲಾಂಜಿನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ವೆಂಕಟೇಶ ರೆಡ್ಡಿ ರವರು ಭಾಗವಹಿಸಲಿದ್ದಾರೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸವನ್ನು ಕನ್ನಡ ಉಪನ್ಯಾಸಕರು ಹಾಗೂ ಆಕಾಶವಾಣಿ ಮತ್ತು ದೂರದರ್ಶನದ ಜಿಲ್ಲಾ ವರದಿಗಾರರಾದ ಎನ್. ಚಂದ್ರಶೇಖರ್ ರವರು ನೀಡಲಿದ್ದಾರೆ.

## ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25 ನೇ ಸಾಲಿಗೆ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ಎನ್.ಯು.ಎಲ್.ಎಂ.) ಯೋಜನೆಯ ಉಪಘಟಕವಾದ ಸ್ವಯಂ ಉದ್ಯೋಗ ಕಾರ್ಯಕ್ರಮದಲ್ಲಿ ವೈಯಕ್ತಿಕ ಮತ್ತು ಗುಂಪು ಹಾಗೂ ಕ್ರೆಡಿಟ್ ಬ್ಯಾಂಕ್ ಲೀಂಕೇಜ್ (ಖಇಕ(ಖ) (ಉ) ಃಚಿಟಇ ಅಡಿಜಜಣ ಐಟಇಚಿರಜ) ನಡಿ ಸಾಲ ಪಡೆಯುವುದಕ್ಕೆ ಬಡತನ ರೇಖೆಗಿಂತ ಕೆಳಗಿರುವ (ಃಕಖ) 18 ರಿಂದ 45 ವರ್ಷದೊಳಗಿನ ನಗರ ಪ್ರದೇಶದ ಅರ್ಹ ವ್ಯಕ್ತಿಗಳು ಮತ್ತು ಡೇ-ನಲ್ಮ್ ಯೋಜನೆಯಡಿ ರಚಿಸಲಾದ ಸ್ವ-ಸಹಾಯ ಗುಂಪುಗಳ ಸದಸ್ಯರು ಗುಂಪು ಉದ್ದಿಮೆಗೆ ಹಾಗೂ ಬ್ಯಾಂಕ್ ಕ್ರೆಡಿಟ್ ಲಿಂಕೇಜ್ ನಡಿ ಬ್ಯಾಂಕ್ ಸಾಲ ಸೌಲಭ್ಯಕ್ಕೆ ಅರ್ಹರಾಗಿದ್ದು, ಚಿಂತಾಮಣಿ ನಗರದ ವ್ಯಾಪ್ತಿಯಲ್ಲಿ ಆಸಕ್ತ ಅರ್ಹ ವ್ಯಕ್ತಿಗಳು ಅಗತ್ಯ ದಾಖಲೆಗಳೊಂದಿಗೆ ಉಚಿತವಾಗಿ ಅರ್ಜಿಗಳನ್ನು ಪಡೆದು ಜೂನ್ 19 ರೊಳಗಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಡೇ-ನಲ್ಮ್ ವಿಭಾಗಕ್ಕೆ ಸಲ್ಲಿಸಬಹುದಾಗಿರುತ್ತದೆ. ಅಗತ್ಯ ದಾಖಲೆಗಳು: ಅರ್ಜಿಯನ್ನು ದ್ವಿ-ಪ್ರತಿಯಲ್ಲಿ ಭರ್ತಿ ಮಾಡಿ ಎಲ್ಲಾ ದಾಖಲೆಗಳೊಂದಿಗೆ (ಜೆರಾಕ್ಸ್ ಪ್ರತಿಗಳು) ಸಲ್ಲಿಸತಕ್ಕದ್ದು. ವಿದ್ಯಾರ್ಹತೆ (ಅಂಕಪಟ್ಟಿ) ಪಡಿತರಚೀಟಿ, ಆಧಾರ್‌ಕಾರ್ಡ್, ಚುನಾವಣಾ ಗುರುತಿನ ಚೀಟಿ, ಜಾತಿ/ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಉಳಿತಾಯ ಖಾತೆ ಪುಸ್ತಕ, ವ್ಯಾಪಾರ ಚಟುವಟಿಕೆ ಅಂದಾಜು ಪಟ್ಟಿ, ಅಂಗಡಿಯ ಬಾಡಿಗೆ ಪತ್ರ, ವ್ಯಾಪಾರ ಪರವಾನಗಿ ಪತ್ರ, ಬ್ಯಾಂಕ್ ಬಾಕಿ ಪ್ರಮಾಣ ಪತ್ರವನ್ನು (ಎನ್.ಒ.ಸಿ.) ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಿಂತಾಮಣಿ ನಗರಸಭೆಯ ದೂರವಾಣಿ ಸಂಖ್ಯೆ:08154-252117 ಅಥವಾ ಡೇ ನಲ್ಮ್ ಶಾಖೆಗೆ ಸಂಪರ್ಕಿಸಬಹುದೆಂದು ಚಿಂತಾಮಣಿ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಜೀವ ವಿಮಾ ಏಜೆಂಟ್; ನೇರ ಸಂದರ್ಶನ

**ಚಿಕ್ಕಬಳ್ಳಾಪುರ:** ಹಿರಿಯ ಅಂಚೆ ಅಧೀಕ್ಷಕರು, ಕೋಲಾರ ವಿಭಾಗ ರವರ ''ಅಂಚೆ ಜೀವ ವಿಮಾ ಏಜೆಂಟ್'' ಗಳಿಗಾಗಿ ನೇರ ಸಂದರ್ಶನವನ್ನು ಹಿರಿಯ ಅಂಚೆ ಅಧೀಕ್ಷಕರ ಕಚೇರಿ, ಪಿ.ಸಿ. ಬಡಾವಣೆ, ಕೋಲಾರ-563101 ಯಲ್ಲಿ ಜೂನ್ 27 ರಂದು ಬೆಳಿಗ್ಗೆ 10:30 ಗಂಟೆಗೆ ಆಯೋಜಿಸಲಾಗಿದೆ. ರಿಂದ 50 ವರ್ಷ ಒಳಪಟ್ಟ ಆಸಕ್ತರು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ವಿಳಾಸ ದಾಖಲೆ ಹಾಗೂ ಮೂರು ಭಾವಚಿತ್ರಗಳೊಂದಿಗೆ ಸಂದರ್ಶನದಲ್ಲಿ ಭಾಗವಹಿಸಬಹುದು ಎಂದು ಕೋಲಾರ ಜಿಲ್ಲೆಯ ಹಿರಿಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಗುಂಡ್ಲುಪೇಟೆಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ : ದೂರು ಸ್ವೀಕಾರ

**ಚಾಮರಾಜನಗರ:** ಲೋಕಾಯುಕ್ತ ಅಧಿಕಾರಿಗಳು ಜೂನ್ 12ರಂದು ಗುಂಡ್ಲುಪೇಟೆಯ ಪ್ರವಾಸಿಮಂದಿರಕ್ಕೆ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ಕೆಲಸಗಳ ಅನಗತ್ಯ ವಿಳಂಬ ಹಾಗೂ ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ ಹಾಗೂ ನೌಕರರ ವಿರುದ್ದ ಸಾರ್ವಜನಿಕರು ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಜೂನ್ 12ರಂದು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 9.30 ಗಂಟೆಗೆ ನಗರದ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್ ಅವರು ಜಾಥಾ ಉದ್ಘಾಟಿಸಲಿದ್ದಾರೆ. ಬೆಳಿಗ್ಗೆ 10.30 ಗಂಟೆಗೆ ನಗರದ ವರನಟ ಡಾ. ರಾಜ್‌ಕುಮಾರ್ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್. ಭಾರತಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷರಾದ ಶಿಲ್ಪಾ ನಾಗ್ ಅವರು ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು. ನಗರಸಭೆ ಆಯುಕ್ತರಾದ ಎಸ್.ವಿ. ರಾಮದಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಮಂಜುನಾಥ್, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ರಾಮಚಂದ್ರರಾಜ ಅರಸ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮಂಜುನಾಥಪ್ರಸನ್ನ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಬಿ. ಮಲ್ಲಿಕಾರ್ಜುನ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಚಿದಂಬರ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಡಾ. ಬಿ.ಆರ್. ದಯಾನಂದ, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಕೆ.ಎನ್. ಶಂಕರಪ್ಪ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಶಾಲಾ ಶಿಕ್ಷಣ ಇಲಾಖೆಯ ಸಮನ್ವಯ ಕಾರ್ಯತಂತ್ರದಡಿಯಲ್ಲಿ 2024-25ನೇ ಸಾಲಿಗೆ ಪ್ರಾಥಮಿಕ ವಿಭಾಗ ಹಾಗೂ ಪ್ರೌಢಶಾಲಾ ವಿಭಾಗದ ಹುದ್ದೆಗಳಿಗೆ ತಾತ್ಕಾಲಿಕವಾಗಿ ನೇರಗುತ್ತಿಗೆಯಡಿಯಲ್ಲಿ ಬಿ.ಐ.ಇ.ಆರ್.ಟಿಗಳ ಸೇವೆಯನ್ನು ಪಡೆಯಲು ತಾಲೂಕುವಾರು ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು ಸಮನ್ವಯ ಶಿಕ್ಷಣದಲ್ಲಿ ಪ್ರಾಥಮಿಕ ವಿಭಾಗಕ್ಕೆ ವಿಶೇಷ ಡಿ.ಎಡ್ ಹಾಗೂ ಪ್ರೌಢಶಾಲಾ ವಿಭಾಗಕ್ಕೆ ವಿಶೇಷ ಬಿ.ಇಡಿ ಹೊಂದಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರಾಥಮಿಕ ವಿಭಾಗದಲ್ಲಿ ಗುಂಡ್ಲುಪೇಟೆ-2, ಹನೂರು-1, ಕೊಳ್ಳೇಗಾಲ-2, ಯಳಂದೂರು-1 ಸೇರಿದಂತೆ ಒಟ್ಟು 6 ಮತ್ತು ಪ್ರೌಢಶಾಲಾ ವಿಭಾಗದ ಚಾಮರಾಜನಗರ-2, ಗುಂಡ್ಲುಪೇಟೆ-2, ಹನೂರು-2, ಕೊಳ್ಳೇಗಾಲ-2, ಯಳಂದೂರು-2 ಸೇರಿದಂತೆ ಒಟ್ಟು 10 ಹುದ್ದೆಗಳಿಗೆ ಆಯ್ಕೆ ಮಾಡಲಾಗುತ್ತಿದೆ. ಸಮನ್ವಯ ಶಿಕ್ಷಣದ ವಿಶೇಷ ಶಿಕ್ಷಣದಲ್ಲಿ ಬುದ್ಧಿಮಾಂಧ್ಯ (ಐ.ಡಿ), ಬಹುವಿಕಲಾಂಗತೆ (ಎಂ.ಡಿ), ಶ್ರವಣದೋಷ (ಹೆಚ್.ಐ), ದೃಷ್ಠಿದೋಷ (ವಿ.ಐ) ಕುರಿತು ಪದವಿ ಪಡೆದ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಹಾಗೂ ವಿಶೇಷ ಶಿಕ್ಷಕರಿಗೆ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ. ಅರ್ಜಿಯನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ 2ನೇ ಮಹಡಿಯ ಕೊಠಡಿ ಸಂಖ್ಯೆ 205ರ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿಗೆ ಜೂನ್ 15 ರೊಳಗೆ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಸೂಚನೆ
# ನೀರಿನ ಸಮಸ್ಯೆ ಶೀಘ್ರ ಪರಿಹರಿಸಿ



**ಚಾಮರಾಜನಗರ:** ಜನರಿಗೆ ಶುದ್ಧ ಕುಡಿಯುವ ಪೂರೈಸುವುದಲ್ಲದೆ, ಜಿಲ್ಲೆಯ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕಂಡುಬರುವ ಕುಡಿಯುವ ನೀರಿನ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲು ಅವಶ್ಯ ಕ್ರಮ ವಹಿಸುವಂತೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಇತ್ತೀಚೆಗೆ ಸತತವಾಗಿ ಮಳೆಯಾಗುತ್ತಿದ್ದು, ಕುಡಿಯುವ ನೀರಿನ ಪರಿಸ್ಥಿತಿ ಸುಧಾರಿಸಲಿದೆ. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಸಮಸ್ಯೆಗಳು ಎದುರಾದರೂ ಅದನ್ನು ಸಮರ್ಪಕವಾಗಿ ನಿಭಾಯಿಸಿ ಕುಡಿಯುವ ನೀರನ್ನು ತ್ವರಿತವಾಗಿ ಪೂರೈಸಲು ಆದ್ಯತೆ ನೀಡಬೇಕು. ಜಿಲ್ಲೆಯ ಯಾವುದೇ ಭಾಗದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸುವಲ್ಲಿ ನಿರ್ಲಕ್ಷ್ಯ ವಹಿಸಿದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಚಿವರು ತಾಕೀತು ಮಾಡಿದರು.

ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಈಗಾಗಲೇ ಕೊರೆಸಿರುವ ಬೋರ್‌ವೆಲ್ ಬಳಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ನೀರಿನ ಟ್ಯಾಂಕ್‌ಗಳನ್ನು ಆಗಾಗ್ಗೆ ಸ್ವಚ್ಛಗೊಳಿಸಬೇಕು. ಕುಡಿಯುವ ನೀರಿನ ಪೈಪ್ ಲೈನ್ ಸೋರಿಕೆಯನ್ನು ಕೂಡಲೇ ಸರಿಪಡಿಸಬೇಕು. ಕುಡಿಯುವ ನೀರಿಗೆ ಇತರೆ ಕಲುಷಿತ ನೀರು ಸೇರದಂತೆ ನಿಗಾ ವಹಿಸಬೇಕು. ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿವಾಹಕ ಅಧಿಕಾರಿಗಳು ಹಾಗೂ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಈ ಬಗ್ಗೆ ತುರ್ತು ಪರಿಹಾರ ಕ್ರಮಗಳನ್ನು ವಹಿಸಬೇಕು. ತಪ್ಪಿದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಉಸ್ತುವಾರಿ ಸಚಿವರು ಸೂಚಿಸಿದರು.

ಕೊಳ್ಳೇಗಾಲ ತಾಲೂಕಿನ ಮಧುವನಹಳ್ಳಿಯಲ್ಲಿ ಕಲುಷಿತ ನೀರು ಸೇವಿಸಿ ಜನರು ಅಸ್ವಸ್ಥಗೊಂಡಿದ್ದರು. ಅಂತಹ ಪ್ರಕರಣ ಜಿಲ್ಲೆಯಲ್ಲಿ ಮತ್ತೆ ಮರುಕಳಿಸದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿರುವ ಶುದ್ಧ ಕುಡಿಯುವ ನೀರಿನ (ಆರ್.ಒ ಪ್ಲಾಂಟ್) ಘಟಕಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು. ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟಿದ್ದರೆ ಸಂಬಂಧಪಟ್ಟ ಏಜೆನ್ಸಿಗಳಿಗೆ ಟೈಮ್‌ಲೈನ್ ನಿಗದಿಪಡಿಸಿ ದುರಸ್ಥಿಪಡಿಸಲು ಮುಂದಾಗಬೇಕು ಎಂದು ಸಚಿವರು ತಿಳಿಸಿದರು.

ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗುತ್ತಿರುವರಿಂದ ಕೃಷಿ ಚಟುವಟಿಕೆಗಳು ಆರಂಭವಾಗಿವೆ. ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಅಗತ್ಯವಿರುವಷ್ಟು ದಾಸ್ತಾನು ಇಟ್ಟುಕೊಳ್ಳಬೇಕು. ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡದಂತೆ ಖಾಸಗಿ ಅಂಗಡಿಗಳಿಗೆ ಸೂಚನೆ ನೀಡಬೇಕು. ಸೊಸೈಟಿ ಮೂಲಕ ರೈತರಿಗೆ ರಸಗೊಬ್ಬರ ಒದಗಿಸಬೇಕು. ಯೂರಿಯಾ ಗೊಬ್ಬರವನ್ನು ಕಡಿಮೆ ಬೆಲೆಗೆ ಖರೀದಿಸಿ ಅಂತರರಾಜ್ಯದಲ್ಲಿ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿರುವ ಬಗ್ಗೆ ದೂರುಗಳು ಬಂದಿದ್ದು, ಈ ಸಂಬಂಧ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಬಿಗಿಗೊಳಿಸಬೇಕು. ಮಳೆಗಾಳಿಯಿಂದ ಉಂಟಾಗಿರುವ ಬೆಳೆಹಾನಿಗೆ ಕಾಲಮಿತಿಯಲ್ಲಿ ಪರಿಹಾರ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಹೇಳಿದರು.

ಸಮಾಜ ಕಲ್ಯಾಣ ಸಚಿವರಾದ ಎಚ್.ಸಿ. ಮಹದೇವಪ್ಪ ಅವರು ಮಾತನಾಡಿ ಜಿಲ್ಲೆಯಾದ್ಯಂತ ಕುಡಿಯುವ ನೀರು ಸಮಸ್ಯೆ ತಲೆದೋರದಂತೆ ಎಲ್ಲಾ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಸಮಸ್ಯೆ ಎದುರಾಗುವ ಮೊದಲೇ ಅಧಿಕಾರಿಗಳು ಕಾರ್ಯಸನ್ನದ್ಧರಾಗಬೇಕು. ಜಿಲ್ಲೆಯಲ್ಲಿ ಬಡವರು, ಅಸಹಾಯಕರು, ಹಿಂದುಳಿದವರು, ಪರಿಶಿಷ್ಟ ವರ್ಗದವರು ಅಧಿಕ ಸಂಖ್ಯೆಯಲ್ಲಿದ್ದು, ನಿರೀಕ್ಷಿತ ಮಟ್ಟದಲ್ಲಿ ಎಲ್ಲರ ಅಭಿವೃದ್ಧಿಯಾಗಬೇಕು ಎಂದು ತಿಳಿಸಿದರು. ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಮಾತನಾಡಿ ಚಾಮರಾಜನಗರ ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಬೇಕು. ತಾಲೂಕಿನ ವಿವಿಧ ಗ್ರಾಮಗಳಲ್ಲಿ ಮಳೆಗಾಳಿಯಿಂದ ಸಾಕಷ್ಟು ಮನೆಗಳು ಹಾನಿಗೊಳಗಾಗಿವೆ. ಈ ಸಂಬಂಧ ಕಂದಾಯ ಇಲಾಖೆಯ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಮನೆ ಹಾನಿಯಾಗಿರುವ ಬಗ್ಗೆ ವರದಿ ಸಂಗ್ರಹಿಸಬೇಕು. ಹಾನಿಯಾದ ಮನೆಗಳಿಗೆ ಶೀಘ್ರ ಪರಿಹಾರ ನೀಡಿ, ಸೂರು ಕಲ್ಪಿಸುವ ಕೆಲಸವಾಗಬೇಕು ಎಂದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಕೊಳ್ಳೇಗಾಲ ನಗರಸಭೆ ವ್ಯಾಪ್ತಿಯಲ್ಲಿ ಜಲಜೀವನ್ ಮಿಷನ್ ಯೋಜನೆ ಹಾಗೂ 24★7 ಕುಡಿಯುವ ನೀರಿನ ಯೋಜನೆಗಳನ್ನು ಅದಷ್ಟು ಬೇಗನೆ ಪೂರ್ಣಗೊಳಿಸಬೇಕು. ಜಿಲ್ಲಾಧಿಕಾರಿಗಳು ಈ ಬಗ್ಗೆ ಖುದ್ದು ಪರಿಶೀಲಿಸಿ ಸಮಸ್ಯೆ ಇತ್ಯರ್ಥಪಡಿಸಬೇಕು. ಬಿ.ಆರ್.ಟಿ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ಜಲಜೀವನ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ ಕಾಮಗಾರಿಯಲ್ಲಿ ಅರಣ್ಯ ನೀತಿಯಿಂದ ಆಗುತ್ತಿರುವ ತೊಡಕುಗಳನ್ನು ಅಧಿಕಾರಿಗಳು ನಿವಾರಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಕುಡಿಯುವ ನೀರು ಪೂರೈಕೆ ಸಂಬಂಧ ನೀರು ಕಲುಷಿತಗೊಳ್ಳದಂತೆ ಎಚ್ಚರ ವಹಿಸಲು ಎಲ್ಲಾ ಅಧಿಕಾರಿಗಳಿಗೂ ಸೂಚನೆ ನೀಡಲಾಗಿದೆ. ಚಾಮರಾಜನಗರ ಹಾಗೂ ಕೊಳ್ಳೇಗಾಲದಲ್ಲಿ ನೀರು ಶುದ್ಧಿಕರಣ ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರಿನ ಪರೀಕ್ಷೆ ನಡೆಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಭಾಗಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಸಮರ್ಪಕ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಕಾಡಾ ಅಧ್ಯಕ್ಷರಾದ ಮರಿಸ್ವಾಮಿ, ಮೈಸೂರು ಜಿಲ್ಲಾಧಿಕಾರಿ ಕೆ.ವಿ. ರಾಜೇಂದ್ರ, ಚಾಮರಾಜನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ. ಕಂಟ್ರಾಕ್ಟರ್, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಚಾಮರಾಜನಗರ ತಾಲ್ಲೂಕಿನ ಕೋಡಿಮೋಳೆ ಗ್ರಾಮದಲ್ಲಿ ಶ್ರೀಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ಉದ್ಘಾಟಿಸಿದರು. ಗ್ರಾ.ಪಂ ಅಧ್ಯಕ್ಷ ನಟರಾಜು ಕೋಡಿ ಮೋಳೆ ಗೋವಿಂದಶೆಟ್ಟಿ ಕೋಡಿಮೋಳೆ ಪ್ರಕಾಶ್ ಇತರರು ಇದ್ದರು.



# ಮಹಾನ್ ಪುರಷರ ಆದರ್ಶ ಗುಣ ಪಾಲನೆಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಕರೆ

**ಚಾಮರಾಜನಗರ:** ಭಗೀರಥ ಮಹಾರಾಜರು ಸತತ ಪ್ರಯತ್ನದಿಂದ ಶಿವನನ್ನು ಪ್ರಾರ್ಥಿಸಿ ಧರೆಗೆ ಗಂಗೆಯನ್ನು ತಂದು ಇಡೀ ಭೂ ಮಂಡಲಕ್ಕೆ ಒಳಿತನ್ನು ಬಯಸಿದಂತಹ ಮಹಾನ್ ಪುರುಷ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು. ಚಾಮರಾಜನಗರ ತಾಲ್ಲೂಕಿನ ಕೋಡಿ ಮೋಳೆ ಗ್ರಾಮದಲ್ಲಿ ಶ್ರೀ,ಭಗೀರಥ ಮಹರ್ಷಿ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ನಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಶಾಸಕರು ಮಾತನಾಡಿದರು. ಶ್ರೀ,ಭಗೀರಥ, ಮಹಾನ್‌ಭಾವರ ಹೆಸರಿನಲ್ಲಿ ಜಯಂತಿಯನ್ನು ಆಚರಿಸುತ್ತಿದ್ದು ಪ್ರತಿಯೊಬ್ಬರು ಅವರ ಆದರ್ಶ ಗುಣಗಳನ್ನು ತತ್ವಗಳ ಅವರ ಚಿಂತನೆಗಳನ್ನು ಮೈಗೂಡಿಸಿ ಕೂಂಡು ಸಮಾಜದ ಒಳಿತಿಗೆ ನಾವೇಲ್ಲರು ನಮ್ಮ ಜೀವನದಲ್ಲಿ ಅಳವಡಿಸಿ ಕೂಂಡು ಸಾಗೋಣ ಇದನ್ನು ಪಾಲಿಸಿದಾಗ ಮಾತ್ರ ಮಹಾನ್ ಪುರುಷರ ಜಯಂತಿಗಳಿಗೆ ಅರ್ಥ ಬರುತ್ತದೆ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾ,ಪಂ ಅಧ್ಯಕ್ಷ ನಟರಾಜು, ಮುಖಂಡರಾದ ಕೋಡಿಮೋಳೆ ಗೋವಿಂದಶೆಟ್ಟಿ, ಕೋಡಿಮೋಳೆಪ್ರಕಾಶ್, ಯ, ರಂಗಸ್ವಾಮಿ,ನಂಜುಂಡಶೆಟ್ಟಿ, ವಿಷಕಂಠ,' ,ಜಯಶಂಕರ್, ಮಹೇಶ್, ರಾಜು ಹಾಜರಿದ್ದರು.

# ಮೇಕೆದಾಟು ಯೋಜನೆ ಜಾರಿಗೆ ಸಂಸದರು ಪ್ರಾಮಾಣಿಕ ಪ್ರಯತ್ನ ಮಾಡಲಿ



**ಚನ್ನಪಟ್ಟಣ:** ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಸೋಮವಾರ ನಡೆದ 249 ನೇ ದಿನದ ಹೋರಾಟದಲ್ಲಿ ಮಾತನಾಡಿದ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ರಾಜ್ಯದಿಂದ ಹೊಸದಾಗಿ ಆಯ್ಕೆಯಾದ 28 ಸಂಸದರು ಪ್ರಮಾಣ ವಚನ ಸ್ವೀಕಾರ ಮಾಡಿದ್ದಾರೆ. ಇವರು ಕಾವೇರಿ ನೀರು ಹಂಚಿಕೆ ವಿವಾದ ಹಾಗೂ ಮೇಕೆದಾಟು ಅಣೆ ಕಟ್ಟೆ ನಿರ್ಮಾಣದ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಗಮನ ಸೆಳೆಯಲು ಮುಂದಾಗಬೇಕು ಕಕಜವೇದಿಕೆ ಮೂಲಕ ನಾಡು, ನುಡಿ ಹೋರಾಟಕ್ಕೆ ಬರುವವರಿಗೆ ರೇಷ್ಮೆನಾಡು ಕ್ರೀಡಾ ಮತ್ತು ಸಾಂಸ್ಕೃತಿಕ ಟ್ರಸ್ಟ್ ನೇತೃತ್ವದಲ್ಲಿ ''ಹಸಿರಿದ್ದರೆ-ಉಸಿರು'' ಎಂಬ ಘೋಷವಾಕ್ಯದ ಮೂಲಕ ಪರಿಸರ ಸಂರಕ್ಷಣೆ ಮಾಡುವ ಜನಾಂದೋಲನದಡಿ ನಿತ್ಯ 25 ಗಿಡ ವಿತರಣೆ ಮಾಡಿ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಆಂದೋಲನಕ್ಕೆ ಜ್ಞಾನ ಸರೋವರ ಕಾಲೇಜಿನ ವಿದ್ಯಾರ್ಥಿಗಳು ಬೆಂಬಲ ನೀಡಿದ್ದಾರೆ.

ಪರಿಸರದಲ್ಲಿ ಗಿಡಮರಗಳು ಹೆಚ್ಚಾದಷ್ಟು ಪ್ರಕೃತಿಯಲ್ಲಿ ಸಮತೋಲನ ಉಂಟಾಗುವ ಜೊತೆಗೆ ಬೇಸಿಗೆ ಕಾಲ, ಮಳೆಗಾಲ, ಚಳಿಗಾಲಗಳು ಋತುಮಾನಗಳಿಗೆ ಅನುಕೂಲವಾಗುವಂತೆ ಕಾಪಾಡುವ ಜೊತೆಗೆ ಮಳೆ, ಗಾಳಿ, ನೀರು, ಬೆಳೆ ಎಲ್ಲವೂ ಸರಿಯಾದ ಪ್ರಮಾಣದಲ್ಲಿ ಕಾಣುವಂತಾಗುತ್ತದೆ. ಆದರೆ ಆಧುನಿಕ ತಂತ್ರಜ್ಞಾನಕ್ಕೆ ಸಿಲುಕಿ ಮರಗಳ ಮಾರಣ ಹೋಮ ಮಾಡಿರುವ ಮನುಷ್ಯರ ದುರಾಸೆಯಿಂದ ಇಂದು ಪ್ರಕೃತಿಯಲ್ಲಿ ಸಮತೋಲನ ಇಲ್ಲದಂತಾಗಿ ಬಿಸಿಲಿನ ತಾಪ ಹೆಚ್ಚಾಗಿ ಮಳೆಗಾಲದಲ್ಲಿ ಮಳೆ ಆಗದೆ ನೀರಿನ ಅಭಾವ ಉಂಟಾಗುತ್ತಾ ಬಂದಿದೆ. ಈ ನಿಟ್ಟಿನಲ್ಲಿ ನಾವೆಲ್ಲಾ ಪರಿಸರ ಸಂರಕ್ಷಣೆಗೆ ಮುಂದಾಗಲು ಪಣ ತೊಡಬೇಕಿದೆ ಎಂದರು.

ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರಾದ ನಿಂಗೇಗೌಡರು(ಎನ್‌ಜಿ) ಮಾತನಾಡಿ, ನಮ್ಮ ಪೂರ್ವಜನರು ಪ್ರಕೃತಿಗೆ ಪೂಜ್ಯನೀಯ ಸ್ಥಾನ ನೀಡುತ್ತಾ ಬಂದಿದ್ದರೂ. ಯಾವುದೇ ನ್ಯಾನ ಪಂಚಾಯ್ತಿ ಮಾಡಿದರೂ ಅರಳಿಕಟ್ಟೆಯ ಕೆಳಗೆ ಕೂತು ಮತದ ಮೇಲೆ ಪ್ರಮಾಣ ಮಾಡಿ ನ್ಯಾಯಕ್ಕೆ ಮುಕ್ತಿ ನೀಡುತ್ತಿದ್ದರು. ಅಲ್ಲದೆ ಮರಗಳನ್ನು ಸಾಕ್ಷಿಯಾಗಿಸಿ ಸಾಲ ನೀಡುತ್ತಿದ್ದರು. ಹೊರಗೆ ಹೋಗಬೇಕಾದರೆ ಮನೆಯ ಮುಂದಿನ ಮರಕ್ಕೆ ಕೈ ಮುಗಿದು ಹೋಗುವ ಸಂಸ್ಕಾರ ಇತ್ತು. ಜೊತೆಗೆ ಮಳೆ ಬಂದಾಗ ನೀರಿನ ಜೊತೆ ಮಣ್ಣಿನ ಫಲವತ್ತದೆ ಕೊಚ್ಚಿಹೋಗದಂತೆ ಕಾಪಾಡುವ ನಿಟ್ಟಿನಲ್ಲಿ ಹೊಲಗದ್ದೆಗಳಿಗೆ ತೆವರಿಗೆ (ಬದು) ಸುತ್ತಲೂ ಮರಗಳನ್ನು ಬೆಳೆಸುತ್ತಿದ್ದರು. ಆದರೆ ಇಂದು ಆಧುನಿಕತೆಯ ಸೋಗಿನಲ್ಲಿ ನಮ್ಮ ಪೂರ್ವಜರು ನೆಟ್ಟು ಬೆಳೆಸಿದ ಮರಗಳನ್ನು ಕಡಿದು ಅಪಾರ್ಟ್‌ಮೆಂಟ್‌ಗಳನ್ನು ನಿರ್ಮಾಣ ಮಾಡಿ ಉತ್ತಮ ಗಾಳಿ ಇಲ್ಲದಂತೆ ಮಾಡಿದ್ದು, ಮಣ್ಣು ಪಲವತ್ತತೆಯನ್ನು ಕಳೆದುಕೊಳ್ಳುವಂತೆ ಮಾಡಿದ್ದೇವೆ. ನಮ್ಮ ಮಕ್ಕಳಿಗೆ ಶುದ್ಧ ಗಾಳಿ ಎಲ್ಲಿದೆ ಎಂದರೆ ಅದನ್ನು ಆಸ್ಪತ್ರೆಯಲ್ಲಿನ ಆಮ್ಲಜನಕವನ್ನು ಉದಾಹರಣೆ ಕೊಟ್ಟು ಹೇಳುವಂತಾಗಿದೆ. ಈ ನಿಟ್ಟಿನಲ್ಲಿ ನಾವು ಮಕ್ಕಳಿಗೆ ಶಿಕ್ಷಣದ ಜೊತೆಗೆ ಪರಿಸರ ಸಂರಕ್ಷಣೆಯ ಬಗ್ಗೆ ಸಹ ಅರಿವು ಮೂಡಿಸುವ ಜವಾಬ್ದಾರಿ ಇದೆ ಎಂದರು.

ಇದೇ ವೇಳೆ ಕಾಲೇಜಿನ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಿ ಜನರಿಗೆ ಸಸಿ ವಿತರಣೆ ಮಾಡಿದರು.

ಸಂದರ್ಭದಲ್ಲಿ ಜಗದಾಪುರ ಕೃಷ್ಣೇಗೌಡ, ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಚಿಕ್ಕಣ್ಣಪ್ಪ, ಸಂಕಲಗೆರೆ ಹುಚ್ಚಪ್ಪ, ಚಿಕ್ಕೇನಹಳ್ಳೀ ಸಿದ್ದಪ್ಪಾಜಿ, ಜ್ಞಾನ ಸರೋವರ ಕಾಲೇಜಿನ ಪ್ರಾಂಶುಪಾಲರಾದ ಹೇಮಲತಾ, ಕಾರ್ಯದರ್ಶಿ ಆದರ್ಶ ಕುಮಾರ್ ಆರ್, ಉಪನ್ಯಾಸಕರುಗಳಾದ ಹೊಲಸಾಲಯ್ಯ, ಪ್ರವೀಣ್, ಝಾಕಿರ್ ಹುಸೇನ್, ವಿನಯ್ ಕುಮಾರ್, ಶೃತಿ, ಭಾವನ, ಚಂದನ, ರೂಪ, ಸುಂದ್ರಮ್ಮ ಇನ್ನೂ ಅನೇಕರು ಹಾಜರಿದ್ದರು.

# ಸಂತ್ರಸ್ತರಿಗೆ ಸಾಂತ್ವನ

**ಚಾಮರಾಜನಗರ:** ಮಲೆ ಮಹದೇಶ್ವರ ಬೆಟ್ಟದಲ್ಲಿ ಆತ್ಮಹತ್ಯೆಗೆ ಯತ್ನಿಸಿ ನಗರದ ವೈದ್ಯಕೀಯ ಕಾಲೇಜು (ಸಿಮ್ಸ್) ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮೈಸೂರು ಜಿಲ್ಲೆಯ ಕೆ.ಆರ್. ನಗರ ತಾಲೂಕಿನ ಗ್ರಾಮವೊಂದರ ಸಂತ್ರಸ್ತರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಭೇಟಿ ಮಾಡಿ ಸಾಂತ್ವನ ಹೇಳಿದರು. ಚಾಮರಾಜನಗರದ ಹೊರವಲಯದ ಯಡಪುರ ಬಳಿ ಇರುವ ವೈದ್ಯಕೀಯ ಕಾಲೇಜಿನ ಬೋಧನ ಆಸ್ಪತ್ರೆಯಲ್ಲಿ ಸಂತ್ರಸ್ತರು ಪಡೆಯುತ್ತಿರುವ ಚಿಕಿತ್ಸೆ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರಾದ ವೆಂಕಟೇಶ್ ಅವರ ಜೊತೆಗೆ ಸಮಾಜ ಕಲ್ಯಾಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಸಿ. ಮಹದೇವಪ್ಪ ಅವರು ಸಹ ಭೇಟಿ ಮಾಡಿ ಆಸ್ಪತ್ರೆಯ ವೈದ್ಯಾಧಿಕಾರಿಗಳಿಂದ ಮಾಹಿತಿ ಪಡೆದರು.

ಸಂತ್ರಸ್ತರ ಆರೋಗ್ಯ ಕ್ಷೇಮವನ್ನು ವಿಚಾರಿಸಿದ ಸಚಿವರುಗಳು ಸಂತ್ರಸ್ತರು ಅದಷ್ಟು ಬೇಗನೇ ಚೇತರಿಸಿಕೊಳ್ಳಲು ಸೂಕ್ತ ಚಿಕಿತ್ಸೆ ನೀಡುವಂತೆ ಸ್ಥಳದಲ್ಲಿಯೇ ಇದ್ದ ವೈದ್ಯರಿಗೆ ಸೂಚಿಸಿದರು. ಸಂತ್ರಸ್ತರು ಆಸ್ಪತ್ರೆಗೆ ದಾಖಲಾದ ಸಂದರ್ಭದಲ್ಲಿ ಆರೋಗ್ಯ ಪರಿಸ್ಥಿತಿ ಹೇಗಿತ್ತು ?, ಈಗ ಹೇಗಿದೆ ಎಂಬುದರ ಸವಿವರ ಮಾಹಿತಿ ಪಡೆದ ಸಚಿವರುಗಳು ಬಳಿಕ ಸಂತ್ರಸ್ತರಿಗೆ ನಿಮಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳ ಲಾಗುವುದು, ಧೈರ್ಯವಾಗಿರುವಂತೆ ಭರವಸೆ ತುಂಬಿದರು.

ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷರಾದ ಮರಿಸ್ವಾಮಿ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಮೈಸೂರು ಜಿಲ್ಲಾಧಿಕಾರಿ ಕೆ.ವಿ. ರಾಜೇಂದ್ರ, ಚಾಮರಾಜನಗರ ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಪದ್ಮಿನಿ ಸಾಹು, ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ. ಕಂಟ್ರಾಕ್ಟರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ವೈದ್ಯಕೀಯ ಕಾಲೇಜಿನ ಸ್ಥಾನಿಕ ವೈದ್ಯಾಧಿಕಾರಿ ಡಾ. ಕೃಷ್ಣಪ್ರಸಾದ್, ಇತರರು ಇದ್ದರು.

## ಸಂಜೆ ಟಿಪ್ಸ್



## ಆನ್‌ಲೈನ್ ಮೂಲಕ ಫೋನ್ ಖರೀದಿಸುವ ಗ್ರಾಹಕರಿಗೆ ಗುಡ್‌ನ್ಯೂಸ್!

ಅಮೆಜಾನ್ ಇ ಕಾಮರ್ಸ್ ಅನೇಕ ಆನ್ಲೈನ್ ಶಾಪಿಂಗ್ ಮಾಡುವ ಖರೀದಿದಾರರಿಗೆ ಒನ್ ಸ್ಟಾಪ್ ಅಡ್ಡಾ ಎನಿಸಿದೆ. ಈ ಪ್ಲಾಟ್ಫಾರ್ಮ್ ಮುಖ್ಯವಾಗಿ ಮೊಬೈಲ್‌ಗಳಿಗೆ ಏನಾದರೊಂದು ಆಕರ್ಷಕ ಡಿಸ್ಕೌಂಟ್ ಲಭ್ಯ ಮಾಡುತ್ತದೆ. ಇದೀಗ ಟೆಕ್ನೋ ಸಂಸ್ಥೆಯ ಟೆಕ್ನೋ ಸ್ಪಾರ್ಕ್ 20C ಮೊಬೈಲ್ ಬೆಲೆಯಲ್ಲಿ ಗಮನಾರ್ಹ ಡಿಸ್ಕೌಂಟ್ ಘೋಷಿಸಿದ್ದು, ಅಗ್ಗದ ಬೆಲೆಯಲ್ಲಿ ಫೋನ್ ಖರೀದಿಸಬೇಕು ಎನ್ನುವ ಗ್ರಾಹಕರನ್ನು ಆಕರ್ಷಿಸುತ್ತಿದೆ. ಈ ಮೊಬೈಲ್ ಮೀಡಿಯಾ ಟೆಕ್ ಹಿಲಿಯೋ P35 SoC ಪ್ರೊಸೆಸರ್ ಅನ್ನು ಪಡೆದಿದ್ದು, ಹಾಗೆಯೇ 5000mAh ಸಾಮರ್ಥ್ಯದ ಬ್ಯಾಟರಿ ಬ್ಯಾಕ್‌ಅಪ್ ಕೂಡಾ ಒಳಗೊಂಡಿದೆ. ಹೌದು, ದಿಗ್ಗಜ ಇ ಕಾಮರ್ಸ್ ಅಮೆಜಾನ್ ಪ್ಲಾಟ್ಫಾರ್ಮ್ ನಲ್ಲಿ ಟೆಕ್ನೋ ಸ್ಪಾರ್ಕ್ 20ಅ ಫೋನ್ ಶೇ. 24% ರಷ್ಟು ರಿಯಾಯಿತಿ ಹೊಂದಿದೆ. ಈ ಮೊಬೈಲ್ನ 16GB* + 128GB ಸ್ಟೋರೇಜ್ ವೇರಿಯಂಟ್ 7,999ರೂ. ಗಳ ಡಿಸ್ಕೌಂಟ್ ಬೆಲೆಯಲ್ಲಿ ಖರೀದಿಗೆ ಲಭ್ಯ ಇದೆ. ಇದಲ್ಲದೇ ಇತರೆ ಆಯ್ದ ಬ್ಯಾಂಕ್ ಕೊಡುಗೆಗಳು ಕೂಡಾ ಗ್ರಾಹಕರಿಗೆ ದೊರೆಯುತ್ತವೆ.ಇದು ಮೀಡಿಯಾ ಟೆಕ್ ಹಿಲಿಯೋ P35 SoC ಪ್ರೊಸೆಸರ್ ಸೌಲಭ್ಯ ಪಡೆದಿದ್ದು, ಅಲ್ಲದೇ ಈ ಫೋನ್ ಗ್ರ್ಯಾವಿಟಿ ಬ್ಲ್ಯಾಕ್, ಮ್ಯಾಜಿಕ್ ಸ್ಕಿನ್ ಗ್ರೀನ್ ಹಾಗೂ ಮೈಸ್ಟ್ರಿ ವೈಟ್ ಕಲರ್ ಆಯ್ಕೆ ಪಡೆದಿದೆ. ಟೆಕ್ನೋ ಸ್ಪಾರ್ಕ್ 20ಅ ಮೊಬೈಲ್ 6.6 ಇಂಚಿನ ಎಲ್ಸಿಡಿ ಡಿಸ್ಪ್ಲೇ ಅನ್ನು ಪಡೆದಿದ್ದು, ಇನ್ನು ಡಿಸ್ಪ್ಲೇಯು 720X1612 ಸ್ಕ್ರೀನ್ ರೆಸಲ್ಯೂಶನ್ ಸಾಮರ್ಥ್ಯದ ಆಯ್ಕೆ ಪಡೆದಿದೆ. ಹಾಗೆಯೇ ಈ ಡಿಸ್ಪ್ಲೇಯು 90Hz ರಿಫ್ರೆಶ್ ರೇಟ್ ಬೆಂಬಲ ಪಡೆದಿದೆ.

## ಆಲೂಗಡ್ಡೆ ಪಲಾವ್

### ಪಾಕ ಶಾಲೆ



### ಮಾಡುವ ವಿಧಾನ

ಒಂದು ಬಾಣಲೆಗೆ ತುಪ್ಪವನ್ನು ಹಾಕಿ ಬಿಸಿ ಮಾಡಿ. ನಂತ್ರ ತುಪ್ಪಕ್ಕೆ ಜೀರಿಗೆ, ಏಲಕ್ಕಿ, ದಾಲ್ಚಿನ್ನಿ, ಲವಂಗ ಹಾಕಿ. ಇದಕ್ಕೆ ಆಲೂಗಡ್ಡೆ ಹಾಗೂ ಅಕ್ಕಿಯನ್ನು ಹಾಕಿ ಫ್ರೈ ಮಾಡಿ. ಮೆಣಸಿನ ಪುಡಿ, ಉಪ್ಪು ಹಾಗೂ ನೀರನ್ನು ಹಾಕಿ 15 ನಿಮಿಷಗಳ ಕಾಲ ಬೇಯಿಸಿ. ಬಿಸಿ ಬಿಸಿ ಪಲಾವ್ ಮೇಲೆ ಕೊತ್ತಂಬರಿ ಉದುರಿಸಿ ಬಡಿಸಿ.

### ಬೇಕಾಗಿರುವ ಪದಾರ್ಥ

**1 ದೊಡ್ಡ ಆಲೂಗಡ್ಡೆಯ ಸಣ್ಣ ಚೂರುಗಳು, 1 ಕಪ್ ಅಕ್ಕಿ,1 ಚಮಚ ಜೀರಿಗೆ, 2 ಚಮಚ ತುಪ್ಪ, 2 ಲವಂಗ, ರುಚಿಗೆ ತಕ್ಕಷ್ಟು ಉಪ್ಪು, 2 ಏಲಕ್ಕಿ, 2 ದಾಲ್ಚಿನಿ ಎಲೆ, ಚಮಚ ಕೆಂಪು ಮೆಣಸಿನ ಪುಡಿ, 3 ಕಪ್ ನೀರು, ಅಲಂಕರಿಸಲು ಕೊತ್ತಂಬರಿ ಸೊಪ್ಪು**

## ದಾಂಪತ್ಯ ಜೀವನಕ್ಕೆ ಕಾಲಿಡಲು ನಟಿ ಸಜ್ಜಾದ ಸೋನಾಕ್ಷಿ



ಬಾಲಿವುಡ್‌ನ ಖ್ಯಾತ ನಟಿ ಸೋನಾಕ್ಷಿ ಸಿನ್ಹಾ ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗುತ್ತಿದ್ದಾರೆ. ಅವರು ನಟ ಜಹೀರ್ ಇಕ್ಬಾಲ್ ಜತೆ ಜೂನ್ 23ರಂದು ಮದುವೆಯಾಗಲಿದ್ದಾರೆ ಎಂದು ವರದಿಯಾಗಿದೆ.

ಸೋನಾಕ್ಷಿ ಮತ್ತು ಜಹೀರ್ ದಕ್ಷಿಣ ಮುಂಬೈನಲ್ಲಿ ಮದುವೆಯಾಗಲಿದ್ದಾರೆ ಎಂದು ವರದಿಯಾಗಿದೆ. ಆದರೆ, ಜೋಡಿ ಎಲ್ಲಿಯೂ ತಮ್ಮ ಮದುವೆ ಬಗ್ಗೆ ಅಧಿಕೃತ ಮಾಹಿತಿ ಹಂಚಿಕೊಂಡಿಲ್ಲ.

37 ವರ್ಷದ ಸೋನಾಕ್ಷಿ 2010ರಲ್ಲಿ ಸಲ್ಮಾನ್ ಖಾನ್ ಅಭಿನಯದ ದಬಾಂಗ್ ಸಿನಿಮಾದ ಮೂಲಕ ಬಾಲಿವುಡ್‌ಗೆ ಪದಾರ್ಪಣೆ ಮಾಡಿದರೆ, ಜಹೀರ್ ಅವರ ಮೊದಲ ಚಿತ್ರ 2019ರಲ್ಲಿ ತೆರೆ ಕಂಡ ನೋಟ್‌ಬುಕ್ ಆಗಿತ್ತು. ಡಬಲ್ ಎಕ್ಸ್‌ಎಲ್ ಸಿನಿಮಾದಲ್ಲಿ ಜಹೀರ್ ಇಕ್ಬಾಲ್ ಹಾಗೂ ಸೋನಾಕ್ಷಿ ಸಿನ್ಹಾ ಒಟ್ಟಿಗೆ ಕಾಣಿಸಿಕೊಂಡಿದ್ದರು. ಕಳೆದ ವಾರ ಸೋನಾಕ್ಷಿ ಅವರ ಜನ್ಮದಿನದಂದು ಜಹೀರ್ ಹಲವು ಫೋಟೋಗಳನ್ನು ಹಂಚಿಕೊಂಡಿದ್ದರು. ಮೊದಲ ಚಿತ್ರದಲ್ಲಿ ಸೋನಾಕ್ಷಿ ಅವರನ್ನು ಜಹೀರ್ ಬಿಗಿಯಾಗಿ ಅಪ್ಪಿಕೊಳ್ಳುವುದು ಇದೆ. ಜನ್ಮದಿನದ ಶುಭಾಶಯಗಳು ಸೋನಾ ಎಂದು ಶೀರ್ಷಿಕೆ ನೀಡಿದ್ದರು. ಈ ಹಿಂದೆ ಸಲ್ಮಾನ್ ಖಾನ್ ಅವರ ಸಹೋದರಿ ಅರ್ಪಿತಾ ಖಾನ್ ತಮ್ಮ ಇನ್ಸ್ಟಾಗ್ರಾಂ ಸ್ಟೋರಿಯಲ್ಲಿ ಸೋನಾಕ್ಷಿಯನ್ನು ಅತ್ತಿಗೆ ಎಂದು ಕರೆದಿದ್ದರು. ಕೆಲವೇ ಕ್ಷಣಗಳಲ್ಲಿ ಆ ಸ್ಟೋರಿಯನ್ನು ಡಿಲೀಟ್ ಮಾಡಿದ್ದರು. ಆಗ ಸೋನಾಕ್ಷಿ ಹಾಗೂ ಜಹೀರ್ ನಡುವೆ ಸಂಬಂಧ ಇದೆ ಎಂಬ ಸುದ್ದಿ ಹರಿದಾಡಿತ್ತು. ಸೋನಾಕ್ಷಿ ಹಾಗೂ ಜಹೀರ್ ಹಲವು ವರ್ಷಗಳಿಂದ ಸುತ್ತಾಟ ನಡೆಸುತ್ತಿದ್ದರೂ ಪ್ರೀತಿ ವಿಚಾರವನ್ನು ಒಪ್ಪಿಕೊಂಡಿಲ್ಲ. ಇತ್ತೀಚೆಗೆ ಇವರು ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಇವರು ಈಗ ವಿವಾಹ ಆಗುವ ನಿರ್ಧಾರ ತೆಗೆದುಕೊಂಡಿದ್ದಾರೆ





## ಹೊನೆಗೊನೆ ಸೊಪ್ಪು ಎಷ್ಟೊಂದು ಆರೋಗ್ಯಕಾರಿ ಗೊತ್ತಾ?



### ಹೆಲ್ತ್ ಟಿಪ್ಸ್

ಸೊಪ್ಪಿನಲ್ಲಿ ನಾನಾ ತರಹದ ಸೊಪ್ಪುಗಳಿವೆ. ದಂಟಿನ ಸೊಪ್ಪು, ಮೆಂಥ್ಯೆ ಸೊಪ್ಪು.. ಹೀಗೆ .ಆದರೆ ಹೊನೆಗೊನೆ ಸೊಪ್ಪು ಕೇಳಿದ್ದೀರಾ? ಸಾಮಾನ್ಯವಾಗಿ ಹಳ್ಳಿಗಳಲ್ಲಿ ಹೆಚ್ಚಾಗಿ ಬಳಸುವ ಹೊನೆಗೊನೆ ಸೊಪ್ಪು ಸೇವಿಸುವುದರಿಂದ ಹಲವು ಪ್ರಯೋಜನಗಳಿದ್ದು, ಹಲವು ದೈಹಿಕ ಸಮಸ್ಯೆಗಳಿಗೆ ಪರಿಹಾರ ಮಾಡುವ ಮನೆ ಮದ್ದು ಕೂಡ ಆಗಿದೆ.

ಹೊನೆಗೊನೆ ಸೊಪ್ಪು ಹೋದ ಕಣ್ಣು ಬರಿಸೀತು ಎಂಬ ಗಾದೆ ಮಾತೊಂದಿದೆ. ಅನೇಕ ಕಣ್ಣಿನ ರೋಗ ನಿವಾರಣೆಗೆ ಆಯುರ್ವೇದ ಔಷಧಿಯ ಪದ್ಧತಿಯಲ್ಲಿ ಈ ಸೊಪ್ಪನ್ನು ವ್ಯಾಪಕವಾಗಿ ಉಪಯೋಗಿಸುತ್ತಾರೆ. ಇದರ ಸಾರು, ಹುಳಿಯನ್ನು ನೆಗಡಿ–ಕೆಮ್ಮು ಇರುವವರು ಬಳಸುತ್ತಾರೆ.

ನಿಯಮಿತವಾಗಿ ಇದರ ಸೇವನೆಯಿಂದ ಕೈ, ಮೈ ಚರ್ಮ ಹೊಳಪು ಹೊಂದುತ್ತದೆ. ರಸದೊಂದಿಗೆ ಬೆಳ್ಳುಳ್ಳಿ ಸೇರಿಸಿ ತೆಗೆದುಕೊಂಡರೆ ಹಳೆಯ ಕೆಮ್ಮು, ಜ್ವರ, ನಿಶ್ಯಕ್ತಿ ದೂರಾಗುತ್ತದೆ. ಇದರಲ್ಲಿರುವ ನಾರಿನಾಂಶದಿಂದ ಮಲಬದ್ಧತೆಯನ್ನು ನಿವಾರಿಸುತ್ತದೆ. ಹೊನೆಗೊನೆ ಸೊಪ್ಪಿನಲ್ಲಿ ಅನೇಕ ಅನ್ನಾಂಗ, ಖನಿಜಾಂಶಗಳನ್ನು ಹೊಂದಿದೆ.

ಹೊನೆಗೊನೆ ಸೊಪ್ಪಿನ ರಸ ಮತ್ತು ಮೂಲಂಗಿ ಸೊಪ್ಪಿನ ರಸಗಳನ್ನು ಸೇರಿಸಿ ಒಂದು ತಿಂಗಳ ಕಾಲ ಸೇವಿಸುವುದರಿಂದ ಮೂಲವ್ಯಾಧಿಯ ನೋವು ಶಮನಗೊಳ್ಳುತ್ತದೆ. ಈ ಸೊಪ್ಪು ಕಣ್ಣಿನ ರೋಗಗಳಿಗೆ ಮದ್ದು. ಕಣ್ಣಿನ ಪೊರೆ, ಕಣ್ಣಿನಲ್ಲಿ ಬೆಳೆಯುವ ದುರ್ಮಾಂಸ, ಕಣ್ಣು ಸೋರುವ ಕಣ್ಣಿನ ಸೆಳೆತ ಮುಂತಾದ ತೊಂದರೆಗಳು ನಿವಾರಣೆಯಾಗುತ್ತದೆ.

ಹೊನೆಗೊನೆ ಸಸ್ಯದ ಎಲೆಯ ಪಲ್ಯ ಸೇವಿಸಿದರೆ, ಮೂಲವ್ಯಾಧಿಯ ಬಾಧೆ ನಿವಾರಣೆ ಆಗುತ್ತದೆ. ಸಾರನ್ನು ಕುಡಿಯುವುದರಿಂದ ಆಸನದ ಉರಿ ಶಮನಗೊಳ್ಳುತ್ತದೆ.

ಇದರ ಸೇವನೆಯಿಂದ ಬಾಣಂತಿಯರಲ್ಲಿ ಎದೆಯ ಹಾಲು ವೃದ್ಧಿ ಆಗುತ್ತದೆ. ಹೊನೆಗೊನೆ ಸಸ್ಯದ ಎಲೆಗಳಿಂದ ಕಾಡಿಗೆಯನ್ನು ತಯಾರಿಸಿ ಕಣ್ಣಿಗೆ ಹೆಚ್ಚುವುದರಿಂದ ಕಣ್ಣಿನ ರೆಪ್ಪೆಯ ನವೆ ಕಡಿಮೆ ಆಗುತ್ತದೆ ಮತ್ತು ಕಣ್ಣಿನ ಕಾಂತಿ ಹೆಚ್ಚುತ್ತದೆ.

## ಮೆಟ್ರೋ ಹಳಿಗೆ ಜಿಗಿದು ಆತ್ಮಹತ್ಯೆಗೆ ಯತ್ನ: ಪ್ರಾಣಾಪಾಯದಿಂದ ಪಾರು!

**ಬೆಂಗಳೂರು:** ಇಲ್ಲಿನ ಹೊಸಹಳ್ಳಿ ಮೆಟ್ರೋ ರೈಲು ನಿಲ್ದಾಣದಲ್ಲಿ (ಪ್ರಯಾಣಿಕನೊಬ್ಬ ಹಳಿಗೆ ಬಿದ್ದು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ. ಸುಮಾರು ರಾತ್ರಿ 8.56 ಗಂಟೆ ಸಮಯದಲ್ಲಿ ಘಟನೆ ನಡೆದಿದೆ. ಆತ್ಮಹತ್ಯೆಗೆ ಯತ್ನಿಸಿದ ಪ್ರಯಾಣಿಕನ ತಲೆಗೆ ಗಂಭೀರ ಪೆಟ್ಟಾಗಿದ್ದು, ಕೂಡಲೇ ಮುಂದಿನ ಚಿಕಿತ್ಸೆಗೆ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಸದ್ಯ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಅಪಘಾತ ಸಂಭವಿಸಿದ ಕೂಡಲೇ ರಾತ್ರಿ 8:56 ಗಂಟೆಗೆ ರೈಲುಗಳು ಶಾರ್ಟ್ ಲೂಪ್ ಸರ್ವಿಸ್ ಚಲ್ಲಘಟ್ಟದಿಂದ ಮೈಸೂರು ರಸ್ತೆ ವರೆಗೆ ಹಾಗೂ ನಾಡಪ್ರಭು ಕೆಂಪೇಗೌಡ ಸ್ಟೇಟ್‌ನಿಂದ ವೈಟ್ಫೀಲ್ಡ್ ನಿಲ್ದಾಣಗಳ ನಡುವೆ ವಾಣಿಜ್ಯ ಸೇವೆಯನ್ನು ನಡೆಸಲಾಯಿತು. ರಾತ್ರಿ 9.30 ಗಂಟೆಯಿಂದ ಸಂಪೂರ್ಣ ನೇರಳೆ ಮಾರ್ಗದಲ್ಲಿ ಎಂದಿನಂತೆ ರೈಲು ಸೇವೆ ಪುನರ್ ಆರಂಭಿಸಲಾಗಿದೆ ಎಂದು ಮೆಟ್ರೋ ಸಿಬ್ಬಂದಿ ತಿಳಿಸಿದ್ದಾರೆ. ಸದ್ಯ ಮೆಟ್ರೋ ಹಳಿ ಮೇಲೆ ಬಿದ್ದ ವ್ಯಕ್ತಿಯನ್ನು ಬೆಂಗಳೂರು ಬಸವೇಶ್ವರ ನಗರದ ನಿವಾಸಿ ಎಂ.ಸಾಗರ್ ಎಂದು ಗುರುತಿಸಲಾಗಿದೆ. ಸ್ಥಳಕ್ಕೆ ಗೋವಿಂದರಾಜನಗರ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಈ ನಡುವೆ ಸಾಗರ್ ಎಂಬಾತ ಆತ್ಮಹತ್ಯೆಗೆ ಯತ್ನಿಸಿಲ್ಲ, ಸ್ಲಿಪ್ ಆಗಿ ಮೆಟ್ರೋ ಹಳಿಗೆ ಬಿದ್ದಿದ್ದಾನೆ ಎಂಬುದಾಗಿ ಸಿಬ್ಬಂದಿ ಮಾಹಿತಿ ನೀಡಿದ್ದಾರೆ.



## ಸೇಂಟ್-ಗೊಬೈನ್-ಜಿಪ್ರೋಕ್ ಇಂಡಿಯಾದಿಂದ ವಿಶ್ವ ಪರಿಸರ ದಿನ

ಸೇಂಟ್–ಗೊಬೈನ್ ಜಿಪ್ರೋಕ್ ಇಂಡಿಯಾ ಕರ್ನಾಟಕದ ಬೆಂಗಳೂರಿನ ಲುಲು ಮಾಲ್ ನಲ್ಲಿ ವಿನೂತನ ರೀತಿಯಲ್ಲಿ ಪರಿಸರ ದಿನಾಚರಣೆ ಆಚರಿಸಿತು. ಈ ಕಾರ್ಯಕ್ರಮದ ಉದ್ದೇಶ ಸೇಂಟ್–ಗೊಬೈನ್ ಜಿಪ್ರೋಕ್, ಲುಲು ಮಾಲ್ ಜೊತೆಗಿನ ಸಹಯೋಗದಲ್ಲಿ ಸುಸ್ಥಿರ ಕಟ್ಟಡ ನಿರ್ಮಾಣ ರೂಢಿಗಳನ್ನು ಜಾರಿಗೆ ತಂದಿರುವುದರ ಕುರಿತು ಗ್ರಾಹಕರಿಗೆ ಅರಿವನ್ನು ಹೆಚ್ಚಿಸುವ ಗುರಿ ಹೊಂದಿತ್ತು. ಜಿಪ್ರೋಕ್ ಡ್ರೈವಾಲ್ಸ್ ವಿನೂತನ ಆವಿಷ್ಕಾರವಾಗಿದ್ದು ಅದರ ಬಳಕೆ ಮೂಲಕ ಲುಲು ಮಾಲ್ ನಲ್ಲಿ ನೀರನ್ನು ಹೇಗೆ ಸಂರಕ್ಷಿಸಲಾಯಿತು ಎನ್ನುವುದನ್ನು ಸಭಿಕರಿಗೆ ವಿವರಿಸಿದ ಹಲವು ಚಟುವಟಿಕೆಗಳನ್ನು ಆಯೋಜಿಸಿತ್ತು.

ಲುಲು ಮಾಲ್ ನಲ್ಲಿ ಸೇಂಟ್–ಗೊಬೈನ್ ಜಿಪ್ರೋಕ್ ಡ್ರೈವಾಲ್ ಹೇಗೆ ನೀರು ಉಳಿಸುವಲ್ಲಿ ನೆರವಾಯಿತು ಎನ್ನುವುದನ್ನು ಪ್ರದರ್ಶಿಸಿತು. ಸುಧಾರಿತ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಮೂಲಕ ಲುಲು ಮಾಲ್ ಪರಿಸರ ಸಂರಕ್ಷಣೆ ಮತ್ತು ಸಂಪನ್ಮೂಲದ ದಕ್ಷತೆಗೆ ತನ್ನ ಬದ್ಧತೆಯನ್ನು ತೋರಿದೆ. ಅಲ್ಲಿ ಪ್ರದರ್ಶಿಸಿದ ಮಾಹಿತಿ ಫಲಕ ಮತ್ತು ಮಾಹಿತಿಯಿಂದ ಜಿಪ್ರೋಕ್ ಡ್ರೈವಾಲ್ ಸಾಂಪ್ರದಾಯಿಕ ವಿಧಾನಗಳಿಗೆ ಹೋಲಿಸಿದರೆ ಹೇಗೆ ಅಪಾರ ನೀರು ಉಳಿಸುತ್ತದೆ ಎಂದು ಸಭಿಕರಿಗೆ ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಲಾಯಿತು. ಜಿಪ್ರೋಕ್ ಸುಧಾರಿತ ಡ್ರೈವಾಲ್ ತಂತ್ರಜ್ಞಾನವು ಲುಲು ಮಾಲ್ ನಿರ್ಮಾಣದಲ್ಲಿ 1.6 ಲಕ್ಷ ಲೀಟರ್ ನೀರನ್ನು ಉಳಿಸಿದೆ.

ಈ ಉಪಕ್ರಮದ ಭಾಗವಾಗಿ ಜಿಪ್ರೋಕ್ ಗ್ರಾಹಕರಿಗೆ ನೀರಿನ ಬಾಟಲಿಗಳನ್ನು ವಿತರಿಸಿದ್ದು ಅವರು ನೀರು ಸಂರಕ್ಷಣೆಯ ಅರಿವು ಮೂಡಿಸುವ ಸುಸ್ಥಿರ ನೀರಿನ ಬಾಟಲಿಗಳನ್ನು ಸಂತೋಷದಿಂದ ಸ್ವೀಕರಿಸಿದರು. ಉತ್ಸಾಹದಿಂದ ಭಾಗವಹಿಸುವಿಕೆ ಮತ್ತು ಜನರ ಸಕಾರಾತ್ಮಕ ಪ್ರತಿಕ್ರಿಯೆಯಿಂದ ಕಾರ್ಯಕ್ರಮ ಬಹಳ ಯಶಸ್ವಿಯಾಗಿದ್ದು ಅದು ಭಾಗವಹಿಸಿದ್ದವರನ್ನು ಪರಿಸರ ಸ್ನೇಹಿ ರೂಢಿಗಳಿಗೆ ಸ್ಫೂರ್ತಿ ತುಂಬಿತು. ಹೆಚ್ಚುವರಿಯಾಗಿ ಪರಿಸರದ ಅರಿವು ಮೂಡಿಸಲು ಮತ್ತು ಸ್ವಚ್ಛ ಭವಿಷ್ಯಕ್ಕೆ ಕೊಡುಗೆ ನೀಡಲು ಸ್ಪರ್ಧಾತ್ಮಕ ಚಟುವಟಿಕೆಗಳನ್ನು ನಡೆಸಲಾಯಿತು. ಸೇಂಟ್–ಗೊಬೈನ್ ಜಿಪ್ರೋಕ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಶ್ರೀ ಸುದೀಪ್ ಕೊಲ್ಟೆ ಸುಸ್ಥಿರತೆಯ ವಿಸ್ತಾರ ಪ್ರಾಮುಖ್ಯತೆ ಕುರಿತು, ''ಸುಸ್ಥಿರತೆಗೆ ನಮ್ಮ ಬದ್ಧತೆಯು ಬರೀ ಒಂದು ಕಾರ್ಯಕ್ರಮದಿಂದ ಸಾಧ್ಯವಿಲ್ಲ, ಬದಲಿಗೆ ಹೆಚ್ಚು ಸುಸ್ಥಿರತೆಯ ದಾರಿಯಲ್ಲಿ ನಾವು ಮುನ್ನಡೆಯಬೇಕಾಗಿದೆ. ಜಿಪ್ರೋಕ್ ಡ್ರೈವಾಲ್ ರೀತಿಯ ಆವಿಷ್ಕಾರಕ ಪರಿಹಾರಗಳನ್ನು ಹೊಂದುವ ಮೂಲಕ ನಾವು ನೀರಿನ ಬಳಕೆ ಕಡಿಮೆ ಮಾಡುವುದೇ ಅಲ್ಲದೆ ಹಸಿರು, ಹೆಚ್ಚು ಸುಸ್ಥಿರ ನಾಳೆಗೆ ದಾರಿ ಮಾಡಲು ಶ್ರಮಿಸುತ್ತಿದ್ದೇವೆ'' ಎಂದರು. ಈ ಕಾರ್ಯಕ್ರಮವು ಜಿಪ್ರೋಕ್ ಡ್ರೈವಾಲ್ ನೀರನ್ನು ಉಳಿಸಲು ಮತ್ತು ಪರಿಸರ ಸುಸ್ಥಿರತೆಗೆ ಕೊಡುಗೆ ನೀಡುತ್ತದೆ ಎನ್ನುವುದರ ಕುರಿತು ಮೌಲ್ಯಯುತ ಒಳನೋಟಗಳನ್ನು ನೀಡಿತು. ಕಟ್ಟಡ ನಿರ್ಮಾಣದ ರೂಢಿಗಳು ಮತ್ತು ಪರಿಸರ ಸಂರಕ್ಷಣೆಯ ನಡುವೆ ಅಂತರ ತುಂಬುವ ಮೂಲಕ ಜಿಪ್ರೋಕ್ ಸುಸ್ಥಿರ ನಿರ್ಮಾಣ ಪರಿಹಾರಗಳಲ್ಲಿ ಹೊಸ ಮಾನದಂಡ ನಿರ್ಮಿಸಿದೆ.




## ಮಳೆಗಾಲದಲ್ಲೂ ಮುಖ ಹೊಳೆಯುವಂತೆ ಮಾಡುವುದು ಹೇಗೆ?

### ಬ್ಯೂಟಿ ಟಿಪ್ಸ್



ಮಳೆಗಾಲದಲ್ಲಿ ತೇವಾಂಶದ ಮಟ್ಟ ಹೆಚ್ಚಾದಂತೆ, ನಮ್ಮ ಚರ್ಮ ಕಿರಿಕಿರಿ ಮತ್ತು ಮೊಡವೆಗಳಿಗೆ ಕಾರಣವಾಗುವ ಸೋಂಕುಗಳನ್ನು ಸುಲಭವಾಗಿ ಹಿಡಿದಿಡುತ್ತದೆ. ಮೊಡವೆಗಳ ಜೊತೆಗೆ, ಮಳೆಗಾಲದಲ್ಲಿ ಚರ್ಮವು ಎಣ್ಣೆಯುಕ್ತವಾಗಿ ಜಿಡ್ಡು ಜಿಡ್ಡಾಗಿರುತ್ತದೆ. ಈ ಸಮಸ್ಯೆಯನ್ನು ದೂರವಾಗಿಸಿ ಆಕರ್ಷಕ ತ್ವಚೆ ನಿಮ್ಮದಾಗಿಸಬೇಕಿದ್ದರೆ ಇಲ್ಲಿ ಕೇಳಿ. ಮುಖದಲ್ಲಿ ಜಿಡ್ಡಿನೊಂದಿಗೆ ಕಣ್ಣಿನಡಿಯೂ ಕಪ್ಪಾಗಿದ್ದರೆ ಅದಕ್ಕೆ ಆಲೂಗಡ್ಡೆ ತುರಿದು ಚಿಟಿಕೆ ಉಪ್ಪು, ನಿಂಬೆ ಹನಿ ಮತ್ತು ಗಂಧದ ಎಣ್ಣೆಯನ್ನು ಬೆರೆಸಿ ಮುಖದ ಮೇಲೆ ಹಚ್ಚಿಕೊಳ್ಳಿ. ಆಲೂಗಡ್ಡೆಯ ವೃತ್ತಾಕಾರದ ತುಣುಕುಗಳನ್ನು ಕಣ್ಣಿನ ಮೇಲೆಯೂ ಇಟ್ಟುಕೊಳ್ಳಿ. ಹದಿನೈದು ನಿಮಿಷದ ಬಳಿಕ ತಣ್ಣಗಿನ ನೀರಿನಲ್ಲಿ ಮುಖ ತೊಳೆಯಿರಿ. ಅಕ್ಕಿ ಹಿಟ್ಟನ್ನು ಸ್ಕ್ರಬ್ ಮಾಡಲು ಬಳಸಬಹುದು. ಚರ್ಮದ ಎಲ್ಲಾ ಕೊಳಕು, ಎಣ್ಣೆ ಮತ್ತು ಕಲ್ಮಶಗಳನ್ನು ತೆಗೆದುಹಾಕಲು ಇದು ಸಹಾಯ ಮಾಡುತ್ತದೆ. 1 ಟೀ ಚಮಚ ಅಕ್ಕಿ ಹಿಟ್ಟು ಮತ್ತು ಅಲೋವೆರಾ ಜೆಲ್ ತೆಗೆದುಕೊಂಡು, ಒಂದು ಚಿಟಿಕೆ ಉಪ್ಪು ಮತ್ತು 2 ಹನಿ ಲ್ಯಾವೆಂಡರ್ ತೈಲವನ್ನು ಸೇರಿಸಿ. ಇದನ್ನು ನಿಮ್ಮ ಮುಖದ ಮೇಲೆ ಹಚ್ಚಿ, 5–10 ನಿಮಿಷಗಳ ಕಾಲ ಇರಿಸಿ ಮತ್ತು ನಂತರ ಮುಖದ ಮೇಲೆ ನಿಧಾನಕ್ಕೆ ಮಸಾಜ್ ಮಾಡಿ ತೊಳೆಯಿರಿ. ಸ್ಕ್ರಬ್ ಬಳಸಿದ ನಂತರ ಯಾವಾಗಲೂ ನಿಮ್ಮ ಮುಖದ ಮೇಲೆ ತಿಳಿ ಮಾಯಿಶ್ಚರೈಸರ್ ಅನ್ನು ಬಳಸಲು ಮರೆಯದಿರಿ. ಚರ್ಮಕ್ಕೆ ಹೊಳಪು ನೀಡಲು ಸೌತೆಕಾಯಿಯನ್ನು ಬಳಸಬಹುದು. ತುರಿದ ಸೌತೆಕಾಯಿ ಮತ್ತು ಕೆಲವು ಹನಿ ನಿಂಬೆ ರಸವನ್ನು ಬಳಸಿ. ಇದನ್ನು ನಿಮ್ಮ ಮುಖದ ಮೇಲೆ 10–15 ನಿಮಿಷಗಳ ಕಾಲ ಹಚ್ಚಿ ತೊಳೆಯಿರಿ. ನಿಂಬೆ ನಿಮ್ಮ ಚರ್ಮವನ್ನು ಬೆಳ್ಳಗಾಗಿಸಲು ಮತ್ತು ಬಿಗಿಗೊಳಿಸಲು ಸಹಾಯ ಮಾಡುತ್ತದೆ ಮತ್ತು ಸೌತೆಕಾಯಿ ನಿಮ್ಮ ಚರ್ಮವನ್ನು ತಂಪಾಗಿಸುತ್ತದೆ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಅಲ್ಪ ಲಾಭ, ಶತ್ರು ಭಾದೆ, ಸ್ತ್ರೀಯರಿಂದ ತೊಂದರೆ.

**ವೃಷಭ:** ಮಾತಿನ ಚಕಮಕಿ, ನೆಮ್ಮದಿ ಇಲ್ಲದ ಜೀವನ, ಋಣಭಾದೆ, ವಿವಾದಗಳಿಗೆ ಆಸ್ಪದ ಕೊಡಬೇಡಿ.

**ಮಿಥುನ:** ದೇವತಾ ಕಾರ್ಯದ ಬಗ್ಗೆ ಆಸಕ್ತಿ, ಮಾತಿನಿಂದ ಅನರ್ಥ, ಪಿತ್ರಾರ್ಜಿತ ಆಸ್ತಿಗಳಿಕೆ, ಸುಖ ಭೋಜನ.

**ಕಟಕ:** ಷೇರು ವ್ಯವಹಾರಗಳಲ್ಲಿ ಅಲ್ಪ ಲಾಭ, ಅಪರಿಚಿತರಿಂದ ಕಲಹ, ಮಕ್ಕಳ ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಸಿಂಹ:** ಹಣದ ಅಡಚಣೆ, ಸಜ್ಜನ ವಿರೋಧ, ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಸ್ತ್ರೀಯರಿಗೆ ಶುಭ ಫಲ.

**ಕನ್ಯಾ:** ಹಿರಿಯರಿಂದ ಬೋಧನೆ, ಉದ್ಯೋಗದಲ್ಲಿ ಕಿರಿಕಿರಿ, ನಂಬಿಕೆ ದ್ರೋಹ, ರಾಜ ವಿರೋಧ, ದಾನ ಧರ್ಮದಲ್ಲಿ ಆಸಕ್ತಿ.

**ತುಲಾ:** ವ್ಯವಹಾರಗಳಲ್ಲಿ ಏರುಪೇರು, ಚಂಚಲ ಮನಸ್ಸು, ನಿಂದನೆ, ಅವಾಚ್ಯ ಶಬ್ದಗಳ ಬಳಕೆ.

**ವೃಶ್ಚಿಕ:** ಹಣಕಾಸಿನ ಮುಗ್ಗಟ್ಟು, ಹಿರಿಯರ ಭೇಟಿ, ವ್ಯರ್ಥ ಧನ ಹಾನಿ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಅನಾರೋಗ್ಯ.

**ಧನಸ್ಸು:** ಮಾತಾಪಿತರಲ್ಲಿ ಪ್ರೀತಿ, ಯತ್ನ ಕಾರ್ಯಗಳಲ್ಲಿ ಜಯ, ಇಷ್ಟ ವಸ್ತುಗಳನ್ನ ಖರೀದಿಸುವಿರಿ, ಭೂ ಲಾಭ.

**ಮಕರ:** ಸ್ತ್ರೀಯರಿಗೆ ಉತ್ತಮ ಅವಕಾಶಗಳು, ಅಧಿಕಾರ ಪ್ರಾಪ್ತಿ, ಮನಶಾಂತಿ, ಕುಟುಂಬದವರಿಂದ ಹಿತವಚನ.

**ಕುಂಭ:** ಪ್ರತಿಭೆಗೆ ತಕ್ಕ ಫಲ, ಮಾನಸಿಕ ನೆಮ್ಮದಿ, ಅಕಾಲ ಭೋಜನ, ಮಿತ್ರರ ಭೇಟಿ, ರಿಯಲ್ ಎಸ್ಟೇಟ್ ನವರಿಗೆ ಲಾಭ.

**ಮೀನ:** ಹೊಸ ಯೋಜನೆಗಳಲ್ಲಿ ಲಾಭ, ನಿಮ್ಮ ಪ್ರಯತ್ನದಿಂದ ಕಾರ್ಯಸಿದ್ಧಿ, ತೀರ್ಥ ಯಾತ್ರ, ದರ್ಶನ.

## ಸೇ ಹಾಯ್ ಡೇ




ಸೇ ಹಾಯ್ ಡೇ ವಾರ್ಷಿಕ ರಜಾದಿನವನ್ನು ಜೂನ್ 11 ರಂದು ಆಚರಿಸಲಾಗುತ್ತದೆ. ಪ್ರತಿಯೊಬ್ಬರನ್ನು ಅಭಿನಂದಿಸುವ ಅಭ್ಯಾಸವನ್ನು ಮಾಡಿಕೊಂಡರು ಮತ್ತು ಅವರ ಲವಲವಿಕೆಯ ವ್ಯಕ್ತಿತ್ವವು ಅವರನ್ನು ಪ್ರೀತಿಸಿತು ಅವನ ನೆರೆಹೊರೆಗೆ. ಸೇ ಹಾಯ್ ಡೇ ಎನ್ನುವುದು ಸಾರ್ವಜನಿಕ ಜಾಗೃತಿ ಅಭಿಯಾನವಾಗಿದ್ದು, ಒಂದು ಸರಳ ಪದವು ಯಾರೊಬ್ಬರ ದಿನವನ್ನು ಸುಧಾರಿಸಬಹುದು, ಅವರ ಮುಖದಲ್ಲಿ ನಗು ತರಬಹುದು ಅಥವಾ ಅವರ ಮನಸ್ಥಿತಿಯನ್ನು ಬದಲಾಯಿಸಬಹುದು ಎಂಬುದನ್ನು ಜನರಿಗೆ ನೆನಪಿಸುವ ಗುರಿಯನ್ನು ಹೊಂದಿದೆ. ಸರಳವಾದ ಸ್ವಾಗತವು ಸಕಾರಾತ್ಮಕ ಸಂಪರ್ಕಗಳ ಸರಣಿ ಪ್ರತಿಕ್ರಿಯೆಯನ್ನು ಪ್ರಾರಂಭಿಸಬಹುದು ಮತ್ತು ಎಲ್ಲಾ ವ್ಯತ್ಯಾಸಗಳನ್ನು ಮಾಡಬಹುದು. ನಮಸ್ತೆ! ಶುಭಾಶಯದ ಆಶ್ಚರ್ಯಸೂಚಕವಾಗಿ ಬಳಸಲಾಗುವ ಪ್ರತಿಬಂಧವಾಗಿದೆ. 1862 ರಲ್ಲಿ ಗಮನ ಸೆಳೆಯಲು ತಿಳಿದಿರುವ ಆರಂಭಿಕ ಉಲ್ಲೇಖವು 20 ನೇ ಶತಮಾನದ ಆರಂಭದಲ್ಲಿ ಶುಭಾಶಯ ಪದವಾಗಿ ಜನಪ್ರಿಯವಾಯಿತು. ಜೋಸೆಫ್ ಆಂಥೋನಿ ಸಿನೊಟ್ಟಿ ಎಂಬ 15 ವರ್ಷದ ಯುವಕ ಸೇ ಹಾಯ್ ಡೇಗೆ ಸ್ಫೂರ್ತಿ. ಸಿನೊಟ್ಟಿ ತನ್ನ ಇಡೀ ಜೀವನವನ್ನು ತಾನು ಭೇಟಿಯಾದ ಎಲ್ಲರಿಗೂ ಹಾಯ್ ಎಂದು ಹೇಳುತ್ತಿದ್ದನು ಮತ್ತು ಪ್ರತಿಯೊಬ್ಬರೂ ದಯೆ ಮತ್ತು ಮಾನವೀಯತೆ ಮತ್ತು ಈ ಜಗತ್ತಿನಲ್ಲಿ ಪ್ರತಿಯೊಬ್ಬರೂ ಮುಖ್ಯವೆಂದು ಅರಿತುಕೊಳ್ಳಬೇಕೆಂದು ಯಾವಾಗಲೂ ನಿರೀಕ್ಷಿಸುತ್ತಿದ್ದರು. ದುಃಖಕರವೆಂದರೆ, ಅವರು 2018 ರಲ್ಲಿ ನಿಧನರಾದರು. ಜೂನ್ 11, 2021 ರಂದು, ಸೇ ಹಾಯ್ ಫೌಂಡೇಶನ್ ನಿಂದ ಮೊದಲ ವಾರ್ಷಿಕ ಸೇ ಹಾಯ್ ದಿನವನ್ನು ಆಚರಿಸಲಾಯಿತು. ಸರಳ ಪದವು ಯಾರೊಬ್ಬರ ದಿನವನ್ನು ಸುಧಾರಿಸಬಹುದು, ಅವರ ಮುಖದಲ್ಲಿ ನಗು ತರಬಹುದು ಅಥವಾ ಅವರ ಮನಸ್ಥಿತಿಯನ್ನು ಬದಲಾಯಿಸಬಹುದು ಎಂಬುದನ್ನು ವ್ಯಕ್ತಿಗಳಿಗೆ ನೆನಪಿಸಲು ಹಾಯ್ ಡೇ ಎಂದು ಹೇಳಿ. ನ್ಯಾಷನಲ್ ಡೇ ಆರ್ಕೈವ್ಸ್ ಈ ದಿನವನ್ನು ಅಧಿಕೃತವಾಗಿ ಸ್ವೀಕರಿಸಿದೆ, ರೆಕಾರ್ಡ್ ಮಾಡಿದೆ ಮತ್ತು ಗುರುತಿಸಿದೆ. ವಾಟರ್ಲೂ ಪ್ರದೇಶದ ಸಮುದಾಯ ಸುರಕ್ಷತೆ ಮತ್ತು ಅಪರಾಧ ತಡೆಗಟ್ಟುವಿಕೆ ಕೌನ್ಸಿಲ್ನ ಸೇ ಹಾಯ್ ಡೇ ಟುಡೇ ಕಾರ್ಯಕ್ರಮವು ಗೆಟ್ ಕನೆಕ್ಟೆಡ್ ಅಭಿಯಾನದ ಭಾಗವಾಗಿ 2004 ರಲ್ಲಿ ಪ್ರಾರಂಭವಾಯಿತು, ಇದು ಸಮುದಾಯದ ನಿಶ್ಚಿತಾರ್ಥವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಅನೇಕ ವ್ಯಕ್ತಿಗಳಿಗೆ, ಅಪರಿಚಿತರೊಂದಿಗೆ ಕಣ್ಣಿನ ಸಂಪರ್ಕವನ್ನು ಮಾಡುವುದು ಮತ್ತು ಅವರನ್ನು ಅಭಿನಂದಿಸುವುದು ಭಯಾನಕವಾಗಬಹುದು, ಆದರೆ ಒಮ್ಮೆ ನೀವು ಪ್ರಾರಂಭಿಸಿದರೆ, ಅದು ಎರಡನೆಯ ಸ್ವಭಾವವಾಗುತ್ತದೆ ಮತ್ತು ಹಲೋ ಹೇಳುವುದು ಸಹಜ ಪ್ರತಿಕ್ರಿಯೆಯಾಗುತ್ತದೆ. ಬಲವಾದ, ಪ್ರೀತಿಯ ಸಮುದಾಯವನ್ನು ನಿರ್ಮಿಸುವುದು ನಮ್ಮ ಅತ್ಯಂತ ಯಶಸ್ವಿ ಅಪರಾಧ–ತಡೆಗಟ್ಟುವ ತಂತ್ರಗಳಲ್ಲಿ ಒಂದಾಗಿದೆ. ಈ ಉಪಕ್ರಮವು ವ್ಯಕ್ತಿಗಳನ್ನು ತಮ್ಮ ನೆರೆಹೊರೆಯವರಿಗೆ ಹಲೋ ಹೇಳಲು ಪ್ರೋತ್ಸಾಹಿಸುತ್ತದೆ ಮತ್ತು ನಮ್ಮ ಸಮುದಾಯದಲ್ಲಿ ಕಾಳಜಿ, ಸೇರಿರುವ ಮತ್ತು ಕರ್ತವ್ಯದ ಪ್ರಜ್ಞೆಯನ್ನು ಬೆಳೆಸುತ್ತದೆ.

ಸಂಜೆ ಮುಗಿಲು
ಮಂಗಳವಾರ
11.6.2024



# ಪರಸ್ಪರ ಅಪ್ಪಿಕೊಂಡ ಸೋನಿಯಾ ಗಾಂಧಿ, ಬಾಂಗ್ಲಾ ಪ್ರಧಾನಿ ಶೇಖ್ ಹಸೀನಾ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರ 3ನೇ ಅವಧಿಯ ಪ್ರಮಾಣವಚನ ಕಾರ್ಯಕ್ರಮಕ್ಕೆ ಆಗಮಿಸಿದ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಇಂದು ಕಾಂಗ್ರೆಸ್ ನಾಯಕರನ್ನು ಭೇಟಿಯಾಗಿದ್ದಾರೆ.

ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ, ಅವರನ್ನು ಶೇಖ್ ಹಸೀನಾ ಸೋಮವಾರ ದೆಹಲಿಯಲ್ಲಿ ಭೇಟಿಯಾಗಿದ್ದಾರೆ. ಬಾಂಗ್ಲಾ ಪ್ರಧಾನಿ ಸೋನಿಯಾ ಗಾಂಧಿ ಅವರನ್ನು ಆತ್ಮೀಯತೆಯಿಂದ ಬಿಗಿದಪ್ಪಿಕೊಂಡ ವಿಡಿಯೋವನ್ನು ಕಾಂಗ್ರೆಸ್ ಅಧಿಕೃತ ಟ್ವಿಟ್ಟರ್ ಖಾತೆಯಲ್ಲಿ ಹಂಚಿಕೊಂಡಿದೆ. ಬಾಂಗ್ಲಾ ಪ್ರಧಾನಿ ಭೇಟಿ ಬಗ್ಗೆ ಮಾಹಿತಿ ನೀಡಿದ ಪಕ್ಷ, ನಂಬಿಕೆ, ಸಹಕಾರ ಮತ್ತು ಪರಸ್ಪರ ಬೆಳವಣಿಗೆಗೆ ಬದ್ಧತೆಯ ಆಧಾರದ ಮೇಲೆ ಭಾರತ-ಬಾಂಗ್ಲಾದೇಶ ಬಾಂಧವ್ಯವನ್ನು ಬಲಪಡಿಸಲು ನಾಯಕರು ವ್ಯಾಪಕ ಶ್ರೇಣಿಯ ವಿಷಯಗಳನ್ನು ಚರ್ಚಿಸಿದ್ದಾರೆ ಎಂದು ತಿಳಿಸಿದೆ. ಈ ವರ್ಷದ ಜನವರಿಯಲ್ಲಿ ಐದನೇ ಬಾರಿಗೆ ಪ್ರಧಾನಿಯಾಗಿ ಗೆದ್ದ 76 ವರ್ಷದ ಶೇಖ್ ಹಸೀನಾ ಭಾನುವಾರದ ಪ್ರಧಾನಿ ನರೇಂದ್ರ ಮೋದಿಯವರ ಪ್ರಮಾಣವಚನ ಸಮಾರಂಭಕ್ಕೆ ಭಾರತದಿಂದ ಆಹ್ವಾನಿಸಲ್ಪಟ್ಟ ದಕ್ಷಿಣ ಏಷ್ಯಾದ ನಾಯಕರಲ್ಲಿ ಒಬ್ಬರಾಗಿದ್ದಾರೆ.

# ಕಸದ ಬಲೂನ್ ಕಳುಹಿಸಿದ ಉತ್ತರ ಕೊರಿಯಾ: ಪ್ರತೀಕಾರಕ್ಕೆ ಮುಂದಾದ ದಕ್ಷಿಣ ಕೊರಿಯಾ



**ದಕ್ಷಿಣ ಕೊರಿಯಾ:** ಸಿಯೋಲ್ ಗಡಿ ಪ್ರದೇಶಗಳಲ್ಲಿ ಕಸ ಮತ್ತು ಗೊಬ್ಬರ ತುಂಬಿದ ಒಂದು ಸಾವಿರ ಬಲೂನ್‌ಗಳನ್ನು ಹಾರಿಬಿಟ್ಟ ಉತ್ತರ ಕೊರಿಯಾದ ವಿರುದ್ಧ ದಕ್ಷಿಣ ಕೊರಿಯಾ ಪ್ರತೀಕಾರಕ್ಕೆ ಮುಂದಾಗಿದೆ. ತಾನು ಧ್ವನಿವರ್ಧಕಗಳಲ್ಲಿ ಉತ್ತರ ಕೊರಿಯಾ ವಿರೋಧಿ ಪ್ರಚಾರ ಮಾಡುವುದಾಗಿ ಘೋಷಿಸಿದೆ. ಇದರಿಂದ ಉತ್ತರ ಕೊರಿಯಾ ಕೆರಳುವ ಸಾಧ್ಯತೆಯಿದ್ದು, ಅದು ಪ್ರತೀಕಾರದ ಭಾಗವಾಗಿ ಮಿಲಿಟರಿ ಕಾರ್ಯಾಚರಣೆ ಆರಂಭಿಸುವ ಸಂಭವ ಇದೆ.

ಎರಡೂ ಬದ್ಧವೈರಿ ದೇಶಗಳ ನಡುವೆ ಇದು ಮನಸ್ತಾಪ ಹೆಚ್ಚಿಸಲಿದ್ದು, ಅಣ್ವಸ್ತ್ರ ಹೊಂದಿರುವ ಉತ್ತರ ಕೊರಿಯಾ ಬಿಕ್ಕಟ್ಟನ್ನು ತೀವ್ರಗೊಳಿಸಬಹುದು ಎನ್ನಲಾಗುತ್ತಿದೆ.

ದಕ್ಷಿಣ ಕೊರಿಯಾ ರಾಷ್ಟ್ರೀಯ ಭದ್ರತಾ ನಿರ್ದೇಶಕ ಚಾಂಗ್-ಹೊ-ಜಿನ್ ನೇತೃತ್ವದಲ್ಲಿ ತುರ್ತು ಸಭೆ ನಡೆಸಿದ ನಂತರ ಅಧಿಕಾರಿಗಳು ಧ್ವನಿವರ್ಧಕಗಳ ಮೂಲಕ ಪ್ರಚಾರ ಕಾರ್ಯ ಆರಂಭಿಸಲು ನಿರ್ಧರಿಸಲಾಯಿತು ಎಂದು ಸಿಯೋಲ್‌ನ ಅಧ್ಯಕ್ಷೀಯ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಉತ್ತರ ಕೊರಿಯಾ ನೂರಾರು ಬಲೂನ್‌ಗಳನ್ನು ದಕ್ಷಿಣ ಕೊರಿಯಾದೊಳಗೆ ಹಾರಿಸುವುದನ್ನು ಮುಂದುವರೆಸಿದ್ದು, ಮೇ ತಿಂಗಳಿನಿಂದ ಮೂರನೇ ಬಾರಿಗೆ ಹೀಗೆ ಮಾಡಲಾಗುತ್ತಿದೆ ಎಂದು ದಕ್ಷಿಣ ಕೊರಿಯಾದ ಸೇನೆ ಹೇಳಿದೆ.

## ಪ್ರಧಾನಿ ಮೋದಿ ಅಭಿನಂದಿಸಿದ ಪಾಕ್ ಪ್ರಧಾನಿ ಷರೀಫ್

**ಇಸ್ಲಾಮಾಬಾದ್:** ಭಾರತದ ಪ್ರಧಾನಿಯಾಗಿ ಸತತ 3ನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದ ನರೇಂದ್ರ ಮೋದಿಯನ್ನು ಪಾಕಿಸ್ತಾನದ ಪ್ರಧಾನಿ ಶಹಬಾಝ್ ಷರೀಫ್ ಸೋಮವಾರ ಅಭಿನಂದಿಸಿದ್ದಾರೆ. ಪಾಕಿಸ್ತಾನದ ಮಾಜಿ ಪ್ರಧಾನಿ, ಪಾಕಿಸ್ತಾನ್ ಮುಸ್ಲಿಂ ಲೀಗ್-ನವಾಝ್ (ಪಿಎಂಎಲ್-ಎನ್) ಮುಖ್ಯಸ್ಥ ನವಾಝ್ ಷರೀಫ್ ಅವರೂ ಮೋದಿಯನ್ನು ಅಭಿನಂದಿಸಿದ್ದಾರೆ. 'ನಾವು ದ್ವೇಷವನ್ನು ಭರವಸೆಯಿಂದ ಬದಲಾಯಿಸೋಣ. ದಕ್ಷಿಣ ಏಷ್ಯಾದ ಎರಡು ಶತಕೋಟಿ ಜನರ ಭವಿಷ್ಯವನ್ನು ರೂಪಿಸುವ ಅವಕಾಶವನ್ನು ಬಳಸಿಕೊಳ್ಳೋಣ' ಎಂದವರು 'ಎಕ್ಸ್' ಮಾಡಿದ್ದಾರೆ.



## ರಷ್ಯಾದ ಅತ್ಯಾಧುನಿಕ ಯುದ್ಧವಿಮಾನ ನಾಶಗೊಳಿಸಿದ ಉಕ್ರೇನ್

**ಕೀವ್:** ತನ್ನ ಪಡೆಗಳು ಮುಂಚೂಣಿಯಿಂದ ಸುಮಾರು 600 ಕಿ.ಮೀ. ದೂರದ ವಾಯುನೆಲೆಯಲ್ಲಿದ್ದ ರಶ್ಯದ ಅತ್ಯಾಧುನಿಕ ಎಸ್ಯು-57 ಯುದ್ಧವಿಮಾನವನ್ನು ತನ್ನ ಪಡೆಗಳು ನಾಶಗೊಳಿಸಿವೆ ಎಂದು ಉಕ್ರೇನ್ ರವಿವಾರ ಹೇಳಿದೆ. ರಶ್ಯದೊಳಗೆ ಸೀಮಿತ ದಾಳಿ ನಡೆಸಲು ತಮ್ಮ ಶಸ್ತ್ರಾಸ್ತ್ರಗಳನ್ನು ಬಳಸುವುದಕ್ಕೆ ಪಾಶ್ಚಿಮಾತ್ಯ ಮಿತ್ರರಾಷ್ಟ್ರಗಳು ಉಕ್ರೇನ್ಗೆ ಅನುಮತಿಸಿದ ಬಳಿಕ ಉಕ್ರೇನ್ ನಡೆಸಿದ ಮಹತ್ವದ ಕಾರ್ಯಾಚರಣೆ ಇದಾಗಿದೆ. ದಾಳಿಯ ಬಳಿಕದ ಉಪಗ್ರಹವೀಡಿಯೊಗಳನ್ನು ಉಕ್ರೇನ್ನ ಮಿಲಿಟರಿ ಗುಪ್ತಚರ ಸೇವೆ ಹಂಚಿಕೊಂಡಿದೆ. ಮುಂಚೂಣಿಯಿಂದ ಸುಮಾರು 600 ಕಿ.ಮೀ. ಒಳಗಿರುವ ದಕ್ಷಿಣ ರಶ್ಯದ ಅಖ್ತುಬಿನ್ಸ್ಕ್ ವಾಯುನೆಲೆಯ ಮೇಲೆ ಶನಿವಾರ ದಾಳಿ ನಡೆದಿರುವುದಾಗಿ ಉಕ್ರೇನ್ನ ಮಿಲಿಟರಿ ಗುಪ್ತಚರ ಪ್ರಾಧಿಕಾರ ಹೇಳಿದೆ. ರಶ್ಯದ ವಾಯುನೆಲೆಯ ಮೇಲೆ ಡ್ರೋನ್ ದಾಳಿ ನಡೆದಿರುವ ಸಾಧ್ಯತೆಯಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

## ಫ್ರಾನ್ಸ್ ಸಂಸತ್ ವಿಸರ್ಜಿಸಿದ ಮ್ಯಾಕ್ರೋನ್

**ಪ್ಯಾರೀಸ್:** ಯುರೋಪಿಯನ್ ಒಕ್ಕೂಟದ ಚುನಾವಣೆಯಲ್ಲಿ ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯಲ್ ಮ್ಯಾಕ್ರೋನ್ ಅವರ ಮೈತ್ರಿಕೂಟಕ್ಕೆ ಹೀನಾಯ ಸೋಲಾದ ಬೆನ್ನಲ್ಲೇ ಫ್ರಾನ್ಸ್ ಸಂಸತ್ ವಿಸರ್ಜಿಸಲಾಗಿದೆ. ರಾಷ್ಟ್ರೀಯ ಅಸೆಂಬ್ಲಿಗೆ ದಿಢೀರ್ ಚುನಾವಣೆ ಘೋಷಿಸಲಾಗಿದೆ. ರಾಷ್ಟ್ರೀಯ ಅಸೆಂಬ್ಲಿಗೆ



ಮೊದಲ ಸುತ್ತಿನ ಚುನಾವಣೆ ಜೂನ್ 30ರಂದು ಮತ್ತು 2ನೇ ಸುತ್ತಿನ ಚುನಾವಣೆ ಜುಲೈ 7ರಂದು ನಡೆಯಲಿದೆ ಎಂದು ರಾಷ್ಟ್ರವನ್ನು ಉದ್ದೇಶಿಸಿ ಮಾಡಿದ ಭಾಷಣದಲ್ಲಿ ಮ್ಯಾಕ್ರೋನ್ ಹೇಳಿದ್ದಾರೆ. ಯೂರೋಪ್ ಖಂಡವನ್ನು ಸಂರಕ್ಷಿಸಿಕೊಂಡು ಬಂದ ಪಕ್ಷಕ್ಕೆ ಈ ಫಲಿತಾಂಶ ಆಶಾದಾಯಕವಲ್ಲ ಎಂದು ಯೂರೋಪಿಯನ್ ಒಕ್ಕೂಟದ ಚುನಾವಣೆಯಲ್ಲಿ ಸೋಲಿನ ಬಳಿಕ ಅವರು ಪ್ರತಿಕ್ರಿಯಿಸಿದರು. ಈ ಚುನಾವಣೆಯಲ್ಲಿ ನ್ಯಾಷನಲ್ ರ್ಯಾಲಿ ಎಂಬ ಬಲಪಂಥೀಯ ಪಕ್ಷ ಶೇಕಡ 40ರಷ್ಟು ಮತಗಳನ್ನು ಗಳಿಸಿತ್ತು. ಬಲಪಂಥೀಯ ಪಕ್ಷ ಯೂರೋಪ್ ಖಂಡದ ಎಲ್ಲೆಡೆ ಪ್ರಗತಿ ಕಾಣುತ್ತಿದೆ. ಇದು ನಾನು ಸ್ವತಃ ರಾಜೀನಾಮೆ ನೀಡಲಾಗದ ಸ್ಥಿತಿ. ಆದ್ದರಿಂದ ನಾನು ಆಯ್ಕೆಯನ್ನು ನಿಮಗೆ ಬಿಡುತ್ತಿದ್ದೇನೆ. ಆದ್ದರಿಂದ ನಾನು ರಾತ್ರಿಯೇ ರಾಷ್ಟ್ರೀಯ ಅಸೆಂಬ್ಲಿ ವಿಸರ್ಜಿಸುತ್ತಿದ್ದೇನೆ. ಈ ನಿರ್ಧಾರ ಗಂಭೀರ ಮತ್ತು ಭಾರವಾದದ್ದು. ಆದರೆ ಇದು ವಿಶ್ವಾಸದ ಕ್ರಮ. ಭವಿಷ್ಯದ ಪೀಳಿಗೆಗಳಿಗಾಗಿ ಉತ್ತಮ ಆಯ್ಕೆಯನ್ನು ಮಾಡಿ ಎಂದು ಫ್ರಾನ್ಸ್‌ನ ಆತ್ಮೀಯ ಜನತೆಯನ್ನು ಕೋರುತ್ತಿದ್ದೇನೆ ಎಂದು ಹೇಳಿದ್ದಾರೆ.

# ಬಿಜೆಪಿ ಶಾಲು ಧರಿಸಿ ಅಯೋಧ್ಯೆ ಹೆಸರಿನ ಪ್ರತಿಕೃತಿಗೆ ಬೆಂಕಿ!



**ಅಯೋಧ್ಯೆ:** ಅಯೋಧ್ಯೆ ಹಿಂದೂ ಧರ್ಮಗಳ ಪವಿತ್ರ ಸ್ಥಳವೆಂದು ಕರೆಯಬಹುದು. ಯಾಕೆಂದರೆ ಇದು ಭಗವಾನ್ ಶ್ರೀರಾಮನ ಜನ್ಮಭೂಮಿ ಮಾತ್ರವಲ್ಲ ಇತ್ತೀಚೆಗಷ್ಟೇ ಇಲ್ಲಿ ರಾಮಮಂದಿರವನ್ನು ನಿರ್ಮಿಸಲಾಗಿತ್ತು. ಇಂತಹ ಪವಿತ್ರ ಸ್ಥಳದಲ್ಲಿ ವ್ಯಕ್ತಿಯೊಬ್ಬ ಅಯೋಧ್ಯೆ ಹೆಸರಿನ ಪ್ರತಿಕೃತಿಗೆ ಬೆಂಕಿ ಹಚ್ಚಿದ್ದಾನೆ. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಲೋಕಸಭೆಯ ಚುನಾವಣೆಯ ನಂತರ ಈ ಕಾರ್ಯ ಮಾಡಲಾಗಿದೆ ಎಂಬ ಶಂಕೆ ವ್ಯಕ್ತವಾಗಿದೆ. ಹಾಗಾಗಿ ಈ ಘಟನೆಯ ಕುರಿತು ತನಿಖೆ ನಡೆಸುವಂತೆ ಅಯೋಧ್ಯೆ ಪೊಲೀಸರಿಗೆ ಆದೇಶಿಸಲಾಗಿದೆ. ಸೈಬರ್ ಪೊಲೀಸ್ ಠಾಣೆಯ ಪೊಲೀಸ್ ಇನ್ ಪೆಕ್ಟರ್ ಗೆ ಇದರ ಸಂಪೂರ್ಣ ವಿಚಾರಣೆ ಮತ್ತು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಲಾಗಿದೆ.

ಅಯೋಧ್ಯೆಯಲ್ಲಿ ಇತ್ತೀಚೆಗಷ್ಟೇ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರಾಮಮಂದಿರವನ್ನು ನಿರ್ಮಿಸಿತ್ತು. ಹಾಗಿದ್ದರೂ ಈ ಬಾರಿಯ ಲೋಕ ಸಭೆಯ ಚುನಾವಣೆಯಲ್ಲಿ ಅಯೋಧ್ಯೆ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಲಲ್ಲೂ ಸಿಂಗ್ ಸೋಲನುಭವಿಸಿದ್ದರು. ಹೀಗಾಗಿ ಅಯೋಧ್ಯೆ ಜನರ ಮೇಲೆ ಅನೇಕ ಬಿಜೆಪಿ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸಿದ್ದರು.

# ಎನ್‌ಡಿಎ ಸರ್ಕಾರದ ಮೊದಲ ದಿನವೇ ಪಿಎಂ ಕಿಸಾನ್ ನಿಧಿಗೆ ಪ್ರಧಾನಿ ಸಹಿ





**ದೆಹಲಿ:** ಭಾರತದಲ್ಲಿ ಎನ್ಡಿಎ ಸರ್ಕಾರ ಅಧಿಕಾರಕ್ಕೆ ಬಂದ ಮೊದಲ ದಿನವೇ ಪ್ರಧಾನಿ ನರೇಂದ್ರ ಮೋದಿ ಅವರು ರೈತರಿಗೆ ನೀಡುವ ಕಿಸಾನ್ ನಿಧಿಯ ಮೊತ್ತ ಬಿಡುಗಡೆಗೆ ಸಹಿ ಹಾಕಿದ್ದಾರೆ. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಈಗಾಗಲೇ ಆರು ವರ್ಷಗಳಿಂದ ರೈತರಿಗೆ ವರ್ಷಕ್ಕೆ ಆರು ಸಾವಿರ ರೂ.

ಆರ್ಥಿಕ ನೆರವು ನೀಡಲಾಗುತ್ತಿದೆ. ಇದರಲ್ಲಿ ಪಿಎಂ ಕಿಸಾನ್ ನಿಧಿ 2024 ರ 17 ನೇ ಕಂತು ಬಿಡುಗಡೆಗೆ ಅನುಮತಿ ನೀಡಲಾಗಿದ್ದು, ಒಂದೆರಡು ದಿನಗಳಲ್ಲಿ ಭಾರತದ 9.3 ಕೋಟಿ ರೈತರ ಖಾತೆಗಳಿಗೆ ಹಣ ವರ್ಗಾವಣೆಯಾಗಲಿದೆ. ಮೂರನೇ ಬಾರಿಗೆ ಪ್ರಧಾನಿಯಾಗಿ ಮೊದಲ ದಿನ ಕಚೇರಿಗೆ ಆಗಮಿಸಿದ ಪ್ರಧಾನಿ ಅವರು ಮೊದಲ ಕಡತಕ್ಕೆ ಸಹಿ ಹಾಕಿದ್ದುಇದೇ ಪಿಎಂ ಕಿಸಾನ್ ನಿಧಿಯದ್ದು.

ಈ ವೇಳೆ ಮಾತನಾಡಿರುವ ಪ್ರಧಾನಿ ಮೋದಿ, ನಮ್ಮದು ರೈತರ ಕಲ್ಯಾಣಕ್ಕೆ ಬದ್ಧರಾಗಿರುವ ಸರ್ಕಾರ. ಆದ್ದರಿಂದ ಮೊದಲ ಕಡತಕ್ಕೆ ಸಹಿ ಹಾಕಿದ್ದೇನೆ. 20 ಸಾವಿರ ಕೋಟಿಯ ಯೋಜನೆ ದೇಶದ 9.3 ಕೋಟಿ ರೈತರಿಗೆ ಅನುಕೂಲವಾಗಲಿದೆ. ಮುಂದಿನ ದಿನಗಳಲ್ಲಿ ಕೃಷಿ ಕ್ಷೇತ್ರಕ್ಕೆ ಇನ್ನಷ್ಟು ಕೆಲಸ ಮಾಡುತ್ತೇವೆ ಎಂದು ಪ್ರತಿಕ್ರಿಯೆ ನೀಡಿದ್ದಾರೆ. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯು ಭಾರತದಲ್ಲಿ ಕೇಂದ್ರ ಸರ್ಕಾರದ ಸಾರ್ವಜನಿಕ ಕಲ್ಯಾಣ ಯೋಜನೆಯಾಗಿದೆ. ಈ ಯೋಜನೆಯನ್ನು 2019 ರಲ್ಲಿ ಪ್ರಾರಂಭಿಸಲಾಯಿತು. ಈ ಯೋಜನೆಯು 4 ತಿಂಗಳ ಮೂರು ಕಂತುಗಳಲ್ಲಿ ಪ್ರತಿ ವರ್ಷ 6000 ರೂ. ನೀಡುತ್ತದೆ. ಇದರಿಂದಾಗಿ ಫಲಾನುಭವಿಗಳು ವರ್ಷದ ಮೂರನೇ ತಿಂಗಳಿಗೆ 2000 ರೂ. ಪಡೆಯುತ್ತಾರೆ. ಕೇಂದ್ರ ಸರ್ಕಾರವು ಫೆಬ್ರವರಿ ತಿಂಗಳಿನಲ್ಲಿಯೇ ಪಿಎಂ ಕಿಸಾನ್ನ 16 ನೇ ಕಂತನ್ನು ಬಿಡುಗಡೆ ಮಾಡಿತ್ತು.

# ಸಚಿವರಿಗೆ ಖಾತೆ ಹಂಚಿದ ಪ್ರಧಾನಿ ನರೇಂದ್ರ ಮೋದಿ



**ದೆಹಲಿ:** ಕೇಂದ್ರದಲ್ಲಿ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದಿರುವ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಸಚಿವ ಸಂಪುಟದ ಸಚಿವರಿಗೆ ಖಾತೆಗಳನ್ನು ಹಂಚಿಕೆ ಮಾಡಿದ್ದಾರೆ. ಅಮಿತ್ ಶಾ ಅವರಿಗೆ ಗೃಹ ಖಾತೆ ಹಾಗೂ ರಾಜನಾಥ್ ಸಿಂಗ್ ಅವರಿಗೆ ರಕ್ಷಣಾ ಖಾತೆಯನ್ನು ನೀಡಲಾಗಿದೆ.

ನಿರ್ಮಲಾ ಸೀತಾರಾಮನ್ ಅವರಿಗೆ ಹಣಕಾಸು, ಎಸ್ ಜೈಶಂಕರ್ ಅವರಿಗೆ ವಿದೇಶಾಂಗ ವ್ಯವಹಾರಗಳ ಖಾತೆಯನ್ನು ನೀಡಲಾಗಿದೆ. ಈ ಪ್ರಮುಖ ಸಚಿವರು ಹಿಂದಿನ ಸರ್ಕಾರದಲ್ಲೂ ಇದೇ ಖಾತೆಗಳನ್ನು ಪಡೆದಿದ್ದರು. ಜೆಪಿ ನಡ್ಡಾ ಅವರಿಗೆ ಆರೋಗ್ಯ ಖಾತೆಯನ್ನು ನೀಡಲಾಗಿದೆ.

# ಇಸ್ರೇಲ್ ಪ್ರಧಾನಿ ನೆತನ್ಯಾಹುಗೆ ಆಘಾತ



**ಟೆಲ್‌ಅವೀವ್:** ಯುದ್ಧದ ಬಳಿಕ ಗಾಝಾದ ವ್ಯವಸ್ಥೆಯ ಕುರಿತು ಸ್ಪಷ್ಟ ಕಾರ್ಯಯೋಜನೆ ರೂಪಿಸಬೇಕು ಎಂದು ಆಗ್ರಹಿಸಿದ್ದ ಇಸ್ರೇಲ್ನ ಯುದ್ಧಸಂಪುಟದ ಸಚಿವ ಬೆನ್ನೀ ಗ್ಯಾಂಟ್ಸ್, ಪ್ರಧಾನಿ ಬೆಂಜಮಿನ್ ನೆತನ್ಯಾಹು ಸರಕಾರಕ್ಕೆ ರಾಜೀನಾಮೆ ಸಲ್ಲಿಸುವುದಾಗಿ ಘೋಷಿಸಿದ್ದಾರೆ.

ದೇಶದಲ್ಲಿ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಭಾವಿಯಾಗಿರುವ ಮಾಜಿ ರಕ್ಷಣಾ ಸಚಿವ ಗ್ಯಾಂಟ್ಸ್ ರಾಜೀನಾಮೆಯಿಂದ ನೆತನ್ಯಾಹು ಸರಕಾರಕ್ಕೆ ತಕ್ಷಣಕ್ಕೆ ಯಾವುದೇ ಅಪಾಯ ಎದುರಾಗದು. ಆದರೆ, ಇದು ನೆತನ್ಯಾಹು ಅವರ ವಿರುದ್ಧದ ಒತ್ತಡವನ್ನು ಹೆಚ್ಚಿಸಲಿದ್ದು ಗಂಭೀರ ಪರಿಣಾಮ ಬೀರಬಹುದು ಎಂದು ವಿಶ್ಲೇಷಿಸಲಾಗಿದೆ. ಗಾಝಾದ ಬಗ್ಗೆ ಸ್ಪಷ್ಟ ಕಾರ್ಯನೀತಿ ರೂಪಿಸಲು ಜೂನ್ 8ರ ಗಡುವನ್ನು ನೀಡುವುದಾಗಿ ಕಳೆದ ತಿಂಗಳು ಗ್ಯಾಂಟ್ಸ್ ಹೇಳಿದ್ದರು. ಟಿವಿ ವಾಹಿನಿಯ ಮೂಲಕ ರಾಜೀನಾಮೆಯ ಘೋಷಣೆ ಮಾಡಿದ ಗ್ಯಾಂಟ್ಸ್, ಗಾಝಾದಲ್ಲಿ ನಿಜವಾದ ಗೆಲುವಿನತ್ತ ಮುನ್ನಡೆಯದಂತೆ ನಮ್ಮನ್ನು ನೆತನ್ಯಾಹು ತಡೆದಿದ್ದಾರೆ. ಆದ್ದರಿಂದ ಭಾರವಾದ ಹೃದಯದೊಂದಿಗೆ ನಾನು ಸರಕಾರವನ್ನು ತೊರೆಯುತ್ತಿದ್ದೇನೆ. ಇದು ಅತ್ಯಂತ ಸಂಕೀರ್ಣ ಮತ್ತು ನೋವಿನ ನಿರ್ಧಾರವಾಗಿದೆ ಎಂದರು.

ನೆತನ್ಯಾಹು ಅವರ ಪ್ರಮುಖ ರಾಜಕೀಯ ಎದುರಾಳಿ ಎನಿಸಿರುವ ಗ್ಯಾಂಟ್ಸ್, ಅಕ್ಟೋಬರ್ 7ರ ಹಮಾಸ್ ದಾಳಿಯ ಬಳಿಕ ರಚಿಸಲಾದ ಯುದ್ಧಸಂಪುಟದ ಸಚಿವರಾಗಿ ಸೇರ್ಪಡೆಗೊಂಡಿದ್ದರು. 'ದೇಶದ ಪರಿಸ್ಥಿತಿ ಮತ್ತು ನಿರ್ಧಾರ ಕೈಗೊಳ್ಳುವ ವ್ಯವಸ್ಥೆ ಬದಲಾದ್ದರಿಂದ ರಾಜೀನಾಮೆ ನೀಡಬೇಕಾಗಿದೆ. ಗಾಝಾ ಪಟ್ಟಿಯಲ್ಲಿ ಯುದ್ಧಾನಂತರದ ಕಾರ್ಯತಂತ್ರ ರೂಪಿಸುವಲ್ಲಿ ನೆತನ್ಯಾಹು ತನ್ನ ವೈಯಕ್ತಿಕ ರಾಜಕೀಯ ಹಿತಾಸಕ್ತಿಗೆ ಆದ್ಯತೆ ನೀಡುತ್ತಿದ್ದಾರೆ. ರಾಜಕೀಯ ಲಾಭದ ನಿರ್ಧಾರದ ಎದುರು ರಾಷ್ಟ್ರನಿಷ್ಟೆ ಮತ್ತು ರಾಷ್ಟ್ರೀಯ ಹಿತಾಸಕ್ತಿ ಕಡೆಗಣಿಸಲ್ಪಡುತ್ತಿದೆ' ಎಂದು ಪ್ರತಿಪಾದಿಸಿದ ಅವರು, ದೇಶದ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ತಕ್ಷಣ ಚುನಾವಣೆಯ ದಿನಾಂಕ ಘೋಷಿಸುವಂತೆ ಪ್ರಧಾನಿಯನ್ನು ಆಗ್ರಹಿಸಿದ್ದಾರೆ.

# ಭಾರತ- ನೇಪಾಳದ ಸಂಬಂಧ ಮತ್ತಷ್ಟು ವೃದ್ಧಿಯಾಗಲಿದೆ: ನೇಪಾಳ ಪ್ರಧಾನಿ



**ದೆಹಲಿ:** ನರೇಂದ್ರ ಮೋದಿ ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮೋದಿ ಪ್ರಮಾಣ ವಚನ ಸಮಾರಂಭದಲ್ಲಿ ಪಾಲ್ಗೊಂಡ ನೇಪಾಳ ಪ್ರಧಾನಿ ಪುಷ್ಪ ಕಮಲ್ ದಹಲ್ ಪ್ರಚಂಡ ಅವರು 'ನೇಪಾಳ ಮತ್ತು ಭಾರತದ ನಡುವಿನ ಸಂಬಂಧ ಮತ್ತಷ್ಟು ವೃದ್ಧಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಭಾನುವಾರ ಪ್ರಧಾನಿ ನರೇಂದ್ರ ಮೋದಿಯನ್ನು ಭೇಟಿಯಾಗಿ ಅಭಿನಂದಿಸಿದ ಬಳಿಕ ಅವರು ಕೆಲ ಸಮಯ ಮೋದಿ ಜೊತೆ ಮಾತುಕತೆ ನಡೆಸಿದರು. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, 'ನೇಪಾಳ-ಭಾರತ ಸಂಬಂಧಗಳನ್ನು ಮತ್ತಷ್ಟು ಹೆಚ್ಚಿಸುವ ಮಾರ್ಗಗಳ ಕುರಿತು ನಾವು ಚರ್ಚಿಸಿದ್ದೇವೆ. ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಭಾರತದೊಂದಿಗಿನ ನಮ್ಮ ಬಹುಮುಖಿ ಸಂಬಂಧಗಳು ಏಳಿಗೆಯಾಗುತ್ತವೆ ಎಂಬ ವಿಶ್ವಾಸ ನನಗಿದೆ' ಎಂದು ಬರೆದುಕೊಂಡಿದ್ದಾರೆ. ಪ್ರಧಾನಿ ಪ್ರಮಾಣ ವಚನ ಸಮಾರಂಭದಲ್ಲಿ ಮಾಲ್ದೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಜು, ಬಾಂಗ್ಲಾ ಪ್ರಧಾನಿ ಶೇಖ್ ಹಸಿನಾ, ಬಾಲಿವುಡ್ ತಾರೆಯರು, ಉದ್ಯಮಿಗಳು ಸೇರಿದಂತೆ ಸಾಕಷ್ಟು ಮಂದಿ ಭಾಗಿಯಾಗಿ ಮೋದಿಗೆ ಶುಭ ಹಾರೈಸಿದರು.

## ಲೂಧಿಯಾನಾ ಮೂಲದ ವ್ಯಕ್ತಿಯನ್ನು ಗುಂಡಿಕ್ಕಿ ಹತ್ಯೆ

**ಒಟ್ಟಾವ:** ಪಂಜಾಬ್ ನ ಲೂಧಿಯಾನ ಮೂಲದ 28 ವರ್ಷದ ವ್ಯಕ್ತಿಯೊಬ್ಬನನ್ನು ಗುಂಡಿಟ್ಟು ಹತ್ಯೆಗೈದಿರುವ ಘಟನೆ ಶುಕ್ರವಾರ ಕೆನಡಾದ ಸರ್ರೆಯಲ್ಲಿ ನಡೆದಿದೆ ಎಂದು



ವರದಿಯಾಗಿದೆ. ಮೃತರನ್ನು ಯುವರಾಜ್ ಗೋಯಲ್ ಎಂದು ಗುರುತಿಸಲಾಗಿದೆ. ಅವರು ವಿದ್ಯಾರ್ಥಿ ವೀಸಾದ ಮೇಲೆ 2019ರಲ್ಲಿ ಕೆನಡಾಗೆ ಆಗಮಿಸಿದ್ದರು ಎನ್ನಲಾಗಿದೆ. ಈ ಘಟನೆಯು ಗುರಿ ತಪ್ಪಿ ನಡೆದಿರಬಹುದು ಎಂದು ಗೋಯಲ್ ಕುಟುಂಬದ ಸದಸ್ಯರು ಅನುಮಾನ ವ್ಯಕ್ತಪಡಿಸಿದ್ದಾರೆ. ಕೆನಡಾದ ಇಂಟಿಗ್ರೇಟೆಡ್ ಹೊಮಿಸೈಡ್ ಇನ್ವೆಸ್ಟಿಗೇಷನ್ ಟೀಮ್ ಪ್ರಕಾರ, ಗೋಯಲ್ ಗೆ ಯಾವುದೇ ಅಪರಾಧದ ಹಿನ್ನೆಲೆಯಿರಲಿಲ್ಲ ಎಂದು ತಿಳಿದು ಬಂದಿದೆ. ಈ ಪ್ರಕರಣದ ಸಂಬಂಧ ಶನಿವಾರ ಮನ್ವೀರ್ ಬಸ್ರಾಮ್ (23), ಸಾಹಿಬ್ ಬಸ್ರಾ (20), ಹರ್ಕಿರತ್ ಝುಟ್ಟಿ (20) ಹಾಗೂ ಕೈಲನ್ ಫ್ರಾಂಕೋಯಿಸ್ (20) ಎಂಬ ಆರೋಪಿಗಳನ್ನು ಬಂಧಿಸಲಾಗಿದ್ದು, ಅವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

# ಅಮೆರಿಕದ ಶ್ವೇತಭವನ ಸುತ್ತ ಫೆಲೆಸ್ತೀನ್ ಪರ ಪ್ರತಿಭಟನೆ



**ವಾಶಿಂಗ್ಟನ್:** ವಾಶಿಂಗ್ಟನ್‌ನಲ್ಲಿ ಶನಿವಾರ ಫೆಲೆಸ್ತೀನ್ ಪರ ಬೃಹತ್ ಪ್ರತಿಭಟನೆ ನಡೆದಿದ್ದು ಸುಮಾರು 30,000ಕ್ಕೂ ಅಧಿಕ ಪ್ರತಿಭಟನಾಕಾರರು ಶ್ವೇತಭವನವನ್ನು ಸುತ್ತುವರಿದು ಇಸ್ರೇಲ್ ಗಾಝಾ ಯುದ್ಧವನ್ನು ಕೊನೆಗೊಳಿಸಬೇಕೆಂದು ಒತ್ತಾಯಿಸಿದರು ಹಾಗೂ ಇಸ್ರೇಲ್ ಅನ್ನು ಬೆಂಬಲಿಸುವ ಬೈಡನ್ ಆಡಳಿತವನ್ನು ಖಂಡಿಸಿ ಘೋಷಣೆ ಕೂಗಿದರು.

ಕೆಂಪು ಬಟ್ಟೆಗಳನ್ನು ಧರಿಸಿದ ಪ್ರತಿಭಟನಾಕಾರರು 'ಗಾಝಾ ಮುತ್ತಿಗೆಯನ್ನು ತಕ್ಷಣ ಕೊನೆಗೊಳಿಸಿ, 'ಫೆಲೆಸ್ತೀನ್ ಸ್ವತಂತ್ರವಾಗಲಿ' ಇಸ್ರೇಲ್ಗೆ ಅಮೆರಿಕ ನೀಡುತ್ತಿರುವ ಮಿಲಿಟರಿ, ಧನಸಹಾಯವನ್ನು ನಿಲ್ಲಿಸಿ' ಎಂಬ ಬ್ಯಾನರ್ ಪ್ರದರ್ಶಿಸಿದರು. ಕೆಲವರು ಶ್ವೇತಭವನದ ಗೇಟಿನ ಎದುರು ಹೊಗೆ ಜ್ವಾಲೆಗಳನ್ನು ಹೊತ್ತಿಸಿದರೆ ಇನ್ನು ಕೆಲವರು ಶ್ವೇತಭವನದ ಹುಲ್ಲುಹಾಸಿನ ಮೇಲೆ ಹೊಗೆ ಬಾಂಬ್ಗಳನ್ನು ಎಸೆಯುತ್ತಿರುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಪ್ರತಿಭಟನಾಕಾರರು ಶ್ವೇತಭವನದತ್ತ ಸಾಗುವ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ತಡೆಯೊಡ್ಡಿದ್ದಾರೆ. ಆದರೆ ಇದುವರೆಗೆ ಯಾರನ್ನೂ ಬಂಧಿಸಿಲ್ಲ ಎಂದು ವಾಶಿಂಗ್ಟನ್ ಡಿಸಿ ಮೆಟ್ರೊಪಾಲಿಟನ್ ಪೊಲೀಸ್ ಇಲಾಖೆ ಮತ್ತು ಗುಪ್ತಚರ ಸೇವಾ ಇಲಾಖೆಯ ಅಧಿಕಾರಿಗಳು ಹೇಳಿದ್ದಾರೆ. ಪ್ರತಿಭಟನೆ ನಡೆದಾಗ ಅಧ್ಯಕ್ಷ ಬೈಡನ್ ಮತ್ತವರ ಪತ್ನಿ ಮನೆಯಲ್ಲಿ ಇರಲಿಲ್ಲ ಎಂದು ವರದಿಯಾಗಿದೆ.

ಗಾಝಾ ಯುದ್ಧದಲ್ಲಿ ಇಸ್ರೇಲ್ಗೆ ಅಮೆರಿಕ ರಾಜತಾಂತ್ರಿಕ ಮತ್ತು ಮಿಲಿಟರಿ ಬೆಂಬಲ ನೀಡುತ್ತಿರುವುದನ್ನು ಖಂಡಿಸಿ ಮತ್ತು ಫೆಲೆಸ್ತೀನ್ ಬೆಂಬಲಿಸಿ ರಾಜಧಾನಿ ವಾಶಿಂಗ್ಟನ್ ಸಹಿತ ಅಮೆರಿಕಾದ್ಯಂತ ಪ್ರತಿಭಟನೆ ನಡೆಯುತ್ತಿದೆ. ಅಮೆರಿಕದ ಪ್ರತಿಷ್ಠಿತ ವಿವಿಗಳ ಆವರಣದಲ್ಲಿಯೂ ಫೆಲೆಸ್ತೀನ್ ಪರ ಪ್ರತಿಭಟನೆ ಭುಗಿಲೆದ್ದಿದೆ. ಹಲವು ನಗರಗಳಲ್ಲಿ ರೈಲು ನಿಲ್ದಾಣ, ವಿಮಾನ ನಿಲ್ದಾಣಗಳಲ್ಲಿ ಪ್ರತಿಭಟನೆ ನಡೆದು ರಸ್ತೆ ತಡೆ ನಡೆಸಲಾಗಿದೆ. ಈ ಮಧ್ಯೆ, ಬೈಡನ್ ಅವರ ಇಸ್ರೇಲ್ ನೀತಿಯನ್ನು ವಿರೋಧಿಸಿ ಬೈಡನ್ ಆಡಳಿತದ ಕನಿಷ್ಠ 8 ಅಧಿಕಾರಿಗಳು ರಾಜೀನಾಮೆ ಸಲ್ಲಿಸಿರುವುದಾಗಿ ವರದಿಯಾಗಿದೆ.

## ಪೋಲಿಯೋ; ಮಗು ಸಾವು

**ಪಾಕಿಸ್ತಾನ:** ಪಾಕಿಸ್ತಾನದಲ್ಲಿ ಈ ವರ್ಷದ ಐದನೇ ಪೋಲಿಯೊ ಪ್ರಕರಣ ದೃಢಪಟ್ಟಿದೆ. ಪೋಲಿಯೊ ಪೀಡಿತ ಮಗುವೊಂದು ಮೃತಪಟ್ಟ ಹದಿನೈದು ದಿನಗಳ ಬಳಿಕ ಈ ಬೆಳವಣಿಗೆ ನಡೆದಿದೆ. ಈ ಸೋಂಕು ನಿರ್ಮೂಲನೆಗೆ ಪಾಕಿಸ್ತಾನ ಸರ್ಕಾರ ನಡೆಸುತ್ತಿರುವ ಪ್ರಯತ್ನಕ್ಕೆ ಈ ಮೂಲಕ ಮತ್ತೊಂದು ಹಿನ್ನಡೆ ಆಗಿದೆ. ಬಲೂಚಿಸ್ತಾನದ ಕ್ವೆಟ್ಟಾದಲ್ಲಿ ಎರಡು ವರ್ಷದ ಮಗುವೊಂದು ಮೇ 22 ರಂದು ಮೃತಪಟ್ಟಿತ್ತು. ಪೋಲಿಯೊ ಸೋಂಕಿನಿಂದ ಮಗು ಮೃತಪಟ್ಟಿದೆ ಎಂಬುದು ದೃಢಪಟ್ಟಿರುವುದಾಗಿ ಡಾನ್ ದಿನಪತ್ರಿಕೆ ವರದಿ ಮಾಡಿದೆ. ಏಪ್ರಿಲ್ 29 ರಂದು ಇದ್ದಕ್ಕಿದ್ದಂತೆ ಮಗುವಿನ ಕಾಲುಗಳ ಶಕ್ತಿ ಕುಂದಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ಕರಾಚಿಯ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಅಲ್ಲಿ ಸೋಂಕು ಉಲ್ಬಣಗೊಂಡು ಸೋಂಕು ಕೈಗಳಿಗೂ ಹಬ್ಬಿತ್ತು. ಚಿಕಿತ್ಸೆಗೆ ಸ್ಪಂದಿಸದೆ ಕೆಲ ದಿನಗಳ ಬಳಿಕ ಮಗು ಮೃತಪಟ್ಟಿದೆ ಎಂದು ವರದಿಯಾಗಿದೆ. ಪೋಲಿಯೊ ಲಸಿಕೆ ಅಭಿಯಾನದ ಅವಧಿಯಲ್ಲಿ ಮಗು ಲಸಿಕೆ ಪಡೆದುಕೊಂಡಿರಲಿಲ್ಲ ಎಂದು ಆರೋಗ್ಯ ಇಲಾಖೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ಬಲೂಚಿಸ್ತಾನ ಪ್ರಾಂತ್ಯದಲ್ಲಿ ಈ ವರ್ಷ ನಾಲ್ಕು ಪೋಲಿಯೊ ಪ್ರಕರಣಗಳು ದೃಢಪಟ್ಟಿವೆ. ಜೂನ್ 1 ರಂದು ಸಿಂಧ್ ಪ್ರಾಂತ್ಯದ ಮಗುವಿನಲ್ಲಿ ಪೋಲಿಯೊ ಸೋಂಕು ಕಂಡುಬಂದಿತ್ತು.

# ಕಣಿವೆಯಲ್ಲಿ ಪಾಕಿಸ್ತಾನಿ ಭಯೋತ್ಪಾದಕರಿಗೆ ಹಿಂದೂಗಳನ್ನು ಕೊಲ್ಲಲು ಬಿಡಬೇಡಿ: ಗೀರ್ಟ್ ವೈಲ್ಡರ್ಸ್







**ದೆಹಲಿ:** ಭಾನುವಾರ ಸಂಜೆ ಜಮ್ಮು ಕಾಶ್ಮೀರದ ರಿಯಾಸಿಯಲ್ಲಿ ಮಾತಾ ವೈಷ್ಣೋದೇವಿ ದೇವಾಲಯದಿಂದ ಯಾತ್ರಾರ್ಥಿಗಳನ್ನು ಕರೆದೊಯ್ಯುತ್ತಿದ್ದ ಬಸ್ ಮೇಲೆ ಪಾಕಿಸ್ತಾನಿ ಉಗ್ರರು ಗುಂಡಿನ ದಾಳಿನಡೆಸಿದ್ದಾರೆ. ಇದರಿಂದ ಬಸ್ ಕಣಿವೆಗೆ ಉರುಳಿಬಿದ್ದು 9 ಜನ ಸಾವನ್ನಪ್ಪಿದ್ದರು. ಘಟನೆಯ ಕುರಿತು ನೆದರ್ಲ್ಯಾಂಡ್ಸ್‌ನ ಬಲಪಂಥೀಯ ಪಿವಿವಿ ಫ್ರೀಡಂ ಪಾರ್ಟಿಯ ಮುಖ್ಯಸ್ಥ ಗೀರ್ಟ್ ವೈಲ್ಡರ್ಸ್ ಪ್ರತಿಕ್ರಿಯಿಸಿದ್ದಾರೆ.

'ಕಾಶ್ಮೀರ ಕಣಿವೆಯಲ್ಲಿ ಪಾಕಿಸ್ತಾನಿ ಭಯೋತ್ಪಾದಕರಿಗೆ ಹಿಂದೂಗಳನ್ನು ಕೊಲ್ಲಲು ಬಿಡಬೇಡಿ. ನಿಮ್ಮ ಜನರನ್ನು ಭಾರತವನ್ನು ರಕ್ಷಿಸಿಕೊಳ್ಳಿ!' ಎಂದು ವೈಲ್ಡರ್ಸ್ ಸಾಮಾಜಿಕ ಮಾಧ್ಯಮ ಸೈಟ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ವೈಲ್ಡರ್ಸ್ ಹಲವಾರು ಸಂದರ್ಭಗಳಲ್ಲಿ ಪಾಕಿಸ್ತಾನದಲ್ಲಿ ಭಯೋತ್ಪಾದನೆಯ ವಿಷಯವನ್ನು ಎತ್ತಿ ತೋರಿಸಿದ್ದಾರೆ. ಮುಸ್ಲಿಂ ಬಹುಸಂಖ್ಯಾತ ರಾಷ್ಟ್ರವಾದ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ಎರಡರಲ್ಲೂ ಹಿಂದೂಗಳ ದುಃಸ್ಥಿತಿಯನ್ನು ಎತ್ತಿ ತೋರಿಸಿದ್ದಾರೆ.

'ನಾನು ಪಾಕಿಸ್ತಾನ ಮತ್ತು ಅರಬ್ ಇಮಾಮ್ಗಳಿಂದ ಹಲವಾರು ಫತ್ವಾಗಳನ್ನು ಸ್ವೀಕರಿಸಿದ್ದೇನೆ, ಆದರೆ ನಾನು ಹೆದರುವುದಿಲ್ಲ' ಎಂದು ಗೀರ್ಟ್ ವೈಲ್ಡರ್ಸ್ ಕಳೆದ ವರ್ಷ ಹೇಳಿದ್ದರು.

ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯಲ್ಲಿ ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಮೇಲೆ ನಡೆದ ಭಯೋತ್ಪಾದಕ ದಾಳಿಯಲ್ಲಿ 9 ಜನರು ಸಾವನ್ನಪ್ಪಿದ್ದರು. ಬಲಿಯಾದವರಲ್ಲಿ 2 ವರ್ಷದ ಬಾಲಕ ಸೇರಿದಂತೆ ನಾಲ್ವರು ರಾಜಸ್ಥಾನದ ಸ್ಥಳೀಯರು ಮತ್ತು ಮೂವರು ಉತ್ತರ ಪ್ರದೇಶದವರು ಇದ್ದಾರೆ. 41 ಯಾತ್ರಾರ್ಥಿಗಳಲ್ಲಿ ಗುಂಡೇಟಿನಿಂದ ಗಾಯಗೊಂಡ 10 ಜನರು ಉತ್ತರ ಪ್ರದೇಶದವರಾಗಿದ್ದಾರೆ. ಗಾಯಾಳುಗಳು ಜಮ್ಮು ಮತ್ತು ರಿಯಾಸಿ ಜಿಲ್ಲೆಗಳ 3 ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಾನುವಾರ ಸಂಜೆ 6.10ರ ಸುಮಾರಿಗೆ ರಿಯಾಸಿ ಜಿಲ್ಲೆಯಲ್ಲಿ ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಮೇಲೆ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ್ದು, 9 ಮಂದಿ ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಕಾಟೇರ' ಡೈರೆಕ್ಟರ್‌ಗೆ ದರ್ಶನ್ ಸಾಥ್– 'ವೀರ ಸಿಂಧೂರ ಲಕ್ಷ್ಮಣ' ಬರೋದು ಕನ್ಫರ್ಮ್

ಸ್ಯಾಂಡಲ್‌ವುಡ್‌ನ ಬಾಕ್ಸ್ ಆಫೀಸ್ ಸುಲ್ತಾನ್ ದರ್ಶನ್ ಅವರ ಮುಂದಿನ ಚಿತ್ರದ ಬಗ್ಗೆ ಅಭಿಮಾನಿಗಳಿಗೆ ಗುಡ್ ನ್ಯೂಸ್ ಸಿಕ್ಕಿದೆ. ಬಹುಕೋಟಿ ವೆಚ್ಚದ 'ವೀರ ಸಿಂಧೂರ ಲಕ್ಷ್ಮಣ' ಸಿನಿಮಾ ಬರೋದು ಪಕ್ಕಾ ಆಗಿದೆ. ದರ್ಶನ್ ನಟನೆಯ 59ನೇ ಚಿತ್ರಕ್ಕೆ 'ಕಾಟೇರ' ಡೈರೆಕ್ಟರ್ ತರುಣ್ ಸುಧೀರ್ ಆಕ್ಷನ್ ಕಟ್ ಹೇಳಲಿದ್ದಾರೆ.

'ಕಾಟೇರ' ಸಿನಿಮಾದ ಸೂಪರ್ ಸಕ್ಸಸ್ ನಂತರ ಮತ್ತೆ ಅದೇ ಟೀಮ್ ಜೊತೆ ದರ್ಶನ್ ಕೆಲಸ ಮಾಡಲು ಮುಂದಾಗಿದ್ದಾರೆ. ರೈತರ ಸಂಕಷ್ಟದ ಕಥೆ ಜೊತೆ ಮಣ್ಣಿನ ಕಥೆ ಹೇಳಿ ಗೆದ್ದ ತರುಣ್ ಸುಧೀರ್ ಮಗದೊಮ್ಮೆ 'ವೀರ ಸಿಂಧೂರ ಲಕ್ಷ್ಮಣ' ಸಿನಿಮಾಗೆ ನಿರ್ದೇಶನ ಮಾಡೋದು ಪಕ್ಕಾ ಆಗಿದೆ. ಸದ್ಯದಲ್ಲೇ ಸಿನಿಮಾ ಶುರುವಾಗಲಿದೆ.

ಈಗಾಗಲೇ 'ಯಜಮಾನ' ಮತ್ತು 'ಕ್ರಾಂತಿ' ಸಿನಿಮಾದಂತಹ ಎರಡು ಸೂಪರ್ ಹಿಟ್ ಚಿತ್ರಗಳನ್ನು ದರ್ಶನ್ ಅವರಿಗೆ ನೀಡಿರುವ ಮೀಡಿಯಾ ಹೌಸ್‌ನ ಶೈಲಜಾ ನಾಗ್ ಮತ್ತು ಬಿ.ಸುರೇಶ ಮತ್ತೊಂದು ಕ್ರಾಂತಿಕಾರಿ ಸಿನಿಮಾವನ್ನು ಕೈಗೆತ್ತಿಕೊಂಡಿದ್ದಾರೆ. ಇದೇ ಮೊದಲ ಬಾರಿಗೆ ಅವರು ಸ್ವಾತಂತ್ರ್ಯ ಸಂಗ್ರಾಮದ ಕ್ರಾಂತಿ ಕಿಡಿ 'ವೀರ ಸಿಂಧೂರ ಲಕ್ಷ್ಮಣ'ನಂಥ ಐತಿಹಾಸಿಕ ಸಿನಿಮಾವನ್ನು ನಿರ್ಮಾಣ ಮಾಡುತ್ತಿದ್ದಾರೆ.



'ವೀರ ಸಿಂಧೂರ ಲಕ್ಷ್ಮಣ' ಅಂದಾಕ್ಷಣ ಥಟ್ಟನೆ ನೆನಪಾಗೋದು ಹಿರಿಯ ನಟ ಸುಧೀರ್. ಸಿಂಧೂರ ಲಕ್ಷ್ಮಣ ನಾಟಕವನ್ನು ಜನಪ್ರಿಯಗೊಳಿಸಿದ ಮಹಾನ್ ಕಲಾವಿದ ಸುಧೀರ್. ತಮ್ಮ ತಂದೆಯ ಅಭಿನಯದ ಅಪರೂಪದ ಪಾತ್ರವನ್ನು ತೆರೆಗೆ ತರಲು ರೆಡಿಯಾಗುತ್ತಿದ್ದಾರೆ ತರುಣ್ ಸುಧೀರ್. 'ಕ್ರಾಂತಿ' ಪುರುಷ ಲಕ್ಷ್ಮಣನ ಪಾತ್ರದಲ್ಲಿ ದರ್ಶನ್ ಕಾಣಿಸಿಕೊಳ್ಳಲಿದ್ದಾರೆ. ಮುಂದೆ ಸಿನಿಮಾ ಬಗ್ಗೆ ಏನೆಲ್ಲಾ ಅಪ್‌ಡೇಟ್ ಸಿಗಲಿದೆ ಕಾದುನೋಡಬೇಕಿದೆ.



# ಯುವರಾಜ್‌ಕುಮಾರ್ ದಾಂಪತ್ಯದಲ್ಲಿ ಬಿರುಕು

ನಟ ರಾಘವೇಂದ್ರ ರಾಜ್‌ಕುಮಾರ್ ಪುತ್ರ ಯುವರಾಜ್‌ಕುಮಾರ್ ದಾಂಪತ್ಯದಲ್ಲಿ ಬಿರುಕಾಗಿದೆ. ಪತ್ನಿ ಶ್ರೀದೇವಿ ಡಿವೋರ್ಸ್ ನೀಡಲು ಜೂನ್ 6ರಂದು ಬೆಂಗಳೂರಿನ ಫ್ಯಾಮಿಲಿ ಕೋರ್ಟ್‌ಗೆ ಯುವ ಅರ್ಜಿ ಸಲ್ಲಿಸಿದ್ದಾರೆ. ಪತ್ನಿ ಶ್ರೀದೇವಿಗೆ ಕೋರ್ಟ್‌ನಿಂದ ಈಗಾಗಲೇ ಡಿವೋರ್ಸ್ ನೋಟಿಸ್ ಕೂಡ ಕಳುಹಿಸಲಾಗಿದೆ.

ಪ್ರೀತಿಸಿ ಮದುವೆಯಾಗಿದ್ದ ಯುವ ಮತ್ತು ಶ್ರೀದೇವಿ ಜೋಡಿ ದಾಂಪತ್ಯಕ್ಕೆ ಅಂತ್ಯ ಹಾಡಲು ಮುಂದಾಗಿದ್ದಾರೆ. ಜೂನ್ 6ರಂದು ಫ್ಯಾಮಿಲಿ ಕೋರ್ಟ್‌ಗೆ ಅರ್ಜಿ ಸಲ್ಲಿಸಿರುವ ಯುವರಾಜ್‌ಕುಮಾರ್, ಜುಲೈ 4ರಂದು ವಿಚಾರಣೆಗೆ ನಿಗದಿಯಾಗಿದೆ.

ಕಳೆದ 6 ತಿಂಗಳಿಂದ ಇಬ್ಬರ ಡಿವೋರ್ಸ್ ಸುದ್ದಿ ಹರಿದಾಡುತ್ತಿತ್ತು. ಕೆಲ ತಿಂಗಳುಗಳಿಂದ ಇಬ್ಬರೂ ಜೊತೆಯಾಗಿ ಕೂಡ ವಾಸಿಸುತ್ತಿಲ್ಲ. ಇನ್ನೂ 'ಯುವ' ಸಿನಿಮಾದ ಪ್ರಚಾರ ಕಾರ್ಯದಲ್ಲಿಯೂ ಕೂಡ ಶ್ರೀದೇವಿ ಭಾಗಿಯಾಗಿರಲಿಲ್ಲ. ಸದ್ಯ ಶ್ರೀದೇವಿ ಅವರು ವಿದೇಶದಲ್ಲಿ ನೆಲೆಸಿದ್ದಾರೆ ಎನ್ನಲಾಗಿದೆ.

ಹಲವು ವರ್ಷಗಳ ಪ್ರೀತಿಗೆ ಮೈಸೂರು ಮೂಲದ ಶ್ರೀದೇವಿ ಜೊತೆ 2018ರಲ್ಲಿ ಯುವರಾಜ್‌ಕುಮಾರ್ ನಿಶ್ಚಿತಾರ್ಥ ಜರುಗಿತ್ತು. 2019ರ ಮೇ 26ರಂದು ಅದ್ದೂರಿಯಾಗಿ ಇಬ್ಬರ ಮದುವೆ ಜರುಗಿತ್ತು. ಈಗ ಇಬ್ಬರೂ ಡಿವೋರ್ಸ್‌ಗೆ ಮುಂದಾಗಿದ್ದಾರೆ.



# 'ಎ ಮಾಸ್ಟರ್ ಪೀಸ್' ನಿರ್ದೇಶಕನ ಜೊತೆ ಮದುವೆ ಆಗಿದೆ ಎಂದ ಜ್ಯೋತಿ ರೈ



ಕನ್ನಡದ ನಟಿ ಜ್ಯೋತಿ ರೈ ಇದೀಗ ಟಾಲಿವುಡ್‌ಗೆ ನಾಯಕಿಯಾಗಿ ಎಂಟ್ರಿ ಕೊಟ್ಟಿದ್ದಾರೆ. ಇದೀಗ ರಿಲೀಸ್ ಆಗಿರುವ 'ಎ ಮಾಸ್ಟರ್ ಪೀಸ್' ಚಿತ್ರದ ಟೀಸರ್‌ಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಈ ಚಿತ್ರದ ಟೀಸರ್ ಕಾರ್ಯಕ್ರಮದಲ್ಲಿ ನಿರ್ದೇಶಕ ಸುಕು ಪೂರ್ವಜ್ ಜೊತೆ ಮದುವೆಯಾಗಿದೆ ಎಂದು ಜ್ಯೋತಿ ರೈ ಅಧಿಕೃತವಾಗಿ ಹೇಳಿದ್ದಾರೆ.

20ರ ವಯಸ್ಸಿನಲ್ಲೇ ಪದ್ಮನಾಭ್ ರೈ ಜೊತೆ ಜ್ಯೋತಿ ರೈ ಮದುವೆಯಾಗಿತ್ತು. ಅವರ ಸಂಬಂಧಕ್ಕೆ ಮಗ ಕೂಡ ಸಾಕ್ಷಿಯಾಗಿದ್ದಾನೆ. ಆದರೆ ಈ ಮದುವೆ ಕೆಲವೇ ವರ್ಷಗಳಲ್ಲಿ ಮುರಿದು ಬಿದ್ದಿತ್ತು. ನಂತರ ತಮ್ಮ 2ನೇ ಮದುವೆ ಬಗ್ಗೆ ನಟಿ ಎಲ್ಲೂ ಮಾತನಾಡಿರಲಿಲ್ಲ. ಈಗ ಮೊದಲ ಬಾರಿಗೆ 2ನೇ ಮದುವೆ ಬಗ್ಗೆ ಜ್ಯೋತಿ ರೈ ಮಾತನಾಡಿದ್ದಾರೆ.

'ಎ ಮಾಸ್ಟರ್ ಪೀಸ್' ಸಿನಿಮಾದ ಕಾರ್ಯಕ್ರಮದಲ್ಲಿ ನಟಿ ಮಾತನಾಡುತ್ತಾ, ಈ ಚಿತ್ರದ ಮೂಲಕ ನನ್ನ ಬದುಕಿನ ದಿಕ್ಕು ಬದಲಾಯಿತು ಎಂದಿದ್ದಾರೆ. ಸುಕು ಪೂರ್ವಜ್‌ರನ್ನು ನನ್ನ ಪತಿಯಾಗಿ ಪಡೆಯಲು ನಾನು ಪುಣ್ಯ ಮಾಡಿದ್ದೇ ಎಂದು ಜ್ಯೋತಿ ರೈ ಓಪನ್ ಆಗಿ ಮಾತನಾಡಿದ್ದಾರೆ.

ಈ ವೇಳೆ, ಹೆಚ್ಚೆಚ್ಚು ತೆಲುಗು ಸಿನಿಮಾಗಳಲ್ಲಿ ನಟಿಸೋದಾಗಿ ಜ್ಯೋತಿ ರೈ ಹೇಳಿದ್ದಾರೆ. ಇದು ನಾನು ನಾಯಕಿಯಾಗಿ ನಟಿಸುತ್ತಿರುವ ಮೊದಲು ಸಿನಿಮಾ. ಆಂಧ್ರದ ಜನರ ಹಾರೈಕೆ ನನ್ನ ಮೇಲಿರಲಿ ಎಂದು ನಟಿ ಮನವಿ ಮಾಡಿದ್ದಾರೆ.

# ಮತ್ತೊಂದು ರೋಚಕ ಪಂದ್ಯದಲ್ಲಿ ಬಾಂಗ್ಲಾ ತಂಡವನ್ನು ಮಣಿಸಿದ ಆಫ್ರಿಕಾ

ಐಸಿಸಿ ಟಿ20 ವಿಶ್ವಕಪ್ 2024ರ 21ನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ಕರಾರುವಕ್ಕಾದ ದಾಳಿಗೆ ಬಾಂಗ್ಲಾದೇಶ ತಂಡ ತಲೆಬಾಗಿದೆ. ನಸ್ಸೌ ಕೌಂಟಿ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಮತ್ತೊಂದು ಕಡಿಮೆ ಸ್ಕೋರಿಂಗ್ ಪಂದ್ಯದಲ್ಲಿ ಆಫ್ರಿಕಾ ತಂಡ, ಬಾಂಗ್ಲಾ ತಂಡವನ್ನು 4 ರನ್‌ಗಳಿಂದ ಮಣಿಸಿದೆ. ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ತಂಡ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 113 ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲಿ ಅತಿ ಕಡಿಮೆ ಸ್ಕೋರ್ ದಾಖಲಿಸಿದ ಬೇಡದ ದಾಖಲೆಯನ್ನು ದಕ್ಷಿಣ ಆಫ್ರಿಕಾ ಬರೆಯಿತು. ಗೆಲುವಿಗೆ ಅಲ್ಪ ಗುರಿ ಪಡೆದ ಬಾಂಗ್ಲಾದೇಶ ತಂಡ ಕೊನೆಯಲ್ಲಿ ಮಾಡಿಕೊಂಡ ತನ್ನದೇ ತಪ್ಪುಗಳಿಂದ ಗೆಲ್ಲುವ ಪಂದ್ಯವನ್ನು ಕೈಚೆಲ್ಲಿತು.

**ಕ್ಲಾಸೆನ್ ಏಕಾಂಗಿ ಹೋರಾಟ:** ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆಫ್ರಿಕಾ ಪರ ಕೇವಲ ಮೂರು ಬ್ಯಾಟ್ಸ್‌ಮನ್‌ಗಳಿಗೆ ಮಾತ್ರ ಎರಡಂಕಿ ತಲುಪಲು ಸಾಧ್ಯವಾಯಿತು. ಉಳಿದವರಲ್ಲಿ ಇಬ್ಬರು ಖಾತೆ ತೆರೆಯದೆ ನಿರ್ಗಮಿಸಿದರೆ. ಮೂವರೂ ಒಂದೇ ರನ್‌ಗೆ ತೃಪ್ತಿಪಟ್ಟರು. ದಕ್ಷಿಣ ಆಫ್ರಿಕಾ ಪರ ಹೆನ್ರಿಕ್ ಕ್ಲಾಸೆನ್ ಅತ್ಯಧಿಕ 46 ರನ್ ಗಳಿಸಿದರು. ಕ್ಲಾಸೆನ್ ಅವರ ಇನ್ನಿಂಗ್ಸ್ 3 ಸಿಕ್ಸರ್ ಮತ್ತು 2 ಬೌಂಡರಿಗಳನ್ನು ಒಳಗೊಂಡಿತ್ತು. ಡೇವಿಡ್ ಮಿಲ್ಲರ್ 29 ರನ್ ಕೊಡುಗೆ ನೀಡಿದರು. ಕ್ಲಾಸೆನ್ ಮತ್ತು ಮಿಲ್ಲರ್ ಇಬ್ಬರೂ ಐದನೇ ವಿಕೆಟ್‌ಗೆ 80 ಎಸೆತಗಳಲ್ಲಿ 79 ರನ್‌ಗಳ ಜೊತೆಯಾಟ ನೀಡಿದರು. ಹಾಗಾಗಿ ದಕ್ಷಿಣ ಆಫ್ರಿಕಾ 100 ರನ್‌ಗಳ ಗಡಿ ದಾಟಲು ಸಾಧ್ಯವಾಯಿತು.



**ಅಗ್ರಕ್ರಮಾಂಕದ ವೈಫಲ್ಯ:** ಉಳಿದಂತೆ ತಂಡದ ಪರ ಕ್ವಿಂಟನ್ ಡಿ ಕಾಕ್ 11 ಎಸೆತಗಳಲ್ಲಿ 18 ರನ್ ಗಳಿಸಿದರು. ರಿಜಾ ಹೆಂಡ್ರಿಕ್ಸ್ ಮತ್ತು ಟ್ರಿಸ್ಟಾನ್ ಸ್ಟಬ್ಸ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ನಾಯಕ ಏಡನ್ ಮಾರ್ಕ್ರಾಮ್ 4 ರನ್ ಗಳಿಸಿದರೆ, ಮಾರ್ಕೊ ಯಾನ್ಸೆನ್ 5 ರನ್ ಮತ್ತು ಕೇಶವ್ ಮಹಾರಾಜ್ 4 ರನ್ ಬಾರಿಸಿ ಅಜೇಯರಾಗಿ ಮರಳಿದರು. ಬಾಂಗ್ಲಾದೇಶ ಪರ ತಂಜಿಮ್ ಹಸನ್ ಸಾಕಿಬ್ ಅತಿ ಹೆಚ್ಚು 3 ವಿಕೆಟ್ ಕಬಳಿಸಿದರೆ, ತಸ್ಕಿಮ್ ಅಹ್ಮದ್ 2 ವಿಕೆಟ್, ರಿಶಾದ್ ಹೌಸೈನ್ 1 ವಿಕೆಟ್ ಪಡೆದರು.

**ಬಾಂಗ್ಲಾ ತಂಡಕ್ಕೂ ಕಳಪೆ ಆರಂಭ:** ಗುರಿ ಬೆನ್ನಟ್ಟಿದ ಬಾಂಗ್ಲಾದೇಶ ತಂಡಕ್ಕೂ ಉತ್ತಮ ಆರಂಭ ಸಿಗಲಿಲ್ಲ. ತಂಡ 50 ರನ್ ಕಲೆಹಾಕುವುದರೊಳಗೆ ಪ್ರಮುಖ 4 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಆ ಬಳಿಕ ಒಂದಾದ ತೌಹಿದ್ ಹೃದಯೊಯ್ ಹಾಗೂ ಮಹಮ್ಮದುಲ್ಲಾ ಉತ್ತಮ ಜೊತೆಯಾಟವಾಡುವ ಮೂಲಕ ತಂಡವನ್ನು ನೂರರ ಸನಿಹಕ್ಕೆ ತಂದರು. ಈ ವೇಳೆ ಹೃದಯೊಯ್ 37 ರನ್ ಬಾರಿಸಿ ವಿಕೆಟ್ ಕೈಚೆಲ್ಲುವುದರೊಂದಿಗೆ ಬಾಂಗ್ಲಾ ತಂಡವನ್ನು ಸಂಕಷ್ಟಕ್ಕೆ ತಳ್ಳಿದರು. ಈ ಜೋಡಿಯ ಜೊತೆಯಾಟ ಮುರಿದು ಬೀಳುವುದರೊಂದಿಗೆ ಬಾಂಗ್ಲಾ ತಂಡದ ಗೆಲುವಿನ ಆಸೆಯೂ ಕಮರಿತು. ಕೊನೆಯಲ್ಲಿ ಮಹಮ್ಮದುಲ್ಲಾ ಸಿಕ್ಸರ್ ಬಾರಿಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಲು ಪ್ರಯತ್ನಿಸಿದರಾದರೂ ಅದು ಸಾಧ್ಯವಾಗಲಿಲ್ಲ. ಅಂತಿಮವಾಗಿ ತಂಡ 4 ರನ್‌ಗಳಿಂದ ಸೋಲೊಪ್ಪಿಕೊಳ್ಳಬೇಕಾಯಿತು.

# ಪಾಕ್- ಕೆನಡಾ ಕಾಳಗಕ್ಕೆ ಮಳೆ ಆತಂಕ

ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ಕಪ್ ಗೆಲ್ಲುವ ಪ್ರಬಲ ಸ್ಪರ್ಧಿಯಾಗಿ ಅಖಾಡಕ್ಕಿಳಿದಿದ್ದ ಪಾಕಿಸ್ತಾನ ತಂಡ ಕೇವಲ ಎರಡೇ ಎರಡು ಪಂದ್ಯಗಳ ಬಳಿಕ ಟೂರ್ನಿಯಿಂದ ಹೊರಬೀಳುವ ಆತಂಕದಲ್ಲಿದೆ. ತನ್ನ ಮೊದಲ ಪಂದ್ಯದಲ್ಲಿ ಅಮೆರಿಕ ವಿರುದ್ಧ ಸೂಪರ್ ಓವರ್‌ನಲ್ಲಿ ಸೋತಿದ್ದ ಪಾಕಿಸ್ತಾನ ತಂಡ, ಭಾನುವಾರ ನಡೆದ ಟೀಂ ಇಂಡಿಯಾ ವಿರುದ್ಧ ಪಂದ್ಯದಲ್ಲಿ 6 ರನ್‌ಗಳಿಂದ ಸೋಲು ಕಂಡಿತ್ತು. ಹೀಗಾಗಿ ಪಾಕಿಸ್ತಾನ ತಂಡ ಈಗ ಶೂನ್ಯ ಅಂಕ ಮತ್ತು -0.150 ನೆಟ್ ರನ್ ರೇಟ್‌ನೊಂದಿಗೆ ಪಾಯಿಂಟ್ ಪಟ್ಟಿಯಲ್ಲಿ ನಾಲ್ಕನೇ ಸ್ಥಾನದಲ್ಲಿದೆ. ಹೀಗಿರುವಾಗ ಬಾಬರ್ ಪಡೆ, ಕೆನಡಾ ಮತ್ತು ಐರ್ಲೆಂಡ್ ವಿರುದ್ಧ ಉಳಿದಿರುವ ಎರಡು ಪಂದ್ಯಗಳನ್ನು ಗೆಲ್ಲಬೇಕಾಗಿದೆ. ಆದರೆ, ಇಂದು ನಡೆಯಲ್ಲಿರುವ ಕೆನಡಾ ವಿರುದ್ಧದ ಪಂದ್ಯಕ್ಕೆ ಮಳೆ ಅಡ್ಡಿಪಡಿಸುವ ಸಾಧ್ಯತೆಗಳಿವೆ. ಒಂದು ವೇಳೆ ಮಳೆಯಿಂದಾಗಿ ಪಂದ್ಯ ರದ್ದಾದರೆ ಪಾಕ್ ಪಡೆ ಲೀಗ್‌ನಿಂದ ಹೊರಬೀಳಲಿದೆ.




**ಮಳೆ ಸಾಧ್ಯತೆ:** ವಾಸ್ತವವಾಗಿ, ಪಾಕಿಸ್ತಾನ ತಂಡದ ಮುಂದಿನ ಪಂದ್ಯವು ಕೆನಡಾ ವಿರುದ್ಧ ನ್ಯೂಯಾರ್ಕ್‌ನ ನಸ್ಸೌ ಕ್ರೀಡಾಂಗಣದಲ್ಲಿ ನಡೆಯಲಿದೆ. ಈ ಪಂದ್ಯದ ವೇಳೆ ಮಳೆಯಾಗುವ ನಿರೀಕ್ಷೆಯಿದೆ. ನ್ಯೂಯಾರ್ಕ್‌ನಲ್ಲಿ ಇಂದಿನ ಹವಾಮಾನ ಮುನ್ಸೂಚನೆಯ ಪ್ರಕಾರ ಬೆಳಗ್ಗೆ 11ರಿಂದ ಸಂಜೆ 5ರವರೆಗೆ ಶೇ.15ರಿಂದ 25ರಷ್ಟು ಮಳೆಯಾಗುವ ಸಾಧ್ಯತೆ ಇದೆ. ಈ ಪಂದ್ಯ ನ್ಯೂಯಾರ್ಕ್‌ನಲ್ಲಿ ಬೆಳಗ್ಗೆ 10.30ಕ್ಕೆ ಆರಂಭವಾಗಲಿದೆ. ಈ ಅವಧಿಯಲ್ಲಿ ಆರ್ದ್ರತೆಯು ಸುಮಾರು 40-60% ಎಂದು ನಿರೀಕ್ಷಿಸಲಾಗಿದೆ.

**ಲೀಗ್‌ನಿಂದ ಪಾಕ್‌ಗೆ ಗೇಟ್‌ಪಾಸ್:** ಒಂದು ವೇಳೆ ಪಂದ್ಯ ಮಳೆಯಿಂದಾಗಿ ಪೂರ್ಣಗೊಳ್ಳದೆ ರದ್ದಾಗಬೇಕಾದರೆ ಪಾಕಿಸ್ತಾನ ಮತ್ತು ಕೆನಡಾ ತಂಡಗಳಿಗೆ ತಲಾ ಒಂದು ಅಂಕ ನೀಡಲಾಗುವುದು. ಇದು ಕೆನಡಾಗೆ ಸ್ವಲ್ಪ ಲಾಭವನ್ನು ನೀಡುತ್ತದೆ. ಏಕೆಂದರೆ ಅದು ಒಟ್ಟು 3 ಅಂಕಗಳನ್ನು ಗಳಿಸಿದ್ದಂತ್ತಾಗುತ್ತದೆ. ಆದರೆ ಪಾಕಿಸ್ತಾನ ತಂಡಕ್ಕೆ ಈ ಪಂದ್ಯ ರದ್ದಾದರೆ ಅದು ಟೂರ್ನಿಯಿಂದ ಹೊರಹೋಗಲು ಅಧಿಕೃತವಾಗಿ ಬಾಗಿಲು ತೆರೆದಂತ್ತಾಗುತ್ತದೆ. ಏಕೆಂದರೆ ಪಾಕ್ ತಂಡ ಸೂಪರ್ 8 ಹಂತಕ್ಕೇರಬೇಕಾದರೆ, ಉಳಿದಿರುವ ಎರಡು ಪಂದ್ಯಗಳನ್ನು ಗೆಲ್ಲುವುದಲ್ಲದೆ, ಅತ್ಯಧಿಕ ರನ್ ರೇಟ್‌ನಿಂದ ಗೆಲ್ಲಬೇಕಾಗಿದೆ.

ಒಂದು ವೇಳೆ ನಾಳಿನ ಪಂದ್ಯ ಮಳೆಯಿಂದ ರದ್ದಾದರೆ, ಪಾಕ್ ತಂಡಕ್ಕೆ ಕೇವಲ 1 ಅಂಕ ಸಿಗಲಿದೆ. ಕೊನೆಗೆ ಉಳಿಯುವ ಏಕೈಕ ಪಂದ್ಯದಲ್ಲಿ ಪಾಕ್ ಗೆದ್ದರೆ ಅದಕ್ಕೆ ಲಭಿಸುವುದು ಕೇವಲ 3 ಅಂಕ ಮಾತ್ರ. ಅಂತಿಮವಾಗಿ ಪಾಕ್ ತಂಡದಲ್ಲಿ ಒಟ್ಟಾರೆಯಾಗಿ 3 ಅಂಕ ಮಾತ್ರ ಇದ್ದಂತ್ತಾಗುತ್ತದೆ. ಆದರೆ ಎ ಗುಂಪಿನಲ್ಲಿ ಈಗಾಗಲೇ ಮೊದಲ ಎರಡು ಸ್ಥಾನಗಳಲ್ಲಿರುವ ಭಾರತ ಹಾಗೂ ಅಮೆರಿಕ ಬಳಿಕ 4 ಅಂಕಗಳಿವೆ. ಹೀಗಾಗಿ ನಾಳಿನ ಪಂದ್ಯ ನಡೆಯದಿದ್ದರೆ, ಪಾಕ್ ತಂಡಕ್ಕೆ ಸೂಪರ್ 8 ಸುತ್ತಿನ ಬಾಗಿಲು ಅಧಿಕೃತವಾಗಿ ಮುಚ್ಚಲಿದೆ.

## ತೆರಿಗೆ ಕಳ್ಳರ ಮೇಲೆ ಬಿಬಿಎಂಪಿ ಬ್ರಹ್ಮಾಸ್ತ್ರ

# ಆಸ್ತಿ ಸೀಜ್‌ಗೆ ಪ್ಲಾನ್

**ಬೆಂಗಳೂರು:** ಲೋಕಸಭಾ ಚುನಾವಣೆ ಮುಗಿತ್ತಿದ್ದ ಹಾಗೆ ಬಿಬಿಎಂಪಿ ಅಧಿಕಾರಿಗಳು ಅಲರ್ಟ್ ಆಗಿದ್ದಾರೆ. ಇಷ್ಟು ದಿನ ಅಸ್ತಿ ತೆರಿಗೆ ಕಟ್ಟದೆ ವಂಚನೆ ಮಾಡುತ್ತಿದ ಕಟ್ಟಡದ ಮಾಲೀಕರಿಗೆ ಬಿಬಿಎಂಪಿ ಬ್ರಹ್ಮಾಸ್ತ್ರ ಪ್ರಯೋಗಕ್ಕೆ ಮುಂದಾಗಿದೆ. ಸೋಮವಾರದಿಂದ ತೆರಿಗೆ ಕಳ್ಳರ ಬೆನ್ನುಬೀಳಲು ಪ್ಲ್ಯಾನ್ ಮಾಡಿದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

**ತೆರಿಗೆ ಕಳ್ಳರ ಮೇಲೆ ಬಿಬಿಎಂಪಿ ಬ್ರಹ್ಮಾಸ್ತ್ರ:** ಬಿಬಿಎಂಪಿ ಅದಾಯದ ಸಿಂಹಪಾಲು ಆಸ್ತಿ ತೆರಿಗೆಯ ಮೂಲಕ ಶೇಖರಣೆ ಆಗಬೇಕಿದೆ. ಕಳೆದ ಕೆಲವು ವರ್ಷಗಳಿಂದ ಆಸ್ತಿ ತೆರಿಗೆ ಕಟ್ಟದೆ ಕಟ್ಟಡ ಮಾಲೀಕರು ಬಿಬಿಎಂಪಿಗೆ ಟೋಪಿ ಹಾಕುತ್ತಿದ್ದಾರೆ. ಇದರಿಂದ ಬಿಬಿಎಂಪಿಯ ಅಭಿವೃದ್ಧಿ ಕಾರ್ಯಗಳಿಗೆ ಭಾರೀ ಹೊಡೆತ ಬಿದ್ದಿದೆ. ಹೀಗಾಗಿ ಶತಾಯಗತಾಯ ನಿರೀಕ್ಷಿತ ಮಟ್ಟದಲ್ಲಿ ತೆರಿಗೆ ಸಂಗ್ರಹ ಮಾಡಲು ಬಿಬಿಎಂಪಿ ಮೆಗಾ ಪ್ಲ್ಯಾನ್ ಮಾಡಿಕೊಂಡಿದೆ. ಜೂನ್ 10ರಿಂದ ತೆರಿಗೆ ಬಾಕಿ ಉಳಿಸಿಕೊಂಡವರ ಆಸ್ತಿ ಸೀಜ್ ಮಾಡಲು ಪಾಲಿಕೆ ಮುಂದಾಗ್ತಿದೆ. ಆರಂಭಿಕವಾಗಿ ಬೃಹತ್ ಮೊತ್ತ ತೆರಿಗೆ ಬಾಕಿ ಉಳಿಸಿಕೊಂಡವರ ಬೆನ್ನು ಬೀಳಲು ಮುಂದಾಗ್ತಿದೆ. ತೆರಿಗೆ ಪಾವತಿಸಲು ಸಾಕಷ್ಟು ಅವಕಾಶ ಕೊಟ್ಟರೂ ತೆರಿಗೆ ಪಾವತಿಸದಿದ್ದಕ್ಕೆ ಕಠಿಣ ಕ್ರಮ ಕೈಗೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ ಎನ್ನುತ್ತಿದ್ದಾರೆ ಬಿಬಿಎಂಪಿ ಅಧಿಕಾರಿಗಳು.




**ಕೆಲಸಕ್ಕೆ ಬಾರದ ಬಿಬಿಎಂಪಿ ಟ್ಯಾಕ್ಸ್ ಆಫರ್:** ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡ ಕಟ್ಟಡ ಮಾಲೀಕರಿಗೆ ಕಳೆದ ಮೂರು ತಿಂಗಳ ಹಿಂದೆ 50% ರಷ್ಟು ಬಡ್ಡಿ ಮನ್ನಾ ಮಾಡಿ ತೆರಿಗೆ ಕಟ್ಟುವಂತೆ ವಿನಾಯಿತಿ ನೀಡಲಾಗಿತ್ತು. ಆದರೂ ಕೂಡ ಕಟ್ಟಡ ಮಾಲೀಕರು ಬಾಕಿ ಅಸ್ತಿ ತೆರಿಗೆ ಪಾವತಿ ಮಾಡದೇ ಪಾಲಿಕೆಗೆ ವಂಚನೆ ಮಾಡುತ್ತಿದ್ದಾರೆ. ಅಂದಾಜು 2 ಲಕ್ಷಕ್ಕೂ ಅಧಿಕ ಆಸ್ತಿಗಳು ಕಳೆದ ಕೆಲವು ವರ್ಷಗಳಿಂದ ಕ್ರಮವಾಗಿ ತೆರಿಗೆ ಪಾವತಿಸಿಲ್ಲ. ಈಗಾಗಲೇ ಹಲವು ಬಾರಿ ನೋಟೀಸ್ ಹಾಗೂ ಮೊಬೈಲ್ ಮೂಲಕ ಸಂದೇಶ ರವಾನಿಸಿ ತೆರಿಗೆ ಪಾವತಿಗೆ ಪಾಲಿಕೆ ಕೇಳಿಕೊಂಡಿದೆ. ಅದಾಗಿಯೂ ತೆರಿಗೆದಾರರು ಪಾಲಿಕೆ ಮನವಿಗೆ ಕ್ಯಾರೇ ಎನ್ನಲಿಲ್ಲ. ಹೀಗಾಗಿ ತೆರಿಗೆ ವಸೂಲಿಗೆ ಕಟ್ಟಡ ಸೀಜ್ ಮಾಡಲು ಪಾಲಿಕೆ ಅಧಿಕಾರಿಗಳು ಮುಂದಾಗಿದ್ದಾರೆ.

**ಖಾತಾ ಡಿಜಿಟಲೈಸೇಷನ್‌ಗೆ ತೆರಿಗೆ ಬಾಕಿ ಅಡ್ಡಿ:** ಬ್ಯಾಂಡ್ ಬೆಂಗಳೂರು ಯೋಜನೆ ಅಡಿಯಲ್ಲಿ ಬೆಂಗಳೂರಿನ ಅಷ್ಟೂ ಸ್ವತ್ತುಗಳ ಮಾಹಿತಿಯನ್ನು ಡಿಜಿಟಲೈಸೇಷನ್ ಮಾಡುವ ನಿಟ್ಟಿನಲ್ಲಿ ಪಾಲಿಕೆ ಕೆಲಸ ಆರಂಭಿಸಿದೆ. ಇದಕ್ಕೆ ಇತ್ತೀಚೆಗಷ್ಟೇ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ವಿಧಾನಸೌಧದಲ್ಲಿ ಚಾಲನೆ ಕೊಟ್ಟಿದ್ದರು. ಆದರೆ ಖಾತಾ ಡಿಜಿಟಲೈಸೇಷನ್ ಕೆಲಸ ಪೂರ್ಣಗೊಳಿಸಲು ಲಕ್ಷಾಂತರ ಸ್ವತ್ತುಗಳ ತೆರಿಗೆ ಬಾಕಿ ಉಳಿದುಕೊಂಡಿರುವುದು ಅಡ್ಡಿಯಾಗಿದೆ. ಹೀಗಾಗಿ ವಾಣಿಜ್ಯ ತೆರಿಗೆ ಹಾಗೂ ಆಸ್ತಿ ತೆರಿಗೆ, ಎರಡೂ ಮಾದರಿಯ ತೆರಿಗೆ ಸಂಗ್ರಹಕ್ಕೆ ಆಸ್ತಿ ಸೀಜ್ ಮಾಡುವ ಕೆಲಸಕ್ಕೆ ಪಾಲಿಕೆ ಮುಂದಾಗ್ತಿದೆ. ಆದರೆ ಬಡವರಿಗೊಂದು ನ್ಯಾಯ ಶ್ರೀಮಂತರಿಗೊಂದು ನ್ಯಾಯ ಮಾಡಬಾರದು ಎಂದು ಸಾರ್ವಜನಿಕರು ಕೇಳಿಕೊಂಡಿದ್ದಾರೆ.

**ತೆರಿಗೆ ಕಟ್ಟದದವರ ಆಸ್ತಿ ಸೀಜ್ ಮಾಡಲಿರುವ ಪಾಲಿಕೆ:** ಬಿಬಿಎಂಪಿ ಹೇಳಿದಂತೆ ತೆರಿಗೆ ಬಾಕಿದಾರರ ಆಸ್ತಿ ಪಾಲಿಕೆಯಿಂದ ಸೀಜ್ ಆದರೆ ಸ್ವತ್ತಿನ ಮಾಲೀಕರಿಗೆ ತಲೆನೋವು ಉಂಟಾಗಲಿದೆ. ತೆರಿಗೆ ಕಟ್ಟಿ ಕ್ಲಿಯರ್ ಆಗುವವರೆಗೆ ನಿರ್ದಿಷ್ಟ ಸ್ವತ್ತಿನ ಮೇಲೆ ಮಾಲೀಕರಿಗೆ ಸಾಲಕ್ಕಾಗಿ ಅಡ ಇಡುವುದಕ್ಕಾಗಲಿ, ಇತರೆ ವ್ಯವಹಾರಕ್ಕಾಗಲಿ ಬಳಿಸಿಕೊಳ್ಳಲು ಸಾಧ್ಯವಿಲ್ಲ. ವಾಣಿಜ್ಯ ಕಟ್ಟಡಗಳು ಸೀಜ್ ಆದರೆ ಅದನ್ನು ಬಾಡಿಗೆ ಕೊಟ್ಟು ಹಣ ರಿಕವರಿ ಮಾಡಿಕೊಳ್ಳುವ ಲೆಕ್ಕಾಚಾರವೂ ಪಾಲಿಕೆಗಿದೆ. ಒಟ್ಟಾರೆ ಈಗಲಾದರೂ ಬಿಬಿಎಂಪಿಯ ಬ್ರಹ್ಮಾಸ್ತ್ರಕ್ಕೆ ತೆರಿಗೆ ಬಾಕಿದಾರರು ಬಗ್ಗುತ್ತಾರಾ ಎಂದು ಕಾದು ನೋಡಬೇಕಿದೆ.

## ಪ್ರಜ್ವಲ್ ವಿರುದ್ಧದ ಅತ್ಯಾಚಾರ ಕೇಸ್

# ಬಸವನಗುಡಿ ನಿವಾಸದಲ್ಲಿ ಎಸ್‌ಐಟಿ ಮಹಜರು

**ಬೆಂಗಳೂರು:** ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ, ಎಸ್‌ಐಟಿ ಪೊಲೀಸರು ಬಸವನಗುಡಿ ನಿವಾಸಕ್ಕೆ ಅವರನ್ನು ಕರೆತಂದು ಮಹಜರು ನಡೆಸಿದ್ದಾರೆ.

ಪ್ರಜ್ವಲ್ ರೇವಣ್ಣ ಅವರನ್ನು ಸ್ಥಳ ಮಹಜರಿಗೆ ಕರೆತಂದ ವೇಳೆ ಅವರ ತಾಯಿ ಭವಾನಿ ರೇವಣ್ಣ ಮನೆಯ ಮೊದಲ ಮಹಡಿಯಲ್ಲಿರುವ ತುಳಸಿಕಟ್ಟೆಗೆ ಪೂಜೆ ಸಲ್ಲಿಸುತ್ತಿದ್ದರು. ಈ ವೇಳೆ ಅಧಿಕಾರಿಗಳು ಮಹಜರು ಮುಕ್ತಾಯವಾಗುವವರೆಗೂ ಮನೆಯ ಪ್ರತ್ಯೇಕ ಜಾಗದಲ್ಲಿ ಇರುವಂತೆ ಮನೆಯ ಸದಸ್ಯರಿಗೆ ಸೂಚಿಸಿದರು. ಅಲ್ಲದೇ ಪ್ರಜ್ವಲ್‌ರನ್ನು ಭೇಟಿಯಾಗಲು ಮನೆಯ ಸದಸ್ಯರಿಗೆ ಅವಕಾಶ ನೀಡಲಿಲ್ಲ.

ಹೇಳಿಕೆ ದಾಖಲಿಸಿಕೊಳ್ಳಲು ಅಧಿಕಾರಿಗಳು ಪ್ರಿಂಟರ್ ಹಾಗೂ ಕಂಪ್ಯೂಟರ್ ತೆಗೆದುಕೊಂಡು ಹೋಗಿದ್ದಾರೆ. ಇನ್ನೂ ಮಹಜರು ಕಾರ್ಯ ನಡೆಯುತ್ತಿದ್ದು, ಪ್ರಕರಣ ಸಂಬಂಧ ಮಹತ್ವದ ಸಾಕ್ಷ್ಯಗಳನ್ನು ಅಧಿಕಾರಿಗಳು ಕಲೆಹಾಕುತ್ತಿದ್ದಾರೆ.



ಪ್ರಜ್ವಲ್ ರೇವಣ್ಣ ಎಸ್‌ಐಟಿ ಕಸ್ಟಡಿ ಇಂದು ಅಂತ್ಯವಾಗಲಿದೆ. ಇಂದು ಪ್ರಜ್ವಲ್ ರೇವಣ್ಣನನ್ನ ಅಧಿಕಾರಿಗಳು ಕೋರ್ಟ್‌ಗೆ ಹಾಜರುಪಡಿಸಲಿದ್ದಾರೆ. ಪ್ರಜ್ವಲ್ ವಿರುದ್ಧದ ಇನ್ನೂ ಎರಡು ಪ್ರಕರಣಗಳ ತನಿಖೆ ಬಾಕಿ ಹಿನ್ನೆಲೆ ಪುನಃ ಕಸ್ಟಡಿಗೆ ಕೇಳುವ ಸಾಧ್ಯತೆ ಇದೆ. ಪ್ರತಿ ಪ್ರಕರಣದ ತನಿಖೆಯನ್ನ ಪ್ರತ್ಯೇಕವಾಗಿ ನಡೆಸುತ್ತಿರುವ ಎಐಟಿ, ಸದ್ಯ ಈಗ ಹೊಳೆನರಸೀಪುರ ಟೌನ್ ಠಾಣೆ ಪ್ರಕರಣ ಸಂಬಂಧ ತನಿಖೆ ನಡೆಸ್ತಿದೆ. ಲೈಂಗಿಕ ದೌರ್ಜನ್ಯ ಮತ್ತು ಅತ್ಯಾಚಾರ ಸಂಬಂಧ ಕಳೆದ ಹತ್ತು ದಿನಗಳಿಂದ ಪ್ರಜ್ವಲ್ ವಿಚಾರಣೆ ನಡೆಯುತ್ತಿದೆ.

ಬಂಧನಕ್ಕೊಳಗಾಗಿರುವ ಆರೋಪಿ ಪ್ರಜ್ವಲ್ ಹಲವು ಮಹಿಳೆಯ ಜೊತೆ ಇದ್ದಾರೆ ಎನ್ನಲಾದ ವೀಡಿಯೋ ವೈರಲ್ ಆಗಿತ್ತು. ವೀಡಿಯೋಗಳು ವೈರಲ್ ಆಗುತ್ತಿದ್ದಂತೆ ಅವರು ಜರ್ಮನಿಗೆ ತೆರಳಿ ತಲೆಮರೆಸಿಕೊಂಡಿದ್ದರು. ಸುಮಾರು 34 ದಿನಗಳ ಕಾಲ ಯಾರ ಸಂಪರ್ಕಕ್ಕೂ ಸಿಗದೇ ಜರ್ಮನಿಯಲ್ಲಿದ್ದರು. ಬಳಿಕ ಭಾರತಕ್ಕೆ ಮರಳುತ್ತಿದ್ದಂತೆ ಎಸ್‌ಐಟಿ ಅಧಿಕಾರಿಗಳು ಅವರನ್ನು ಬಂಧಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com